28 November 2025 Friday
SINCE 1957
ಬೆಳಗಿನ ಪ್ರಾದೇಶಿಕ ದಿನಪತ್ರಿಕೆ

# ವರ್ತಮಾನ

ಸಂಪಾದಕ: ಕೆ.ಎನ್.ರವಿ
ಭವಿಷ್ಯದ ಮುನ್ನುಡಿ
info.varthaman@gmail.com

**ಭಾವನಾಂತರಂಗ**

ಆಡುವ ಮಾತನ್ನು ಆ ಸಮಯದಲ್ಲೇ ಆಡಬೇಕು!
ಮಾತನಾಡುವ ಸಮಯದಲ್ಲಿ ಮೌನ ತಳೆದರೆ
ಜೀವನದಲ್ಲಿ ಎಷ್ಟೋ ವಿಷಯಗಳು
ಮನದಾಳದಲ್ಲೇ ನಿಂತು ಬಿಡುತ್ತವೆ!
*ಸ್ನೇಹಾ ಆನಂದ್*

**ಒಂದೊಳ್ಳೆ ಮಾತು**

ಅವಕಾಶಗಳು
ಸೂರ್ಯೋದಯವಿದ್ದಂತೆ
ಸ್ವೀಕರಿಸುವುದೋ
ಬೇಡವೋ
ಎಂದು ಯೋಚಿಸುತ್ತ
ಕುಳಿತರೆ
ಸೂರ್ಯಾಸ್ತ ಆಗಿಬಿಡುತ್ತದೆ
*ಮೈಲಾರ ಸಾವಿತ್ರಿಬಾಯಿ*

9742504916 | ಮೈಸೂರು | ಮಂಡ್ಯ | ಬೆಂಗಳೂರು | ಹಾಸನ | ಚಾಮರಾಜನಗರ | ರಾಮನಗರ | ಬೆಂಗಳೂರು ಗ್ರಾಮಾಂತರ | ಕೊಡಗು | ಕಾರ್ಯನಿರ್ವಾಹಕ ಸಂಪಾದಕ - ಕೆ.ಆರ್.ಮಿಹಿರ್ ಆಕಾಶ್

VARTHAMAN Volume: 69 Issue: 42 Pages: 06 KA/SK/MYS/1098/2023-2025 R.N.I. No.3577/1957 www.varthaman.in Price-3

## ಮುಂದಿನ ಸಿಎಂ ಯಾರು? ಚರ್ಚಿಸಿ ನಿರ್ಧಾರ: ಖರ್ಗೆ



**ಬೆಂಗಳೂರು:** ರಾಜ್ಯ ರಾಜಕೀಯದಲ್ಲಿ ನಾಯಕತ್ವ ಬದಲಾವಣೆ ವಿಚಾರ ತಾರಕಕ್ಕೇರಿರುವ ಹಿನ್ನೆಲೆಯಲ್ಲಿ ಪಕ್ಷದ ಹಿರಿಯ ನಾಯಕರೊಂದಿಗೆ ನವದೆಹಲಿಯಲ್ಲಿ ಸಭೆ ಕರೆಯುವುದಾಗಿ ಕಾಂಗ್ರೆಸ್ ಅಧ್ಯಕ್ಷ ಮಲ್ಲಿಕಾರ್ಜುನ ಖರ್ಗೆ ಗುರುವಾರ ತಿಳಿಸಿದರು.

ದೆಹಲಿಯ ಇಂದಿರಾ ಕಾಂಗ್ರೆಸ್ ಭವನದಲ್ಲಿ ಹೈಕಮಾಂಡ್ ಸಭೆ ನಿಗದಿ ಮಾಡಿರುವ ಹಿನ್ನೆಲೆಯಲ್ಲಿ ಗುರುವಾರ ಎಐಸಿಸಿ ಅಧ್ಯಕ್ಷ ಮಲ್ಲಿಕಾರ್ಜುನ ಖರ್ಗೆ ಅವರು ಬೆಂಗಳೂರಿನಿಂದ ದೆಹಲಿಗೆ ತೆರಳಿದರು.

ದೆಹಲಿಗೆ ತೆರಳುವುದಕ್ಕೂ ಮುನ್ನ ಬೆಂಗಳೂರಿನಲ್ಲಿ ಸುದ್ದಿಗಾರರೊಂದಿಗೆ ಮಾತನಾಡಿದ ಅವರು, ನಾನು ಎಲ್ಲರನ್ನೂ ಕರೆದು ಚರ್ಚೆ ಮಾಡ್ತೇನೆ. ರಾಹುಲ್ ಗಾಂಧಿ ಕೂಡ ಸಭೆಯಲ್ಲಿ ಭಾಗವಹಿಸುತ್ತಾರೆ. ಮುಖ್ಯಮಂತ್ರಿ ಸಿದ್ದರಾಮಯ್ಯ ಹಾಗೂ ಉಪ ಮುಖ್ಯಮಂತ್ರಿ ಡಿಕೆ.ಶಿವಕುಮಾರ್ ಇಬ್ಬರೂ ಬರುತ್ತಾರೆ. ಹೈಕಮಾಂಡ್ ಅಂದರೆ ಏಕಾಂಗಿ ಅಲ್ಲ. ಒಂದು ಟೀಮ್. ಹೈಕಮಾಂಡ್ ಟೀಮ್ ಕೂತು ಚರ್ಚಿಸಿ ನಿರ್ಣಯ ಕೈಗೊಳ್ಳುತ್ತದೆ ಎಂದು ಹೇಳಿದರು.

ದೆಹಲಿಯ ಕಾಂಗ್ರೆಸ್ ಭವನದಲ್ಲಿಂದು ರಾಜ್ಯ ಕಾಂಗ್ರೆಸ್ ಪಾಲಿನ ನಿರ್ಣಾಯಕ ಸಭೆ ನಡೆಯಲಿದೆ. ಎಐಸಿಸಿ ಅಧ್ಯಕ್ಷ ಮಲ್ಲಿಕಾರ್ಜುನ ಖರ್ಗೆ, ರಾಹುಲ್ ಗಾಂಧಿ, ವೇಣುಗೋಪಾಲ ಹಾಗೂ ರಾಜ್ಯ ಉಸ್ತುವಾರಿ ರಣದೀಪ್ ಸುರ್ಜೇವಾಲಾ ಭಾಗವಹಿಸುವರು. ಯಾರು ಸಿಎಂ ಬೇಕು ಅನ್ನೋದರ ಬಗ್ಗೆ ನಿರ್ಣಯ ಕೈಗೊಳ್ಳುವ ಸಾಧ್ಯತೆಯಿದೆ ಎನ್ನಲಾಗಿದೆ.

ಈ ನಡುವೆ ರಾಜ್ಯದಲ್ಲಿ ಹೆಚ್ಚುತ್ತಿರುವ ನಾಯಕತ್ವ ಗದ್ದಲದ ಮಧ್ಯೆ, ಸಿದ್ದರಾಮಯ್ಯ ಅವರು ಗುರುವಾರ ತಮ್ಮ ನಿವಾಸದಲ್ಲಿ ಜಿ.ಪರಮೇಶ್ವರ, ಸತೀಶ್ ಜಾರಕಿಹೊಳಿ, ಎಚ್.ಸಿ. ಮಹದೇವಪ್ಪ, ಕೆ.ವೆಂಕಟೇಶ್ ಮತ್ತು ಕೆ.ಎನ್.ರಾಜಣ್ಣ ಸೇರಿದಂತೆ ಹಿರಿಯ ಸಚಿವರು ಮತ್ತು ಆಪ್ತ ನಾಯಕರನ್ನು ಭೇಟಿಯಾಗಿ ಮಾತುಕತೆ ನಡೆಸಿದ್ದಾರೆ.

# ಹೈ ಅಂಗಳಕ್ಕೆ 'ಗದ್ದುಗೆ ಗುದ್ದಾಟ'

## ಮುಖ್ಯಮಂತ್ರಿ ಬೆಂಬಲಿಗ ಆರು ಸಚಿವರು ಇಂದು ದೆಹಲಿ 'ದಂಡಯಾತ್ರೆ'



**ಬೆಂಗಳೂರು:** ಮುಖ್ಯಮಂತ್ರಿ ಹುದ್ದೆಗಾಗಿ ರಾಜ್ಯ ಕಾಂಗ್ರೆಸ್‌ನಲ್ಲಿ ನಡೆಯುತ್ತಿರುವ ಬಣ ಬಡಿದಾಟ ಜೋರಾಗಿದೆ. ಸಿದ್ದರಾಮಯ್ಯ ಮತ್ತು ಡಿ.ಕೆ. ಶಿವಕುಮಾರ್ ಬಣಗಳ 'ಹೈಡ್ರಾಮ' ಈಗ ದೆಹಲಿಗೆ ಶಿಫ್ಟ್ ಆಗಿದೆ. ಕೊನೆಗೂ ಬಿಕ್ಕಟ್ಟು ಶಮನಕ್ಕೆ ಹೈಕಮಾಂಡ್ ಮುಂದಾಗಿದೆ.

ರಾಜ್ಯ ರಾಜಕೀಯದ ಎಲ್ಲಾ ಬೆಳವಣಿಗೆಗಳ ಬಗ್ಗೆ ಬೆಂಗಳೂರು ಪ್ರವಾಸದ ಮೂಲಕ ಮಾಹಿತಿ ಸಂಗ್ರಹಿಸಿರುವ ಮಲ್ಲಿಕಾರ್ಜುನ ಖರ್ಗೆ ಅವರು, ಇಂದು ರಾಹುಲ್ ಗಾಂಧಿಗೆ ಮಾಹಿತಿ ನೀಡಿದ್ದಾರೆ ಎನ್ನಲಾಗಿದೆ.

## ನನ್ನನ್ನು ಯಾರೂ ಕರೆದಿಲ್ಲ: ಡಿಕೆಶಿ ಮುಂಬೈ ಯಾತ್ರೆ




**ಬೆಂಗಳೂರು:** ನನ್ನನ್ನು ಯಾರೂ ದೆಹಲಿಗೆ ಬರುವಂತೆ ಕರೆದಿಲ್ಲ ಎಂದು ಡಿಸಿಎಂ ಡಿಕೆ ಶಿವಕುಮಾರ್ ತಿಳಿಸಿದರು.

ಮಾಧ್ಯಮಗಳ ಜೊತೆ ಗುರುವಾರ ಮಾತನಾಡಿದ ಅವರು, ನಾನು ಖಾಸಗಿ ಕಾರ್ಯಕ್ರಮದಲ್ಲಿ ಭಾಗವಹಿಸಲು ಇಂದು ನಾನು ಮುಂಬೈಗೆ ಹೋಗುತ್ತೇನೆ. ಇಂದು ಸಂಜೆ ನಾನು ಹೋಗಿ ರಾತ್ರಿಯೇ ಮರಳುತ್ತೇನೆ.ನಾಳೆ ಇಂದಿರಾಗಾಂಧಿ ಅವರು ಆರಂಭಿಸಿದ ಅಂಗನವಾಡಿ ಯೋಜನೆಗಳಿಗೆ 50 ವರ್ಷ ತುಂಬಲಿದೆ. ಈ ಕಾರ್ಯಕ್ರಮದಲ್ಲಿ ನಾನು ಭಾಗಿಯಾಗುತ್ತೇನೆ. ಬೆಂಗಳೂರಿನಲ್ಲಿ ಇರಲಿದ್ದೇನೆ ಎಂದು ಹೇಳಿದರು.

ಡಿ.ಕೆ.ಶಿವಕುಮಾರ್ ಅವರು ಶನಿವಾರ ಹೈಕಮಾಂಡ್ ಭೇಟಿಗೆ ದೆಹಲಿಗೆ ಹೋಗಲಿದ್ದಾರೆ. ಸಿದ್ದರಾಮಯ್ಯನವರನ್ನು ಹೈಕಮಾಂಡ್ ಕರೆದಿದ್ದು ಇಬ್ಬರ ಜೊತೆ ಮಾತುಕತೆ ನಡೆಸಲಿದ್ದಾರೆ ಎನ್ನಲಾಗಿದೆ.

## ಹೈಕಮಾಂಡ್ ಕರೆದರೆ ದೆಹಲಿಗೆ ಹೋಗುವೆ: ಸಿಎಂ



**ಬೆಂಗಳೂರು:** ಹೈಕಮಾಂಡ್ ದೆಹಲಿಗೆ ಕರೆ ದರೆ ಹೋಗುತ್ತೇನೆ. ಅವರು ನನಗೆ ಕರೆ ಮಾಡಲಿ ನೋಡೋಣ ಎಂದು ಮುಖ್ಯಮಂತ್ರಿ ಸಿದ್ದರಾಮಯ್ಯ ತಿಳಿಸಿದರು.

ನಗರದಲ್ಲಿ ಗುರುವಾರ ಗೃಹ ಕಚೇರಿಯಲ್ಲಿ ಮಾಧ್ಯಮ ದವರ ಜೊತೆ ಮಾತನಾಡಿದ ಅವರು, ಮಲ್ಲಿಕಾ ರ್ಜುನ ಖರ್ಗೆ ಹೇಳಿದ್ದಾರೆ ಅಂದ ಮೇಲೆ ನಾವು ಕೇಳಲೇಬೇಕು. ಹೈಕ ಮಾಂಡ್ ಏನೇ ತೀರ್ಮಾನ ಮಾಡಿದರೂ ಪಾಲಿಸುತ್ತೇನೆ ಎಂದು ಪುನರುಚ್ಚರಿಸಿದರು. ಕರ್ನಾಟಕ ಕಾಂಗ್ರೆಸ್‌ನಲ್ಲಿ ನಡೆಯುತ್ತಿರುವ ಅಧಿಕಾರ ಸಂಘರ್ಷದ ನಡುವೆಯೇ, ಪಕ್ಷದ ಹೈಕಮಾಂಡ್ ಕರೆದರೆ ದೆಹಲಿಗೆ ಭೇಟಿ

ಪುಟ 2ಕ್ಕೆ

ದೆಹಲಿ ಕಾಂಗ್ರೆಸ್ ಕಚೇರಿಯಲ್ಲಿ ಇಂದು ಎಐಸಿಸಿ ಅಧ್ಯಕ್ಷ ಮಲ್ಲಿಕಾರ್ಜುನ ಖರ್ಗೆ, ರಾಹುಲ್ ಗಾಂಧಿ, ವೇಣುಗೋಪಾಲ್ ಅವರು ಸಭೆ ನಡೆಸಿದ್ದಾರೆ. ಹೈಕಮಾಂಡ್ ಅಂತಿಮ ನಿರ್ಧಾರ ಕೈಗೊಳ್ಳಲು ಮುಂದಾಗಿದೆ ಎನ್ನಲಾಗಿದೆ.

6 ಸಚಿವರ ದೆಹಲಿ ಯಾತ್ರೆ: ಈ ನಡುವೆ ಮುಖ್ಯಮಂತ್ರಿ ಸಿದ್ದರಾಮಯ್ಯ ಬೆಂಬಲಿಗರಾ 6 ಹಿರಿಯ ಸಚಿವರು ದೆಹಲಿ ಯಾತ್ರೆಗೆ ಮುಂದಾಗಿದ್ದಾರೆ. ಗೃಹ ಸಚಿವ ಜಿ.ಪರಮೇಶ್ವರ್ ನೇತೃತ್ವದಲ್ಲಿ ಸಚಿವರಾದ ಎಚ್.ಕೆ. ಪಾಟೀಲ್, ಎಚ್.ಸಿ. ಮಹದೇವಪ್ಪ, ಸತೀಶ್ ಜಾರಕಿಹೊಳಿ ಮತ್ತು ಇನ್ನಿಬ್ಬರು ಸಚಿವರು ಶುಕ್ರವಾರ ದೆಹಲಿ ಯಾತ್ರೆಗೆ ಮುಂದಾಗಿದ್ದಾರೆ. ಮುಖ್ಯಮಂತ್ರಿ ಸಿದ್ದರಾಮಯ್ಯ ಅವರನ್ನು ಬದಲಿಸಬಾರದು ಎಂದು ಹೈಕಮಾಂಡ್ ಮೇಲೆ ಒತ್ತಡ ಹಾಕಲು ಸಿದ್ಧವಾಗಿದ್ದಾರೆ ಎನ್ನಲಾಗಿದೆ.

ರಾಜ್ಯದಲ್ಲಾಗುತ್ತಿರುವ ಬೆಳವಣಿಗೆ ಬಗ್ಗೆ ನಮಗೆ ಸಾಕಷ್ಟು ಗೊಂದಲಗಳಿವೆ. ನಾಳೆಯೇ ದೆಹಲಿಗೆ ಹೋಗಿ ಕ್ಲಾರಿಟಿ ಪಡೆದುಕೊಳ್ಳುತ್ತೇವೆ ಎಂಬ ವಿಚಾರವನ್ನು ಪರಮೇಶ್ವರ್ ಸಿಎಂ ಮುಂದಿಟ್ಟಿದ್ದಾರೆ. ಅದಕ್ಕೆ ಸಿದ್ದರಾಮಯ್ಯ ಗ್ರೀನ್ ಸಿಗ್ನಲ್ ಕೊಟ್ಟಿದ್ದಾರೆನ್ನಲಾಗಿದೆ. ಕಾಂಗ್ರೆಸ್ ಸರ್ಕಾರಕ್ಕೆ ಎರಡೂವರೆ ವರ್ಷದ ತುಂಬಿದ ಬೆನ್ನಲ್ಲೇ ಸಿಎಂ ಕುರ್ಚಿ ಕದನ ಏರ್ಪಟ್ಟಿದೆ. ಸಿಎಂ ಮತ್ತ ಡಿಸಿಎಂ ಹೈಕಮಾಂಡ್ ಕರೆದರೆ ನಾವು ಹೋಗ್ತೀವಿ ಎಂದು ತಿಳಿಸಿದ್ದಾರೆ.

## ಕೊಟ್ಟ ಮಾತು ಉಳಿಸಿಕೊಳ್ಳುವುದೇ ದೊಡ್ಡ ಶಕ್ತಿ: ಡಿಕೆಶಿ 'ಮರ್ಮದೇಟು'



ಬೆಂಗಳೂರು: ರಾಜ್ಯ ಕಾಂಗ್ರೆಸ್‌ನಲ್ಲಿ ಅಧಿಕಾರ ಹಸ್ತಾಂತರದ ಗುದ್ದಾಟದ ನಡುವೆಯೇ ಉಪಮುಖ್ಯಮಂತ್ರಿ ಡಿ.ಕೆ.ಶಿವಕುಮಾರ್ ಅವರು ಸಾಮಾಜಿಕ ಮಾಧ್ಯಮದಲ್ಲಿ ಹಂಚಿಕೊಂಡಿರುವ 'ಕೊಟ್ಟ ಮಾತು ಉಳಿಸಿಕೊಳ್ಳುವುದೇ ದೊಡ್ಡ ಶಕ್ತಿ' ಎಂಬ ಪೋಸ್ಟ್ ಕುತೂಹಲ ಮೂಡಿಸಿದೆ.

ಜಗತ್ತಿನ ಅತಿದೊಡ್ಡ ಶಕ್ತಿ ಎಂದರೆ ಕೊಟ್ಟ ಮಾತನ್ನು ಉಳಿಸಿಕೊಳ್ಳುವುದು. ನ್ಯಾಯಾಧೀಶರಾಗಲಿ, ಅಧ್ಯಕ್ಷರಾಗಲಿ, ನಾನಾಗಲಿ, ಬೇರೆ ಯಾರೇ ಆಗಿರಲಿ ಎಲ್ಲರೂ ನುಡಿದಂತೆ ನಡೆಯಬೇಕು. ಮಾತು ಉಳಿಸಿಕೊಳ್ಳುವುದು ಮುಖ್ಯ ಎಂದು ಅವರು ಪೋಸ್ಟ್ ಮಾಡಿದ್ದಾರೆ. ಇದು ಸಿಎಂ ಸಿದ್ದರಾಮಯ್ಯ ಅವರಿಗೆ ನೀಡಿರುವ ತಿರುಗೇಟು ಎಂದು ರಾಜಕೀಯ ವಲಯದಲ್ಲಿ ಅರ್ಥೈಸಲಾಗುತ್ತಿದೆ.

ರಾಜ್ಯ ಸರ್ಕಾರ ಎರಡೂವರೆ ವರ್ಷ ಪೂರೈಸುತ್ತಿದ್ದಂತೆ ಅಧಿಕಾರ ಹಸ್ತಾಂತರ ಮತ್ತು ಸಂಪುಟ ಪುನರ್ ರಚನೆ ಚರ್ಚೆ ಮುನ್ನೆಲೆಗೆ ಬಂದಿದೆ. ಸಿದ್ದರಾಮಯ್ಯ ಮತ್ತು ಡಿಕೆಶಿ ಬಣಗಳ ನಡುವೆ ಜಟಾಪಟಿ ಜೋರಾಗಿದ್ದು, ವರಿಷ್ಠರನ್ನು ಭೇಟಿ ಮಾಡಿ ಮಾತುಕತೆ ನಡೆಸುತ್ತಿದ್ದಾರೆ. ಚಳಿಗಾಲದ ಅಧಿವೇಶನದ ಪ್ರಾರಂಭಕ್ಕೂ ಮೊದಲು ಗೊಂದಲ ಬಗೆಹರಿಸುವಂತೆ ಮನವಿ ಮಾಡಿದ್ದಾರೆ. ಸ್ವತಃ ರಾಹುಲ್ ಗಾಂಧಿ ಅವರೇ ಡಿಕೆಶಿ ಅವರಿಗೆ ಕರೆ ಮಾಡಿ, ತಾಳ್ಮೆಯಿಂದ ಇರುವಂತೆ ಹೇಳಿದ್ದಾರೆ ಎನ್ನಲಾಗಿದೆ.

## ಸಿಎಂ ಬದಲಿಸುವ ಪರಿಸ್ಥಿತಿ ಸದ್ಯಕ್ಕಿಲ್ಲ

### ಸಿದ್ದರಾಮಯ್ಯ ಕೆಳಗಿಳಿಸಲು ಯಾವ ಕಾರಣವೂ ಇಲ್ಲ: ಯತೀಂದ್ರ



**ಮೈಸೂರು:** ಸಿದ್ದರಾಮಯ್ಯ ಅವರನ್ನು ಅಧಿಕಾರದಿಂದ ಕೆಳಗಿಳಿಸಲು ಯಾವ ಕಾರಣಗಳೂ ಇಲ್ಲ ಎಂದು ವಿಧಾನಪರಿಷತ್ ಸದಸ್ಯ ಯತೀಂದ್ರ ಸಿದ್ದರಾಮಯ್ಯ ಹೇಳಿದರು.

ನಗರದಲ್ಲಿ ಗುರುವಾರ ಪತ್ರಕರ್ತರೊಂದಿಗೆ ಮಾತನಾಡಿದ ಅವರು, ರಾಜ್ಯದಲ್ಲಿ ಮುಖ್ಯಮಂತ್ರಿ ಬದಲಿಸುವ ಪರಿಸ್ಥಿತಿ ಸದ್ಯಕ್ಕಿಲ್ಲ. ಮುಖ್ಯಮಂತ್ರಿ ಬದಲಾವಣೆ ಮಾಡುತ್ತೇವೆ ಎಂದು ಹೈಕಮಾಂಡ್ ಸಹ ಒಮ್ಮೆಯೂ ಹೇಳಿಲ್ಲ. ಆದರೂ ಹೈಕಮಾಂಡ್ ತೀರ್ಮಾನವೇ ಅಂತಿಮ. ಉಳಿದ ಎರಡೂವರೆ ವರ್ಷವೂ ಸಿದ್ದರಾಮಯ್ಯ ಮುಖ್ಯಮಂತ್ರಿ ಆಗಿರುತ್ತಾರೆ ಎಂಬ ವಿಶ್ವಾಸ ನನಗಿದೆ ಎಂದು ಹೇಳಿದರು.

ಸಿದ್ದರಾಮಯ್ಯ ಅವರ ಮೇಲೆ ಯಾವ ಆರೋಪವೂ ಇಲ್ಲ. ಹೀಗಿರುವಾಗ ನಾಯಕತ್ವ ಬದಲಾವಣೆ ಚರ್ಚೆಯೇ ಬರಬಾರದಿತ್ತು. ಆದರೂ ಕೆಲವರು ಮುಖ್ಯಮಂತ್ರಿ ಬದಲಾವಣೆ ಬಗ್ಗೆ ಮಾತನಾಡುತ್ತಿದ್ದಾರೆ.

ನನಗಿರುವ ಮಾಹಿತಿ ಪ್ರಕಾರ, ಅಧಿಕಾರ ಹಂಚಿಕೆಯ ಸೂತ್ರವೇ ರಚನೆಯಾಗಿಲ್ಲ. ಸಿದ್ದರಾಮಯ್ಯ ಅವರಾಗಲಿ, ಕೆಲವು ಹಿರಿಯ ಸಚಿವರಾಗಲಿ ಆ ಬಗ್ಗೆ ಯಾವತ್ತೂ ಮಾತನಾಡಿಯೇ ಇಲ್ಲ. ಅಂದರೆ ಅಧಿಕಾರ ಹಂಚಿಕೆಯ ಮಾತುಕತೆ ನಡೆದಿಲ್ಲವೆಂದೇ ಅರ್ಥ ತಾನೆ? ಎಂದು ಪ್ರಶ್ನಿಸಿದರು.

ಯಾರಿಗೆ ಎಷ್ಟು ಶಾಸಕರ ಬೆಂಬಲವಿದೆ ಎನ್ನುವ ಚರ್ಚೆ ಬೇಡ. ಅದು ನಮ್ಮ ಪಕ್ಷದ ಆಂತರಿಕ ವಿಚಾರ. ಎಲ್ಲಾ ಶಾಸಕರ ಬೆಂಬಲ ಸಿದ್ದರಾಮಯ್ಯ ಅವರಿಗಿದೆ ಎಂದರು. ಡಿ.ಕೆ. ಶಿವಕುಮಾರ್ ಅವರನ್ನು ಸಿಎಂ ಮಾಡಬೇಕು ಎಂಬ ಆದಿಚುಂಚನಗಿರಿ ಪೀಠಾಧ್ಯಕ್ಷ ನಿರ್ಮಲಾನಂದನಾಥ ಅವರ ಹೇಳಿಕೆಗೆ ಪ್ರತಿಕ್ರಿಯಿಸಿದ ಯತೀಂದ್ರ, ಯಾರನ್ನು ಸಿಎಂ ಮಾಡಬೇಕು, ಮಾಡಬಾರದು ಎಂಬುದು ನಮ್ಮ ಪಕ್ಷದ ಆಂತರಿಕ ವಿಚಾರ. ಅದು ನಮ್ಮ ಶಾಸಕರು ಮತ್ತು ಹೈಕಮಾಂಡ್‌ಗೆ ಬಿಟ್ಟಿದ್ದು. ಆ ಬಗ್ಗೆ ಬೇರೆಯವರ ಅಭಿಪ್ರಾಯ ಅನಗತ್ಯ ಎಂದು ಟೀಕಿಸಿದರು.

## ಡಿಕೆಶಿ ಸಿಎಂ ಆದ್ರೂ ಓಕೆ: ಪರಮೇಶ್ವರ್ ಯೂಟರ್ನ್!



**ಬೆಂಗಳೂರು:** ಮುಖ್ಯಮಂತ್ರಿ ಸಿದ್ದರಾಮಯ್ಯ ಅವರ ಬೆಂಬಲಿಗರ ವಲಯದಲ್ಲಿ ಗುರುತಿಸಿಕೊಂಡಿದ್ದ, ಸಿಎಂ ಸ್ಥಾನದ ಆಕಾಂಕ್ಷಿ ಎಂದೂ ಹೇಳಿಕೊಂಡಿದ್ದ ಗೃಹ ಸಚಿವ ಡಾ.ಜಿ.ಪರಮೇಶ್ವರ್ ಇದೀಗ ಯೂಟರ್ನ್ ಹೊಡೆದಿದ್ದಾರೆ.

ಏಕಾಏಕಿ ಡಿ.ಕೆ ಶಿವಕುಮಾರ್ ಬೆಂಬಲಕ್ಕೆ ನಿಂತಿದ್ದಾರೆ.

ಕಾಂಗ್ರೆಸ್ ಹೈಕಮಾಂಡ್ ನಾಯಕತ್ವ ಬದಲಾವಣೆಗೆ ನಿರ್ಧರಿಸಿದರೆ ಡಿ.ಕೆ ಶಿವಕುಮಾರ್ ಅವರನ್ನು ಮುಖ್ಯಮಂತ್ರಿಯಾಗಿ ಸಂಪೂರ್ಣವಾಗಿ ಒಪ್ಪಿಕೊಳ್ಳುವುದಾಗಿ ಪರಮೇಶ್ವರ್ ಗುರುವಾರ ತಿಳಿಸಿದರು.

ಮುಖ್ಯಮಂತ್ರಿ ಆಕಾಂಕ್ಷೆಗಳ ಬಗ್ಗೆ ಯಾರಾದರೂ ನನ್ನನ್ನು ಕೇಳಿದಾಗ, ನಾನು ಸ್ವಾಭಾವಿಕವಾಗಿಯೇ ಮುಖ್ಯಮಂತ್ರಿ ರೇಸ್‌ನಲ್ಲಿದ್ದೇನೆ ಎಂದು ಉತ್ತರಿಸುತ್ತೇನೆ. ಆದರೆ ಅಧಿಕಾರ ಪರಿವರ್ತನೆಯಾಗಿ ಡಿಕೆಶಿ ಮುಖ್ಯಮಂತ್ರಿಯಾದರೆ, ನಾವು ಅದನ್ನು ಸ್ವೀಕರಿಸುತ್ತೇವೆ ಎಂದು ಪರಮೇಶ್ವರ್ ಹೇಳಿದ್ದಾರೆ. ಪಕ್ಷವು ಅನುಮೋದಿಸಿದರೆ

ಪುಟ 2ಕ್ಕೆ

## ಹಸೀನಾಗೆ 21 ವರ್ಷ ಶಿಕ್ಷೆ

**ಬಾಂಗ್ಲಾ:** ಸರ್ಕಾರಿ ವಸತಿ ಯೋಜನೆಯಲ್ಲಿ ನಿವೇಶನ ಹಂಚಿಕೆ ಅಕ್ರಮಕ್ಕೆ ಸಂಬಂಧಿಸಿದಂತೆ ಬಾಂಗ್ಲಾದೇಶ ಪದಚ್ಯುತ ಪ್ರಧಾನಿ ಶೇಖ್ ಹಸೀನಾ ಅವರಿಗೆ ಢಾಕಾ ನ್ಯಾಯಾಲಯ ಗುರುವಾರ 21 ವರ್ಷ ಜೈಲು ಶಿಕ್ಷೆ ಮತ್ತು ಅವರ ಇಬ್ಬರು ಮಕ್ಕಳಿಗೆ ತಲಾ ಐದು ವರ್ಷ ಜೈಲು ಶಿಕ್ಷೆ ವಿಧಿಸಿ ತೀರ್ಪು ನೀಡಿದೆ.

ಪುರ್ಬಾಚಲ್‌ನಲ್ಲಿರುವ ಸರ್ಕಾರಿ ವಸತಿ ಯೋಜನೆಯಲ್ಲಿ ಭ್ರಷ್ಟಾಚಾರ ನಡೆದಿದೆ ಎಂಬ ಆರೋಪದ ಮೇಲೆ ಈಗಾಗಲೇ ಗಲ್ಲು ಶಿಕ್ಷೆಗೆ ಗುರಿಯಾಗಿರುವ 78 ವರ್ಷದ ಹಸೀನಾ, ಅವರ ಮಗ ಸಾಜಿಬ್ ವಾಜೆದ್ ಜಾಯ್ ಮತ್ತು ಮಗಳು ಸೈಮಾ ವಾಜೆದ್ ಪುಟುಲ್ ಅವರಿಗೆ ಮೂರು ಪ್ರಕರಣಗಳಲ್ಲಿ ಢಾಕಾ ವಿಶೇಷ ನ್ಯಾಯಾಲಯ ಶಿಕ್ಷೆ ವಿಧಿಸಿದೆ.

ಯಾವುದೇ ಅರ್ಜಿ ಸಲ್ಲಿಸದ ಶೇಖ್ ಹಸೀನಾ ಅವರಿಗೆ ಅಧಿಕೃತ ನ್ಯಾಯವ್ಯಾಪ್ತಿಯನ್ನು ಮೀರಿ ನಿವೇಶನ ಹಂಚಿಕೆ ಮಾಡಲಾಗಿದೆ ಎಂದು ನ್ಯಾಯಾಧೀಶ ಮೊಹಮ್ಮದ್ ಅಬ್ದುಲ್ಲಾ ಅಲ್ ಮಾಮುನ್ ತೀರ್ಪು ನೀಡುತ್ತಾ ಹೇಳಿದ್ದಾರೆ.

## ಇಂದು ಉಡುಪಿಗೆ ಮೋದಿ ಭೇಟಿ



**ಉಡುಪಿ:** ಕೃಷ್ಣನ ನಗರಿ ಉಡುಪಿಗೆ ನವೆಂಬರ್ 28ರಂದು ಪ್ರಧಾನಿ ನರೇಂದ್ರಮೋದಿ ಆಗಮಿಸಲಿದ್ದಾರೆ.

ಉಡುಪಿ ಶ್ರೀಕೃಷ್ಣ ಮಠದಲ್ಲಿ ನಡೆಯಲಿರುವ ಐತಿಹಾಸಿಕ ಲಕ್ಷ ಕಂಠ ಗೀತಾ ಪಾರಾಯಣ– ಒಂದು ಲಕ್ಷ ಭಕ್ತರಿಂದ ಸಾಮೂಹಿಕ ಭಗವದ್ಗೀತೆ ಪಠಣಕ್ಕಾಗಿ ಸಿದ್ಧತೆಗಳು ನಡೆದಿದೆ. ನರೇಂದ್ರ ಮೋದಿ ಅವರು ಈ ಕಾರ್ಯಕ್ರಮದಲ್ಲಿ ಭಾಗವಹಿಸಲಿದ್ದಾರೆ.

ಪ್ರಧಾನಿ ಮೋದಿ ಮಂಗಳೂರು ವಿಮಾನ ನಿಲ್ದಾಣದಲ್ಲಿ ಇಳಿದು ಹೆಲಿಕಾಪ್ಟರ್ ಮೂಲಕ ಉಡುಪಿಗೆ ಆಗಮಿಸುವರು. ಮಧ್ಯಾಹ್ನ ಮಠವನ್ನು ತಲುಪುತ್ತಾರೆ. ಅವರು ಮೊದಲು ಶ್ರೀಕೃಷ್ಣನ ದರ್ಶನ ಮತ್ತು ದೇವಾಲಯದ ಆಚರಣೆಗಳಲ್ಲಿ ಭಾಗವಹಿಸುವರು. ನಂತರ ಗೀತಾಪಾರಾಯಣ ಮತ್ತು ಚಿನ್ನದ ಹೊದಿಕೆಗಳ ಉದ್ಘಾಟನೆ ನಡೆಯಲಿದೆ.

ಗೀತಾ ಪಠಣವು ಮಠದಲ್ಲಿ ಪವಿತ್ರ ಅಲಂಕಾರಗಳ ಅನಾವರಣದೊಂದಿಗೆ ಗರ್ಭಗುಡಿಯ ಮುಂಭಾಗದಲ್ಲಿರುವ ತೀರ್ಥ ಮಂಟಪಕ್ಕೆ ಚಿನ್ನದ ಹೊದಿಕೆ ಮತ್ತು ಕನಕನ ಕಿಂಡಿಗೆ ಚಿನ್ನದ ಹೊದಿಕೆ (ಕನಕ ಕವಚ) ಮಾಡಲಾಗುತ್ತದೆ. ಗೀತಾ ಪಠಣವು ಬೆಳಗ್ಗೆ 10ರಿಂದ ಮಧ್ಯಾಹ್ನ 12:30 ರವರೆಗೆ ನಡೆಯಲಿದ್ದು, ಒಂದು ಲಕ್ಷಕ್ಕೂ ಹೆಚ್ಚು ಜನರು ಸೇರುವ ನಿರೀಕ್ಷೆಯಿದೆ.

## ಯಾರಾದರೂ ಸಿಎಂ ಆಗಲಿ, ರಾಜ್ಯಕ್ಕೆ ಒಳಿತಾಗಲಿ: ರಮ್ಯಾ



**ಬೆಂಗಳೂರು:** ಯಾರಾದರೂ ಸಿಎಂ ಆದರೂ ಓಕೆ. ಆದರೆ, ರಾಜ್ಯಕ್ಕೆ ಒಳ್ಳೇಯದಾಗಬೇಕು. ರಾಹುಲ್ ಗಾಂಧಿ, ಸೋನಿಯಾ ಗಾಂಧಿ, ಮಲ್ಲಿಕಾರ್ಜುನ ಖರ್ಗೆ ಮತ್ತಿತರ ಹಿರಿಯರು ನಿರ್ಧಾರ ಮಾಡ್ತಾರೆ ಎಂದು ಚಿತ್ರನಟಿ ರಮ್ಯಾ ಹೇಳಿದರು,

ಮಾಧ್ಯಮದವರೊಂದಿಗೆ ಖುರ್ಚಿ ಕಿತ್ತಾಟ ವಿಚಾರವಾಗಿ ಮಾತನಾಡಿದ ಅವರು, ಇದನ್ನ ನಾನು ಡಿಸೈಡ್ ಮಾಡೋದಲ್ಲ. ಹೈಕಮಾಂಡ್ ತೀರ್ಮಾನ ಮಾಡಲಿದೆ. ಸೀನಿಯರ್ ಲೀಡರ್‌ಗಳು ನಿರ್ಧಾರ ಮಾಡ್ತಾರೆ

ಪಕ್ಷದಲ್ಲಿ ಗೊಂದಲ ಹೆಚ್ಚಾಗಿದೆ ಯಾಕೆ ಎಂದು ಕೇಳಿದ್ದಕ್ಕೆ ಅದೇ ರಾಜಕೀಯ ಎಂದು ನಕ್ಕು, ಎಲ್ಲಾ ನಾಯಕರಿಗೂ ಅರ್ಹತೆ ಇದೆ. ಯಾರಾದರೂ ಓಕೆ ಎಂದು ತಿಳಿಸಿದರು. ಚಿತ್ರರಂಗಕ್ಕೆ ಕಮ್ ಬ್ಯಾಕ್ ವಿಚಾರವಾಗಿ

ಪುಟ 2ಕ್ಕೆ

## ಅಪಘಾತ: ತಂಗಿ ಮದುವೆ ದಿನವೇ ಅಣ್ಣ, ಭಾವ ಸಾವು

**ಹಾಸನ:** ಬೈಕ್‌ಗೆ ಅಪರಿಚಿತ ವಾಹನ ಡಿಕ್ಕಿ ಹೊಡೆದ ಪರಿಣಾಮ ಬೈಕ್‌ನಲ್ಲಿದ್ದ ಇಬ್ಬರು ಯುವಕರು ಸಾವನ್ನಪ್ಪಿರುವ ಘಟನೆ ಬೇಲೂರು ತಾಲ್ಲೂಕಿನ ಮುತ್ತಗನ್ನೆ ಗ್ರಾಮದ ಬಳಿ ಗುರುವಾರ ಮುಂಜಾನೆ ನಡೆದಿದೆ. ಬೇಲೂರು ತಾಲ್ಲೂಕಿನ ಹೊನ್ನೇನಹಳ್ಳಿ ಗ್ರಾಮದ ಲೋಕೇಶ್ (25), ರಾಮೇನಹಳ್ಳಿ ಗ್ರಾಮದ ಕಿರಣ್ (32) ಮೃತ ದುರ್ದೈವಿಗಳು. ಲೋಕೇಶ್ ತಂಗಿ ಮದುವೆಯ ಆರತಕ್ಷತೆ ಗುರುವಾರ ಇತ್ತು. ಅದಕ್ಕಾಗಿ ಮೊಸರು ತರಲು ಬೈಕ್‌ನಲ್ಲಿ ಬೇಲೂರಿಗೆ ತೆರಳುತ್ತಿದ್ದರು. ಈ ವೇಳೆ ಅಪರಿಚಿತ ವಾಹನ ಡಿಕ್ಕಿ ಹೊಡೆದಿದೆ. ಡಿಕ್ಕಿ ಹೊಡೆದ ರಭಸಕ್ಕೆ ಭಾವ–ಭಾಮೈದ ಲೋಕೇಶ್ ಹಾಗೂ ಕಿರಣ್ ಸ್ಥಳದಲ್ಲೇ ಮೃತಪಟ್ಟಿದ್ದಾರೆ.

## ಬೆಳೆ ಹಾನಿ: 1,033 ಕೋಟಿ ಪರಿಹಾರ

### ಅತಿವೃಷ್ಟಿಯಿಂದ 14 ಲಕ್ಷ ಹೆಕ್ಟೇರ್ ಬೆಳೆ ನಾಶ: ಸಿಎಂ ಸಿದ್ದರಾಮಯ್ಯ



**ಬೆಂಗಳೂರು:** ರಾಜ್ಯದಲ್ಲಿ ಈ ವರ್ಷ ಅತಿವೃಷ್ಟಿಯಿಂದ 14 ಲಕ್ಷ ಹೆಕ್ಟೇರ್ ಬೆಳೆ ಹಾನಿಯಾಗಿದೆ. ರೈತರಿಗೆ 1,033 ಕೋಟಿ ರೂ. ಪರಿಹಾರ ಪ್ಯಾಕೇಜ್ ಘೋಷಿಸುವುದಾಗಿ ಮುಖ್ಯಮಂತ್ರಿ ಸಿದ್ದರಾಮಯ್ಯ ತಿಳಿಸಿದರು.

ಪತ್ರಿಕಾಗೋಷ್ಠಿಯಲ್ಲಿ ಗುರುವಾರ ಮಾತನಾಡಿದ ಅವರು, ನಾವು ಕೇಂದ್ರ ಸರ್ಕಾರಕ್ಕೆ ಮನವಿ ಮಾಡಿದ್ದೇವೆ. ರಾಜ್ಯಕ್ಕೆ ಕೇಂದ್ರ ತಂಡವನ್ನು ಕಳಿಸಿ ಹಾನಿಯ ಬಗ್ಗೆ ಪರಿಶೀಲನೆ ನಡೆಸಿ ಪರಿಹಾರ ನೀಡುತ್ತಾರೆ ಎಂಬ ಭರವಸೆ ಇದೆ. 17 ಲಕ್ಷ ಹೆಕ್ಟೇರ್‌ಗೆ ಆರ್ಥಿಕ ನೆರವು ರಾಜ್ಯ ಸರ್ಕಾರದಿಂದ ನೀಡಲಾಗುವುದು ಎಂದು ಪ್ರಕಟಿಸಿದರು.

ಪ್ರಸ್ತುತ ವರ್ಷದ ಮಾನ್ಸೂನ್ ಅವಧಿಯಲ್ಲಿ ಭಾರೀ ಮಳೆ ಮತ್ತು ಪ್ರವಾಹದಿಂದ ಬೆಳೆ ಹಾನಿಗೊಳಗಾದ ರೈತರಿಗೆ ರಾಜ್ಯ ಸರ್ಕಾರದಿಂದ ಹೆಚ್ಚುವರಿ ಸಬ್ಸಿಡಿಗಾಗಿ 1033.60 ಕೋಟಿ ವಿಶೇಷ ಪ್ಯಾಕೇಜ್ ಘೋಷಿಸಲಾಗಿದೆ ಎಂದು ಹೇಳಿದರು.

ಬೆಳೆ ಹಾನಿಗೊಳಗಾದ ರೈತರಿಗೆ ಹೆಚ್ಚಿನ ನೆರವು ಒದಗಿಸುವ ಉದ್ದೇಶದಿಂದ ರಾಜ್ಯ ಸರ್ಕಾರ ಇನ್‌ಪುಟ್ ಸಬ್ಸಿಡಿಗಳ ದರಗಳನ್ನು ಹೆಚ್ಚಿಸಿದೆ. ಗರಿಷ್ಠ 2 ಹೆಕ್ಟೇರಿಗೆ ಸೀಮಿತವಾಗಿ, ಮಳೆಯಾಶ್ರಿತ ಬೆಳೆಗಳಿಗೆ ಹೆಕ್ಟೇರ್ ಒಂದಕ್ಕೆ ರೂ. 8500ರಿಂದ ರೂ. 17 ಸಾವಿರ, ನೀರಾವರಿ ಬೆಳೆಗಳಿಗೆ ಹೆಕ್ಟೇರ್ ಒಂದಕ್ಕೆ ರೂ.17 ಸಾವಿರದಿಂದ ರೂ.25,500 ಹಾಗೂ ಬಹುವಾರ್ಷಿಕ ಬೆಳೆಗಳಿಗೆ ಹೆಕ್ಟೇರ್ ಒಂದಕ್ಕೆ ರೂ. 22,500ರಿಂದ ರೂ. 31 ಸಾವಿರಕ್ಕೆ ಹೆಚ್ಚಿಸಲಾಗಿದೆ ಎಂದು ಸಿಎಂ ಮಾಹಿತಿ ನೀಡಿದರು.

ಈ ಬಾರಿ ರಾಜ್ಯದಲ್ಲಿ ಅತಿ ಹೆಚ್ಚು ಮಳೆಯಾಗಿದೆ. ಸುಮಾರು 14 ಲಕ್ಷ ಹೆಕ್ಟೇರ್ ಪ್ರದೇಶದಲ್ಲಿ ಬೆಳೆ ಹಾನಿಯಾಗಿದೆ. ರೈತರಿಗೆ ಪರಿಹಾರ ನೀಡಬೇಕು. ಕಲಬುರಗಿ, ಯಾದಗಿರಿ ಮತ್ತು ಇತರ ಕೆಲವು ಜಿಲ್ಲೆಗಳಿಗೆ ಭೇಟಿ ನೀಡಿದ್ದೆ, ಅಲ್ಲಿ ಜೋಳ, ಕಬ್ಬು ಮತ್ತು ತೊಗರಿ ಬೆಳೆಗೆ ತೀವ್ರ ಹಾನಿಯಾಗಿದೆ ಎಂದು ಹೇಳಿದರು.

ಒಂಭತ್ತು ಜಿಲ್ಲೆಗಳಲ್ಲಿ ಹೆಚ್ಚಿನ ಬೆಳೆ ಹಾನಿ ಉಂಟಾಗಿದೆ. ಮುಖ್ಯವಾಗಿ ಧಾರವಾಡ, ಗದಗ ಮತ್ತು ಹಾವೇರಿ ಜಿಲ್ಲೆಗಳಲ್ಲಿ ಬೆಳೆಗಳು ಕೊಯ್ಲಿನ ಹಂತಕ್ಕೆ

ಪುಟ 2ಕ್ಕೆ

## ಸಿಎಂ ಗದ್ದುಗೆ: ಅಖಾಡಕ್ಕಿಳಿದ ಶ್ರೀಗಳು!

### ಸಿಎಂ ಕುರ್ಚಿ ಬಿಡದಿದ್ದರೆ ಕಾಂಗ್ರೆಸ್ ಸರ್ಕಾರ ಪತನ: ವೀರೇಶ್ವರ ಶ್ರೀ

**ಬೆಳಗಾವಿ:** ರಾಜ್ಯದಲ್ಲಿ ಮುಖ್ಯಮಂತ್ರಿ ಗದ್ದುಗೆ ಬದಲಾವಣೆ ವಿಚಾರದಲ್ಲಿ ಹಲವು ಸ್ವಾಮೀಜಿಗಳು ಅಖಾಡಕ್ಕಿಳಿದಿದ್ದಾರೆ. ಡಿ.ಕೆ.ಶಿವಕುಮಾರ್ ಪರವಾಗಿ ಒಕ್ಕಲಿಗ ಸ್ವಾಮೀಜಿಗಳು ಬ್ಯಾಟ್ ಬೀಸಿದ್ದಾರೆ.

ಡಿ.ಕೆ.ಶಿವಕುಮಾರ್ ಅವರಿಗೆ ಸಿಎಂ ಕುರ್ಚಿ ಬಿಟ್ಟಕೊಡದೇ ಇದ್ದಲ್ಲಿ ರಾಜ್ಯದಲ್ಲಿರುವ ಕಾಂಗ್ರೆಸ್ ಸರ್ಕಾರ ಪತನವಾಗಲಿದೆ ಎಂದು ಕಿತ್ತೂರು ತಾಲೂಕಿನ ದೇಗುಲಹಳ್ಳಿ ಮಡಿವಾಳೇಶ್ವರ ಮಠದ ವೀರೇಶ್ವರ ಸ್ವಾಮೀಜಿ ಭವಿಷ್ಯ ನುಡಿದಿದ್ದಾರೆ. ಡಿ.ಕೆ.ಶಿವಕುಮಾರ್ ಪರ ಆದಿಚುಂಚನಗಿರಿ ಮಠದ ನಿರ್ಮಲಾನಂದ ಸ್ವಾಮೀಜಿ ಮಾತನಾಡಿದ್ದರು. ಈಗ ಕಿತ್ತೂರು ಮತ್ತು ನಂಜಾವಧೂತ ಸ್ವಾಮೀಜಿ ಡಿಕೆಶಿ ಪರ ಬ್ಯಾಟ್ ಬೀಸಿದ್ದಾರೆ. ಅಧಿಕಾರ ಬಿಟ್ಟು ಕೊಡದಿದ್ದರೆ ವಚನ ಭ್ರಷ್ಟ ಸಿದ್ದರಾ ಮಯ್ಯ ಎಂದು ಜನರ ಮನಸಿನಲ್ಲಿ ಉಳಿಯುತ್ತದೆ. ಸಿದ್ದ ರಾಮಯ್ಯ ಮೊಂಡುತನ, ಹಠ ಬಿಟ್ಟು ಅಧಿಕಾರ ಹಸ್ತಾಂ ತರ ಮಾಡಬೇಕು. ಮೊದಲನೇ ಅವಧಿಗೆ ಸಿದ್ದರಾಮಯ್ಯ ಸಿಎಂ ಆಗಲು ಡಿಕೆ ಶಿವಕುಮಾರ್ ಅವರು ಸಹಕಾರ ನೀಡಿದ್ದರು. ಎರಡನೇ ಅವಧಿಗೆ ಡಿ.ಕೆ ಶಿವಕುಮಾರ್ ಅವರಿಗೆ ಸಿಎಂ ಸ್ಥಾನ ಬಿಟ್ಟು ಕೊಡಬೇಕು ಎಂದರು.ಡಿಕೆಶಿ ಪರ ಒಕ್ಕಲಿಗ ಸ್ವಾಮೀಜಿ ಬ್ಯಾಟಿಂಗ್ ನಂತರ, ಸಿದ್ದರಾಮಯ್ಯ ಪರ ಅಖಾಡಕ್ಕಿಳಿದ ಕಾಗಿನೆಲೆ ಸ್ವಾಮೀಜಿ ಅಖಾಡಕ್ಕೆ ಇಳಿದಿದ್ದಾರೆ.



### ಕೊಟ್ಟ ಮಾತು ತಪ್ಪಬಾರದು: ನಂಜಾವಧೂತ ಶ್ರೀ ಆಗ್ರಹ

ಬೆಂಗಳೂರು: ಕೊಟ್ಟ ಮಾತಿಗೆ ತಪ್ಪಿನಡೆದರ ಆ ಪರಮಾತ್ಮ ಮೆಚ್ಚಲ್ಲ. ಉಳಿದ ಎರಡೂವರೆ ವರ್ಷ ಡಿ.ಕೆ ಶಿವಕುಮಾರ್ ಅವರಿಗೆ ಸಿಎಂ ಸ್ಥಾನ ನೀಡಿ ಎಂದು ನಂಜಾವಧೂತ ಸ್ವಾಮೀಜಿ ಆಗ್ರಹಿಸಿದ್ದಾರೆ. ರಾಜ್ಯದಲ್ಲಿ ಕಾಂಗ್ರೆಸ್ ಕುರ್ಚಿ ಗುದ್ದಾಟದ ಬಗ್ಗೆ ಮಾತನಾಡಿದ ಅವರು, ಸಿದ್ದರಾಮಯ್ಯ ಈಗಾಗಲೇ 7.5 ವರ್ಷ ಸಿಎಂ ಅವಧಿಯನ್ನು ಪೂರೈಸಿದ್ದಾರೆ. ಅವರ ಮೇಲೆ ಯಾವುದೇ ಆಪಾದನೆ ಇಲ್ಲ. ಹೈಕಮಾಂಡ್ ಮಾತು ಕೊಟ್ಟಿದ್ದರೆ, ಅದನ್ನು ಮರೆಯಬಾರದು. ಮಾತು ಕೊಟ್ಟ ಮೇಲೆ ತಪ್ಪಬಾರದು. ಹೀಗಾಗಿ ಉಳಿದ ಎರಡೂವರೆ ವರ್ಷ ಡಿಕೆಶಿ ಅವರಿಗೆ ನೀಡಿ ಎಂದು ಸಮುದಾಯದ ಪರವಾಗಿ ತಿಳಿಸಿದ್ದಾರೆ.




## ಜೆಎಸ್‌ಎಸ್ ರಂಗೋತ್ಸವಕ್ಕೆ ಚಾಲನೆ

ಮೈಸೂರು: ಯಾವುದೇ ವಿಷಯವಾದರೂ ವಿರೋಧಿಸುವ ತಾಕತ್ತು ಇರುವುದು ರಂಗಭೂಮಿಗೆ ಮಾತ್ರ ಎಂದು ರಂಗ ನಟ ಮೈಮ್ ರಮೇಶ್ ಹೇಳಿದರು.

ನಗರದ ಸರಸ್ವತಿಪುರಂ ಜೆಎಸ್‌ಎಸ್ ಮಹಿಳಾ ಕಾಲೇಜಿನ ನವಜ್ಯೋತಿ ಸಭಾಂಗಣದಲ್ಲಿ ಗುರುವಾರ ಜೆಎಸ್‌ಎಸ್ ರಂಗೋತ್ಸವಕ್ಕೆ ಚೆಂಡೆ ಬಾರಿಸುವ ಮೂಲಕ ಚಾಲನೆ ನೀಡಿ ಮಾತನಾಡಿದ ಅವರು, ರಂಗಭೂಮಿಗೆ ವಾಕ್ ಸ್ವಾತಂತ್ರ್ಯ ಇದೆ. ಹೀಗಾಗಿ ದೇಶದ ಮುನ್ನಲೆ–ಹಿನ್ನೆಲೆ ಕುರಿತ ಯಾವುದೇ ವಿಷಯವಾದರೂ ಪ್ರತಿಕ್ರಿಯಿಸಬಹುದು ಎಂದರು. ಎಪ್ಪತ್ತರ ದಶಕದ ರಂಗಭೂಮಿಗೂ ಪ್ರಸ್ತುತದ ರಂಗಭೂಮಿಗೆ ಅಜಗಜಾಂತರ ವ್ಯತ್ಯಾಸವಿದೆ. ಅಂದಿನ ರಂಗಭೂಮಿ ಚಳವಳಿಯ ಮಾರ್ಗವಾಗಿತ್ತು ಸಮಾಜದ ಸಮಸ್ಯೆಗಳಿಗೆ ಹೋರಾಟದ ಮೂಲಕ ಸ್ಪಂದಿಸುತ್ತಿತ್ತು. ರಂಗಭೂಮಿ ದೊಡ್ಡ ಪರದೆ. ಮನುಷ್ಯನನ್ನು ಮನುಷ್ಯನನ್ನಾಗಿ ತೋರಿಸುವುದು ಇಲ್ಲಿ ಮಾತ್ರ. ನಾಟಕದ ಮೂಲಕ ಸಂದೇಶ ಕೊಡಬಹುದು ಎಂದರು.

ಮಕ್ಕಳು ರಂಗಭೂಮಿಗೆ ಬಂದು ಹೆಸರು ಮಾಡಬೇಕು. ಸಾಧ್ಯವಾಗದಿದ್ದಲ್ಲಿ ಅತ್ಯುತ್ತಮ ಸಭಿಕರಾಗಬೇಕು ಮೊಬೈಲ್, ಟಿವಿಗಳ ಹಾವಳಿಯ ಈ ಕಾಲದಲ್ಲಿ ಮಕ್ಕಳಿಗೆ ಸಂಸ್ಕೃತಿ ಹಾಗೂ ಸಂಸ್ಕಾರ ಮುಖ್ಯ. ರಂಗಭೂಮಿ ಸಂಸ್ಕೃತಿ ಹಾಗೂ ಸಂಸ್ಕಾರವನನು ಕಲಿಸುತ್ತದೆ ಎಂದರು. ಮಕ್ಕಳು ಜ್ಞಾನಪೀಠ ಪುರಸ್ಕೃತರ ಆತ್ಮಚರಿತ್ರೆ ಓದಬೇಕು. ಡಾ.ಬಿ.ಆರ್. ಅಂಬೇಡ್ಕರ್ ಅವರ ಸಂವಿಧಾನದ ಸಂಪುಟಗಳನ್ನು ಓದಬೇಕು. ಆಗ ಮಾತ್ರ ಪ್ರಜಾಪ್ರಭುತ್ವ ಎಲ್ಲಿ ಕಳೆದುಹೋಗುತ್ತಿದೆ ಎಂಬುದು ಗೊತ್ತಾಗುತ್ತದೆ ಎಂದರು.ಇದಲ್ಲದೇ ಕಾರ್ನಾಡ್, ಕಂಬಾರ ,ಕೈಲಾಸಂ, ಶ್ರೀರಂಗ ಮೊದಲಾದ ನಾಟಕಕಾರರ ಬಗ್ಗೆಯೂ ತಿಳಿಯಬೇಕು. ಆ ಮೂಲಕ ಎಲ್ಲರೂ ರಂಗಭೂಮಿಗೆ ಪ್ರೋತ್ಸಾಹ ನೀಡಬೇಕು ಎಂದು ಅವರು ಮನವಿ ಮಾಡಿದರು. ಜೆಎಸ್‌ಎಸ್ ಕಾಲೇಜು ಶಿಕ್ಷಣ ವಿಭಾಗದ ನಿರ್ದೇಶಕ ಪ್ರೊ.ಮೊರಬದ ಮಲ್ಲಿಕಾರ್ಜುನ ಮಾತನಾಡಿ, ರಂಗಭೂಮಿಯು ಜನರಿಗೆ ಪರಿಣಾಮಕಾರಿಯಾಗಿ ತಲುಪುವ ಮಾಧ್ಯಮ ಎಂದರು.

ಹಿರಿಯ ಪತ್ರಕರ್ತ ಅಂಶಿ ಪ್ರಸನ್ನಕುಮಾರ್ ಅಧ್ಯಕ್ಷತೆ ವಹಿಸಿದ್ದರು. ನಿಖಿತಾ ಭಟ್, ತನುಶ್ರೀ ಭಟ್ ಪ್ರಾರ್ಥಿಸಿದರು. ಸಹಾಯಕ ಪ್ರಾಧ್ಯಾಪಕ ಹೊನ್ನಶೆಟ್ಟಿ ಸ್ವಾಗತಿಸಿದರು. ರಂಗೋತ್ಸವ ಸಂಚಾಲಕ ಚಂದ್ರಶೇಖರಾ ಚಾರ್ ಹೆಗ್ಗೊತ್ತಾರ ಪ್ರಾಸ್ತಾವಿಕ ಭಾಷಣ ಮಾಡಿದರು. ಜೆಎಸ್‌ಎಸ್ ಮಹಿಳಾ ಪದವಿ ಕಾಲೇಜಿನ ಪ್ರಾಂಶುಪಾಲ ಡಾ.ರೇಚಣ್ಣ, ಪದವಿಪೂರ್ವ ಕಾಲೇಜಿನ ಪ್ರಾಂಶುಪಾಲ ಟಿ. ಗುರುಪಾದಸ್ವಾಮಿ, ಜೆಎಸ್‌ಎಸ್ ಪ್ರಕಟಣಾ ವಿಭಾಗದ ಸಹ ನಿರ್ದೇಶಕ ಆರ್.ಎಸ್. ಪೂರ್ಣಾನಂದ ಇದ್ದರು. ಎನ್.ಎಂ. ಕೃಷ್ಣಪ್ಪ ವಂದಿಸಿದರು. ಕೆ. ಪುಷ್ಪಲತಾ ಕಾರ್ಯಕ್ರಮ ನಿರೂಪಿಸಿದರು. ನಂತರ ಶರೀಫ ನಾಟಕದ ಪ್ರದರ್ಶನ ಇತ್ತು

## 30ಕ್ಕೆ ಭರತನಾಟ್ಯ ಪ್ರದರ್ಶನ

ಮೈಸೂರು: ನ. 30 ರಂದು ಸಂಜೆ 4.30ಕ್ಕೆ ವಿಜಯನಗರದ ಜಗನ್ನಾಥ ಕಲೆ ಮತ್ತು ಸಂಸ್ಕೃತಿ ಕೇಂದ್ರದ ಸಭಾಂಗಣದಲ್ಲಿ ತಾವು ಹಾಗೂ ತಮ್ಮ ತಾಯಿ ಪೂರ್ಣಿಮಾ ಕೃಷ್ಣ, ಸಹೋದರಿ ವಂದನಾ ಒಟ್ಟಿಗೇ ಭರತನಾಟ್ಯ ಕಾರ್ಯಕ್ರಮ ನಡೆಸಿಕೊಡುವುದಾಗಿ ವೃತ್ತಿಯಲ್ಲಿ ವೈದ್ಯರಾದ ಡಾ.ಕೆ. ಪೂರ್ಣಿಮಾ ತಿಳಿಸಿದರು.



ನಗರದಲ್ಲಿ ಸುದ್ದಿಗಾರರೊಡನೆ ಮಾತನಾಡಿ, ನಗರದಲ್ಲಿ ತಾಯಿ ಯೊಡನೆ ಇಬ್ಬರು ಪುತ್ರಿಯರು ಒಟ್ಟಿಗೇ ಇಂತಹ ಕಾರ್ಯಕ್ರಮ ನಡೆಸಿ ಕೊಡುತ್ತಿರುವುದು ತಮಗೆ ತಿಳಿದಂತೆ ಇದೇ ವ ’ ೂ ದ ’ ಲ ಬಾರಿಯದಾಗಿದೆ. ಶಿವರಾತ್ರಿ ದೇಶಿಕೇಂದ್ರ ಸ್ವಾಮೀಜಿ, ನಿರ್ಮಲಾನಂದನಾಥ ಸ್ವಾಮೀಜಿ, ಡಾ. ವಸುಂಧರಾ ದೊರೆಸ್ವಾಮಿ, ಡಾ.ಆರ್.ಎಸ್. ನಂದಕುಮಾರ್, ಆರ್. ಕಣ್ಣನ್, ಕೆ. ಸಂದೇಶ್ ಭಾರ್ಗವ್, ನಾಟ್ಯಾಚಾರ್ಯ ಕೆ. ರಾಮಮೂರ್ತಿರಾವ್ ಇನ್ನಿತರರು ಉಪಸ್ಥಿತರಿರುವರು. ಇದು ಸುಮಾರು 3 ಗಂಟೆಯ ಕಾರ್ಯಕ್ರಮವಾಗಿದೆ ಎಂದು ತಿಳಿಸಿದರು. ಭರತನಾಟ್ಯ ವಿದ್ಯಾರ್ಥಿನಿಯರಾದ ಹರ್ಷಿಣಿ, ರಂಜಿತಾ ಇದ್ದರು.

# ಡಿಕೆಶಿ ಮುಖ್ಯಮಂತ್ರಿ ಮಾಡುವವರೆಗೂ ಹೋರಾಟ ನಿಶ್ಚಿತ

ಮೈಸೂರು: ಚುನಾವಣೆ ಸಂದರ್ಭದಲ್ಲಿ ಒಕ್ಕಲಿಗ ಸಮುದಾಯಕ್ಕೆ ಪೆನ್ನು ಪೇಪರ್ ಸಿಗುತ್ತದೆ ಎಂಬ ಕಾರಣಕ್ಕೆ ಕಾಂಗ್ರೆಸ್ ಗೆ ಮತ ನೀಡಿದ್ದೇವೆ. ಅದನ್ನು ಕಾಂಗ್ರೆಸ್ ಹೈಕಮಾಂಡ್ ನೀಡಿ ಡಿ.ಕೆ.ಶಿವಕುಮಾರ್ ಅವರನ್ನು ಮುಖ್ಯಮಂತ್ರಿ ಮಾಡುವವರೆಗೂ ಸಮುದಾಯ ಅವರ ಜತೆಗೆ ನಿಂತೂ ಹೋರಾಟ ಮಾಡಲಿದೆ ಎಂದು ಮೈಸೂರು ಜಿಲ್ಲಾ ಒಕ್ಕಲಿಗರ ಸಂಘದ ಅಧ್ಯಕ್ಷ ಎಂ.ಮರಿಸ್ವಾಮಿ ತಿಳಿಸಿದರು.

ನಗರ ಖಾಸಗಿ ಹೋಟೆಲ್ ತುರ್ತು ಸಭೆ ನಡೆಸಿ ಮಾತನಾಡಿದ ಅವರು, ಮೈಸೂರಿನ ಚಾಮ ರಾಜ ಕ್ಷೇತ್ರ, ಮಂಡ್ಯ, ತುಮಕೂರು, ಹಾಸನ, ಬೆಂಗಳೂರು ಸೇರಿ ಎಲ್ಲಾ ಕಡೆಗಳಲ್ಲಿಯೂ ಡಿ. ಕೆ.ಶಿವಕುಮಾರ್ ಅವರು ಎಚ್.ಡಿ.ದೇವೇಗೌಡ, ಎಸ್.ಎಂ.ಕೃಷ್ಣ, ಎಚ್.ಡಿ.ಕುಮಾರಸ್ವಾಮಿ ಎಲ್ಲರಿಗೂ ಅವಕಾಶ ನೀಡಿದ್ದಿರಿ. ಈಗ ನನಗೂ ಒಮ್ಮೆ ಪೆನ್ನು ಪೇಪರ್ ಹಿಡಿಯುವ ಅವಕಾಶ ಕೊಡಿ ಎಂದು ಕೇಳಿಕೊಂಡರು. ಅಂದೇ ನಾವು ಅವರಿಗೆ ಸಿಎಂ ಸ್ಥಾನ ನೀಡುವಂತೆ ಆಗ್ರಹಿಸಿದ್ದಾಗ ಹೈಕಮಾಂಡ್ ಎರಡೂವರೆ ವರ್ಷದ ಒಪ್ಪಂದದ ಬಗ್ಗೆ ಪ್ರಸ್ತಾಪಿಸಿದ್ದಕ್ಕೆ ಸುಮ್ಮನಾದೆವು. ಸಿದ್ದರಾಮಯ್ಯ



ಅವರೊಬ್ಬರಿಂದಲೇ ಪಕ್ಷ ಅಧಿಕಾರಕ್ಕೆ ಬಂದಿಲ್ಲ. ಹಗಲು ರಾತ್ರಿ ಎನ್ನದೇ ಡಿ.ಕೆ.ಶಿವಕುಮಾರ್ ರಾಜ್ಯದ ಎಲ್ಲಾ ಕ್ಷೇತ್ರ ಸುತ್ತಿದ್ದರಿಂದಲೇ ಪಕ್ಷ ಅಧಿಕಾರಕ್ಕೆ ಬಂದಿದೆ. ಈ ಕಾರಣಕ್ಕಾಗಿ ಮುಖ್ಯಮಂತ್ರಿ ಹುದ್ದೆ ಬಿಟ್ಟುಕೊಡಬೇಕೆಂದು ಕೇಳುತ್ತಿದ್ದೇವೆಂದರು.


> ▸▸ ಖಾಸಗಿ ಹೋಟೆಲ್ ನಲ್ಲಿ ತುರ್ತು ಸಭೆ ನಡೆಸಿ ಒಕ್ಕಲಿಗ ಸಮುದಾಯದಿಂದ ಸ್ಪಷ್ಟ ಸಂದೇಶ, ನಾಳೆ ಬೃಹತ್ ಬೈಕ್ ರ್‍ಯಾಲಿ

ಐವತ್ತು ವರ್ಷದಿಂದ ಪಕ್ಷಕ್ಕಾಗಿ ಡಿಕೆಶಿ ಸೇವೆ ಸಲ್ಲಿಸಿದ್ದಾರೆ. ಸಿದ್ದರಾಮಯ್ಯ ಈಗ ಬಂದೂ ಏಳೂವರೆ ವರ್ಷ ಆಡಳಿತ ನೀಡಿದ್ದಾರೆ. ಹೀಗಾಗಿ ಈ ಬಾರಿ ಸಮುದಾಯದ ಡಿಕೆಶಿಯವರಿಗೆ ಕಾಂಗ್ರೆಸ್ ಹೈಕಮಾಂಡ್ ಕೊಟ್ಟ ಮಾತಿನಂತೆ ಅವಕಾಶ ನೀಡಬೇಕು. ಇಲ್ಲದಿದ್ದರೆ ಸಮುದಾಯ ಮುಂದೆಂದೂ ಕಾಂಗ್ರೆಸ್ ಗೆ ಒಂದೇ ಒಂದು ಹಾಕುವುದಿಲ್ಲ ಎಂಬ ತೀರ್ಮಾನ ಕೈಗೊಳ್ಳಲಾಗುವುದು. ಈ ಹಿನ್ನೆಲೆಯಲ್ಲಿ ನಾಳೆ ಒಂದು ದಿನ ಕಾದು ನೋಡುತ್ತೇನೆ. ಡಿಕೆಶಿಯವರನ್ನು ಸಿಎಂ ಆಗಿ ಘೋಷಿಸದಿದ್ದರೆ ಶನಿವಾರ ಬೆಳಿಗ್ಗೆ 9ಕ್ಕೆ ಒಂಟಿಕೊಪ್ಪಲಿನ ಚಂದ್ರಮೌಳೇಶ್ವರ ದೇವಾಕಯದಿಂದ ಕೋಟೆ ಆಂಜನೇಯ ದೇವಾಲಯದವರೆಗೆ ಬೃಹತ್ ಬೈಕ್ ರ್‍ಯಾಲಿ ನಡೆಸುತ್ತೇವೆ. ಅಲ್ಲಿ ವಿಶೇಷಪೂಜೆ ಸಲ್ಲಿಸಲಾಗುವುದು. ಮುಂದಿನ ದಿನಗಳಲ್ಲಿ ಪ್ರತಿ ಕಡೆಗಳಲ್ಲಿಯೂ ಹೋರಾಟಕ್ಕಿಳಿಯಬೇಕಾಗುತ್ತದೆ ಎಂದು ತಿಳಿಸಿದರು.

ಒಕ್ಕಲಿಗರ ಸಂಘದ ಪ್ರಧಾನ ಕಾರ್ಯದರ್ಶಿ ಈ.ಎಂ.ಚೇತನ್, ನಿರ್ದೇಶಕರಾದ ಉಮೇಶ್, ಕುಮಾರ್, ನಾಗಣ್ಣ, ಸುಶೀಲ ನಂಜಪ್ಪ, ಪ್ರಕಾಶ್, ಗಿರೀಶ್ ಗೌಡ, ಒಕ್ಕಲಿಗ ಸಮುದಾಯದ ಮುಖಂಡರಾದ ಬೀಡನಹಳ್ಳಿ ಸತೀಶ್ ಗೌಡ, ತಾಲ್ಲೂಕು ಒಕ್ಕಲಿಗರ ಸಂಘದ ಕೃಷ್ಣೇಗೌಡ, ಶ್ರೀನಿವಾಸ್, ಮಾಜಿ ಮೇಯರ್ ಬಿ.ಕೆ.ಪ್ರಕಾಶ್, ಮೋದಾಮಣಿ, ಇಂದಿರಾಗಾಂಧಿ ಬ್ಲಾಕ್ ಕಾಂಗ್ರೆಸ್ ಅಧ್ಯಕ್ಷ ರವಿ ಮಂಚೇಗೌಡನ ಕೊಪ್ಪಲು, ಕಾವಲು ಪಡೆ ಅಧ್ಯಕ್ಷ ಮೋಹನ್ ಕುಮಾರ್ ಗೌಡ, ಜಯರಾಮ್, ಕೆಎಸ್ ಆರ್ ಟಿಸಿ ನೌಕರರ ಸಂಘದ ಅಧ್ಯಕ್ಷ ವಿಶ್ವನಾಥ್, ಬಿಜಿಎಸ್ ಒಕ್ಕಲಿಗರ ಸಂಘದ ಅಧ್ಯಕ್ಷ ಮೊಗ್ಗಣ್ಣ ಗೌಡ, ನೇಗಿಲಯೋಗಿ ರವಿಕುಮಾರ್, ಹರೀಶ್ ಇನ್ನಿತರರು ಉಪಸ್ಥಿತರಿದ್ದರು.

# ಸಂವಿಧಾನವನ್ನು ರಕ್ಷಿಸೋಣ

### ತಹಸಿಲ್ದಾರ್ ರುಕೀಯಾ ಬೇಗಂ ಕರೆ | ಸಂವಿಧಾನ ಸಮರ್ಪಣ ದಿನ



ಕೆ.ಆರ್.ನಗರ: ಬಾಬಾ ಸಾಹೇಬ್ ಅಂಬೇಡ್ಕರ್ ಅವರು ಈ ದೇಶಕ್ಕೆ ಕೊಟ್ಟಂತ ಸಂವಿಧಾನದ ಅಡಿಯಲ್ಲೇ ನಾನು ಕೂಡ ತಹಸೀಲ್ದರಾಗಿ ಈ ವೇದಿಕೆಯಲ್ಲಿ ನಿಂತಿರುವುದು ಹಾಗಾಗಿ ಆ ಸಂವಿಧಾನ ರಕ್ಷಣೆ ನಮ್ಮೆಲ್ಲರ ಜವಾಬ್ದಾರಿಯಾಗಿದೆ ಎಂದು ತಹಸಿಲ್ದಾರ್ ರುಕೀಯಾ ಬೇಗಂ ತಿಳಿಸಿದರು ಸಾಲಿಗ್ರಾಮ ತಾಲೂಕು ಆಡಳಿತ ಮತ್ತು ಸಮಾಜ ಕಲ್ಯಾಣ ಇಲಾಖೆ ಪಟ್ಟಣದ ಶಾದಿಮಾನ್ ಸಮುದಾಯ ಭವನದಲ್ಲಿ ಆಯೋಜಿಸಿದ ಸಂವಿಧಾನ ಸಮರ್ಪಣ ದಿನದ ಕಾರ್ಯಕ್ರಮವನ್ನು ಉದ್ಘಾಟಿಸಿ ಮಾತನಾಡಿದರು.

ಸಂವಿಧಾನ ಇಲ್ಲ ಎಂದಿದ್ದರೆ ಪ್ರಜಾಪ್ರಭುತ್ವದಲ್ಲಿ ಮನುಷ್ಯರ ಬದುಕು ಹೇಳುತ್ತೀರದಾಗಿರುತ್ತಿತ್ತೇನೋ ಏಕೆಂದರೆ ಸಂವಿಧಾನ ಬರುವುದಕ್ಕಿಂತ ಮುಂಚೆ ಜನ ಜೀವನದ ವ್ಯವಸ್ಥೆ ಮತ್ತು ಸಂವಿಧಾನ ಬಂದ ಮೇಲೆ ಜನ ಜೀವನದ ವ್ಯವಸ್ಥೆ ಹೇಗಿದೆ ಎಂಬುವುದನ್ನು ಎಲ್ಲರೂ ಓದಿ ಕೇಳಿ ತಿಳಿದುಕೊಂಡರೆ ಆದರ ಮಹತ್ವ ಏನು ಎಂದು ತಿಳಿಯಲಿದೆ. ಸಂವಿಧಾನ ಲೋಕಾರ್ಪಣೆ ದಿನವನ್ನು ನಾವು ಮಾತ್ರ ಆಚರಿಸಿದರೆ ಸಾಲದು ಅದರ ವಿಷಯಗಳನ್ನು ಪ್ರತಿಯೊಬ್ಬ ಮನುಷ್ಯನಿಗೂ ಮನಮುಟ್ಟುವಂತೆ ಮಾಡುವುದು ನಮ್ಮೆಲ್ಲರ ಜವಾಬ್ದಾರಿಯಾಗಿದೆ ಎಂದರು.

ಸಂವಿಧಾನ ಲೋಕಾರ್ಪಣೆ ದಿನವನ್ನು ಆಚರಿಸಲು ಅನೇಕ ಸಂಘ ಸಂಸ್ಥೆಗಳು ಮತ್ತು ವಿವಿಧ ಇಲಾಖೆಯ ಎಲ್ಲಾ ಅಧಿಕಾರಿಗಳು ಸಿಬ್ಬಂದಿಗಳು ತಾಲೂಕು ಆಡಳಿತದ ಜೊತೆಗೆ ಕೈಜೋಡಿಸಿ ಮಹತ್ಮ ಬರೆದಂತಹ ಸಂವಿಧಾನದ ಲೋಕಾರ್ಪಣೆ ದಿನವನ್ನು ವಿಜೃಂಭಣೆಯಿಂದ ಆಚರಿಸಲು ಸಹಕಾರ ನೀಡಿದಂತಹ ನಿಮ್ಮೆಲ್ಲರಿಗೂ ನನ್ನ ಹೃತ್ಪೂರ್ವಕ ಕೃತಜ್ಞತೆಯನ್ನು ಸಲ್ಲಿಸುತ್ತೇನೆ ಎಂದರು.

ಸಂವಿಧಾನದ ಪೀಠಿಕೆಯನ್ನು ಪಟ್ಟಣದ ಯೋಗ ನರಸಿಂಹ ಸ್ವಾಮಿ ದೇವಸ್ಥಾನದ ಬಳಿಯಿಂದ ತೆರೆದ ವಾಹನದಲ್ಲಿ ಇಟ್ಟು ಹೂವಿನಿಂದ ಅಲಂಕರಿಸಿ ಸರ್ಕಾರಿ ಗೌರವದೊಂದಿಗೆ ಮೆರವಣಿಗೆ ಮಾಡಿ.ಗಾಂಧಿ ವೃತ್ತ, ಮಹಾವೀರ ರಸ್ತೆ ಮಾರ್ಗವಾಗಿ. ಶಾದಿಮಹಲ್ ಸಮುದಾಯ ಭವನದಲ್ಲಿ ನಡೆದ ವೇದಿಕೆ ಕಾರ್ಯಕ್ರಮಕ್ಕೆ ತರಲಾಗಿತ್ತು ನಂತರ ವೇದಿಕೆಯಲ್ಲಿ ಇಟ್ಟು, ಸಂವಿಧಾನ ಪೀಠಿಕೆಯನ್ನು ಶಾಲಾ ಮಕ್ಕಳು ಮತ್ತು ಶಿಕ್ಷಕರು ಹಾಗೂ ರಾಜಕೀಯ ವಿವಿಧ ಪಕ್ಷದ ಮುಖಂಡರು ಸಮ್ಮುಖದಲ್ಲಿ ಓದಿ ತಿಳಿಸಲಾಗಿತು.

ವಿವಿಧ ಶಾಲಾ ಕಾಲೇಜುಗಳಲ್ಲಿ ಸಂವಿಧಾನ ಪೀಠಿಕೆ ಬಗ್ಗೆ ಪ್ರಬಂಧ ಸ್ಪರ್ಧೆಗಳನ್ನು ಏರ್ಪಡಿಸಲಾಗಿದ್ದು ಅದರಲ್ಲಿ ಉತ್ತಮವಾಗಿ ಸಂವಿಧಾನ ಪೀಠಿಕೆ ಬರೆದು ಆಯ್ಕೆಯಾದ ವಿದ್ಯಾರ್ಥಿಗಳಿಗೆ ವೇದಿಕೆಯಲ್ಲಿ ಅಭಿನಂದಿಸಿ ಗೌರವಿಸಲಾಯಿತು. ಸಂವಿಧಾನದ ಪೀಠಿಕೆಯನ್ನು ಅರ್ಥಪೂರ್ಣವಾಗಿ ಉಪನ್ಯಾಸಕ ನಾಗರಾಜ್ ಮುಖ್ಯ ಭಾಷಣದಲ್ಲಿ ತಿಳಿಸಿದರು. ಗ್ಯಾರಂಟಿ ಸಮಿತಿ ಯೋಜನೆ ತಾಲೂಕು ಅಧ್ಯಕ್ಷ ಉದಯ್ ಶಂಕರ್, ಕಳ್ಳಿಮುದ್ದನಹಳ್ಳಿ ಚಂದ್ರು, ರಾಜಯ್ಯ ಪೀಠಿಕೆ ಬಗ್ಗೆ ಮಾತನಾಡಿದರು.

ಕಾರ್ಯಕ್ರಮದಲ್ಲಿ ಇಒ ರವಿಕುಮಾರ್, ಕೆಇಬಿ ಮಧುಸೂದನ್, ನೌಕರರ ಸಂಘದ ಉಪಾಧ್ಯಕ್ಷ ಉಮೇಶ್,ನಗರ ಕಾಂಗ್ರೆಸ್ ಅಧ್ಯಕ್ಷ ಪ್ರಭಾಕರ್, ಎಸ್ಸಿ ಘಟಕದ ತಾಲೂಕು ಅಧ್ಯಕ್ಷ ಕಂಠಿಕುಮಾರ್, ಸಮತ ಸೈನಿಕ ದಳದ ಜಿಲ್ಲಾ ಸಂಚಾಲಕ ಪುರಿಗೋವಿಂದ್, ದಲಿತ ಸಂಘರ್ಷ ಸಮಿತಿ ತಾಲೂಕು ಸಂಚಾಲಕ ಹಾಗೂ ಗ್ರಾಪಂ ಸದಸ್ಯ ರಾಂಪುರ ಲೋಕೇಶ್, ಸಾಲಿಗ್ರಾಮ ಗ್ರಾಪಂ ಸದಸ್ಯ ಗಂಗಾಧರ್, ಮಾಜಿ ಗ್ರಾಪಂ ಉಪಾಧ್ಯಕ್ಷ ಮನುಗನಹಳ್ಳಿ ದೇವರಾಜ್, ದಲಿತ ಮುಖಂಡ ಶ್ರೀನಿವಾಸ್, ಸಣ್ಣಯ್ಯ, ಅಲ್ಪಸಂಖ್ಯಾತರ ನಗರ ಅಧ್ಯಕ್ಷ ಸೌಕತ್, ರಕ್ಷಾ ಸಮಿತಿ ವಾಸಿಮ್, ವಿ ಎಸ್ ಎಸ್ ಮಂಜುನಾಥ್ ,ಸಮಾಜ ಕಲ್ಯಾಣ ಇಲಾಖೆ ಕೃಷ್ಣಪ್ಪ, ಭಾರತಿ, ಗೀತಾಬಾಯಿ. ಕಂದಾಯ ಇಲಾಖೆ ತಿಮ್ಮಯ್ಯ, ಕೃಷ್ಣಮೂರ್ತಿ,ಹಂಸ, ಶಶಿಕಾಂತ್ ಸೇರಿದಂತೆ ಇತರರು ಇದ್ದರು.

## ಮೊದಲ ಪುಟದಿಂದ

### ಪರಮೇಶ್ವರ್ ಯೂಟರ್ನ್!

ಯಾವುದೇ ಪರಿವರ್ತನೆ ಸುಗಮವಾಗಿರುತ್ತದೆ. ಕಾಂಗ್ರೆಸ್ ಅಧ್ಯಕ್ಷ ಮಲ್ಲಿಕಾರ್ಜುನ ಖರ್ಗೆ ಕೂಡ ಮುಖ್ಯಮಂತ್ರಿ ಹುದ್ದೆಗೆ ಸೂಕ್ತ ಅಭ್ಯರ್ಥಿ. ಆದರೆ ಸಿದ್ದರಾಮಯ್ಯ ಮತ್ತು ಡಿಕೆ ಶಿವಕುಮಾರ್ ನಡುವಿನ ಅಧಿಕಾರ ಹಸ್ತಾಂತರದ ಯಾವುದೇ ಒಪ್ಪಂದದ ಬಗ್ಗೆ ತಮಗೆ ತಿಳಿದಿಲ್ಲ ಎಂದು ಡಾ.ಜಿ.ಪರಮೇಶ್ವರ ಹೇಳಿದರು

### ಬೆಳೆ ಹಾನಿ: 1,033 ಕೋಟಿ ಪರಿಹಾರ

ಬಂದ ಸಂದರ್ಭದಲ್ಲಿ ಭಾರೀ ಮಳೆಯಿಂದ ಹೆಚ್ಚಿನ ಹಾನಿ ಸಂಭವಿಸಿದೆ. ಕೃಷ್ಣಾ ಮತ್ತು ಭೀಮಾ ಜಲಾನಯನ ಪ್ರದೇಶಗಳಲ್ಲಿ ನಿರಂತರ ಒಳ ಹರಿವು ಹೆಚ್ಚಳದಿಂದ ಕಲಬುರಗಿ, ಯಾದಗಿರಿ ಮತ್ತು ಬೀದರ ಜಿಲ್ಲೆಗಳಲ್ಲಿ ತೊಗರಿ ಮತ್ತು ಹತ್ತಿ ಬೆಳೆಗಳಿಗೆ ವ್ಯಾಪಕ ಹಾನಿ ಉಂಟಾಗಿದೆ. ಕೃಷ್ಣಾ ಮತ್ತು ಭೀಮಾ ಜಲಾನಯನ ಪ್ರದೇಶಗಳಲ್ಲಿ ನಿರಂತರ ಒಳ ಹರಿವು ಹೆಚ್ಚಳದಿಂದ ಕಲಬುರಗಿ, ಯಾದಗಿರಿ ಮತ್ತು ಬೀದರ ಜಿಲ್ಲೆಗಳಲ್ಲಿ ತೊಗರಿ ಮತ್ತು ಹತ್ತಿ ಬೆಳೆಗಳಿಗೆ ವ್ಯಾಪಕ ಹಾನಿ ಉಂಟಾಗಿದೆ ಎಂದು ತಿಳಿಸಿದರು.

### ಯಾರಾದರೂ ಸಿಎಂ ಆಗಲಿ, ರಮ್ಯಾ

ಮಾತನಾಡಿ, 40, 50 ಸ್ಕ್ರಿಪ್ಟ್ ಕೇಳಿದ್ದೀನಿ. ಒಂದು ಸ್ಕ್ರಿಪ್ಟ್ ಇಷ್ಟ ಆಗಿದೆ. ಮುಂದೆ ನೋಡೋಣ. ಯಾರ ಜೊತೆ ಅಂತ ಹೇಳಲ್ಲ ಎಂದರು.

### ಹೈಕಮಾಂಡ್ ಕರೆದರೆ ದೆಹಲಿಗೆ ಹೋಗುವೆ

ನೀಡುವುದಾಗಿ ಮುಖ್ಯಮಂತ್ರಿ ಸಿದ್ದರಾಮಯ್ಯ ಹೇಳಿದರು.

ವರ್ತಮಾನ
ಜಾಹಿರಾತಿಗೆ ಉತ್ತಮ ಮಾಧ್ಯಮ

# ಅಮೆರಿಕಾದೊಂದಿಗಿನ ಕೇಂದ್ರದ ಒಪ್ಪಂದಕ್ಕೆ ವಿರೋಧ

ಮೈಸೂರು: ಅಮೆರಿಕಾ ಜೊತೆಗೆ ಮುಕ್ತ ವ್ಯಾಪಾರ ಒಪ್ಪಂದಕ್ಕೆ ಮುಂದಾಗಿರುವ ಕೇಂದ್ರ ಸರ್ಕಾರಕ್ಕೆ ನಮ್ಮ ದೇಶದ ರೈತರು ಮುಖ್ಯವೋ ಅಥವಾ ಅಮೆರಿಕಾದ ಕಾರ್ಪೊರೇಟ್ ರೈತರ ಹಿತ ಮುಖ್ಯವೋ ಎಂಬ ಬಗ್ಗೆ ದೇಶದ ಜನತೆಗೆ ಉತ್ತರ ನೀಡಬೇಕಾಗಿದೆ ಎಂದು ರಾಜ್ಯ ರೈತ ಸಂಘದ ಮುಖಂಡರಾದ ಚುಕ್ಕಿ ನಂಜುಂಡಸ್ವಾಮಿ ಆಗ್ರಹಿಸಿದರು.

ನಗರದಲ್ಲಿ ಸುದ್ದಿಗಾರರೊಡನೆ ಮಾತನಾಡಿ, ಬಂಡವಾಳ ಶಾಹಿಗಳ ಕೆಂಗಣ್ಣು ದೇಶದ ಕೃಷಿ ವಲಯದ ಮೇಲೆ ಬಿದ್ದಿದೆ. ಇಂದು ಕೃಷಿ ವಲಯ ಕೂಡ ಅವರ ಕಪಿ ಮುಷ್ಠಿಯಲ್ಲಿದೆ. ಅದರಲ್ಲಿಯೂ ಅಮೆರಿಕಾದಂತಹ ಬಂಡವಾಳ ಶಾಹಿ ಮತ್ತು ಅಧಿಕಾರ ಶಾಹಿ ರಾಷ್ಟ್ರಗಳು ನಮ್ಮಂತಹ ರಾಷ್ಟ್ರಗಳನ್ನು ತಮ್ಮ ಹತೋಟಿಯಲ್ಲಿಟ್ಟುಕೊಂಡು ಅವರ ದೇಶದಲ್ಲಿ ಹೇರಳವಾಗಿ ಬೆಳೆದ ಬೆಳೆಗಳನ್ನು ತಂದು ಸುರಿಯುವುದಕ್ಕೆ ತಮ್ಮ ಡಂಪಿಂಗ್ ಯಾರ್ಡ್‌ಗಳನ್ನಾಗಿ ಮಾಡಿಕೊಳ್ಳುತ್ತಿವೆ. ಇದರ ಅಂಗವಾಗಿ ಅಮೆರಿಕಾ ಮತ್ತು ಭಾರತ ನಡುವಿನ ಮುಕ್ತ ವ್ಯಾಪಾರ ಒಪ್ಪಂದ ಏರ್ಪಡುತ್ತಿದೆ ಎಂದು ಆರೋಪಿಸಿದರು.

ಇದೇ ವೇಳೆ ಸರ್ಕಾರದ ಎಥೆನಾಲ್ ನೀತಿಗಳು, ಕೋಳಿ ಮತ್ತು ಹೈನುಗಾರಿಕೆ ಉದ್ಯಮಗಳಿಂದ ಬಲವಾದ ದೇಶೀಯ ಬೇಡಿಕೆಯಿಂದಾಗಿ ರೈತರ ಸಂಖ್ಯೆ ಗಮನಾರ್ಹವಾಗಿ ಹೆಚ್ಚುತ್ತಿದೆ. ಆದರೆ ಮುಕ್ತ ವ್ಯಾಪಾರ ಒಪ್ಪಂದದಿಂದಾಗಿ ಹಲವಾರು ಮೆಟ್ರಿಕ್ ಟನ್‌ಗಳಷ್ಟು ಮೆಕ್ಕೆ ಜೋಳವನ್ನು ಸುಂಕವಿಲ್ಲದೇ ಇಲ್ಲಿಗೆ ತಂದು ಸುರಿದರೆ ಭಾರತ ಮೆಕ್ಕೆಜೋಳ ಬೆಳೆಯುವ ರೈತರ ಪರಿಸ್ಥಿತಿ ಏನಾಗಬಹುದೆಂಬುದನ್ನು ಊಹಿಸಲೂ




ಸಾಧ್ಯವಿಲ್ಲ. ಇದೇ ವೇಳೆ ಹಾಲಿನ ಪುಡಿ, ಚೀಸ್, ವೇ ಪ್ರೋಟೀನ್, ಹಾಲಿನ ಘನ ವಸ್ತುಗಳಂತಹ ಡೈರಿ ಉತ್ಪನ್ನಗಳನ್ನು ಅಮೆರಿಕಾದಿಂದ ಸುಂಕ ರಹಿತವಾಗಿ ಇಲ್ಲಿಗೆ ತರಿಸಿಕೊಂಡರೆ ಇಲಿನ ಹೈನೋದ್ಯಮ ನೆಲ ಕಚ್ಚುತ್ತದೆ. ಭಾರತದಲ್ಲಿ ಪ್ರಮುಖವಾಗಿ ಮಹಿಳೆಯರೇ ಹೆಚ್ಚಾಗಿ ಹೈನುಗಾರಿಕೆಯಲ್ಲಿ ತೊಡಗಿದ್ದು, ಇವರೆಲ್ಲರೂ ಬೀದಿ ಪಾಲಾಗಬೇಕಾಗುತ್ತದೆ. ಆದ್ದರಿಂದ ಅಮೆರಿಕಾ ಜೊತೆಗಿನ ಮುಕ್ತ ವ್ಯಾಪಾರ ಒಪ್ಪಂದಕ್ಕೆ ಭಾರತ ಸಹಿ ಹಾಕಬಾರದೆಂದು ಆಗ್ರಹಿಸಿದರು.

ಇನ್ನಿತರ ಪದಾಧಿಕಾರಿಗಳಾದ ಮಂಜುಕಿರಣ್, ಹೊನ್ನೂರು ಪ್ರಕಾಶ್, ಶಿರಮಳ್ಳಿ ಮಂಜಣ್ಣ, ಕಣ್ಣಯ್ಯನ್ ಇದ್ದರು.

# ಡಿಕೆಶಿಗಾಗಿ ಚಾಮುಂಡಿ ಬೆಟ್ಟದಲ್ಲಿ ಪ್ರಾರ್ಥನೆ



ಮೈಸೂರು: ರಾಜ್ಯ ಕಾಂಗ್ರೆಸ್ ನಲ್ಲಿ ಸಿಎಂ ಕುರ್ಚಿ ಚರ್ಚೆ ಕೂತೂಹಲ ಘಟ್ಟ ತಲುಪಿರುವ ಈ ಸನ್ನಿ ವೇಶದಲ್ಲಿ ಡಿಸಿಎಂ ಡಿಕೆ.ಶಿವಕುಮಾರ್ ಮುಖ್ಯ ಮಂತ್ರಿ ಆಗಲೆಂದು ಮಂಡ್ಯ ಜಿಲ್ಲೆಯ ಜೆಡಿಎಸ್, ಬಿಜೆಪಿಯ ಕಾರ್ಯಕರ್ತರು ಸಿಎಂ ಸಿದ್ದರಾಮಯ್ಯ ತವರಿನ ಮೈಸೂರಿನ ಚಾಮುಂಡಿ ಬೆಟ್ಟಕ್ಕೆ ತೆರಳಿ 1001 ಈಡುಗಾಯಿ ಒಡೆದು ಪ್ರಾರ್ಥಿಸಿದ್ದಾರೆ.

ಮಂಡ್ಯ ಜಿಲ್ಲೆಯ ಜೆಡಿಎಸ್ ಹಾಗೂ ಬಿಜೆಪಿ ಮುಖಂಡರು ಹಾಗೂ ಡಿಕೆಶಿ ಅಭಿಮಾನಿಗಳಾದ ರಾಜು, ವೇಣು ಹಾಗೂ ನಂಜುಂಡಸ್ವಾಮಿ ನೇತೃತ್ವ ದಲ್ಲಿ ಪೂಜೆ ವಿಶೇಷ ಪೂಜೆ ಸಲ್ಲಿಸಿದ್ದಾರೆ. ನೂರಕ್ಕೂ ಹೆಚ್ಚು ಅಭಿಮಾನಿಗಳಿಂದ ತಾಯಿ ದರ್ಶನ ಪಡೆದು ಪೂಜೆ ನೇರವೇರಿಸಿ ಡಿಕೆ.ಶಿವಕುಮಾರ್ ಸಿಎಂ ಆಗಲಿ ಎಂದು ಬೇಡಿಕೊಂಡು ಹೀಡುಗಾಯಿ ಹೊಡೆದಿದ್ದಾರೆ. ಡಿಕೆಶಿ ಅಭಿಮಾನಿಗಳಿಂದ ಸಾವಿರ ತೆಂಗಿನಕಾಯಿ ಹೊಡೆದು ದೇವರಲ್ಲಿ ಮೊರೆ ಹೋಗಿದ್ದಾರೆ. ಯುವಕರು, ಮಹಿಳೆಯರು, ಮಕ್ಕಳು ಸೇರಿ ನೂರಾರು ಅಭಿಮಾನಿಗಳಿಂದ ಹೀಡುಗಾಯಿ ಸಮರ್ಪಿಸಿ, ಪ್ರಾರ್ಥಿಸಿದ್ದಾರೆ.

ಅಲ್ಲದೆ, ಡಿಕೆಶಿ ಪರ ಘೋಷಣೆ ಕೂಗಿದ ಅಭಿಮಾನಿಗಳು, ಕಾರ್ಯಕರ್ತರು ಡಿ.ಕೆ.ಶಿವಕುಮಾರ್ ಮುಖ್ಯಮಂತ್ರಿ ಆಗಲಿ ಎಂದು ಹರಕೆ ಮಾಡಿ 1001 ತೆಂಗಿನ ಕಾಯಿಯನ್ನು ಒಡೆದಿರುವುದಾಗಿ ತಿಳಿಸಿದ್ದಾರೆ.

### 15ನೇ ವರ್ಷದ ಕನ್ನಡ ರಾಜ್ಯೋತ್ಸವ


# ಚಾಲಕರು ಕನ್ನಡ ಭಾಷೆಯ ಸಂಪರ್ಕ ರಾಯಭಾರಿಗಳು: ಪ್ರೊ.ರಾಗೌ

ಮೈಸೂರು: ಚಾಲಕರು ಕನ್ನಡ ಭಾಷೆಯ ಸಂಪರ್ಕ ರಾಯಭಾರಿಗಳು ಎಂದು ಹಿರಿಯ ವಿದ್ವಾಂಸ ಡಾ. ರಾಗೌ ಬಣ್ಣಿಸಿದರು.

ಮೈಸೂರು ಜಿಲ್ಲಾ ಪ್ರವಾಸಿ ವಾಹನ ಚಾಲಕರು ಮತ್ತು ಮಾಲೀಕರ ಯೋಗಕ್ಷೇಮಾಭಿವೃದ್ಧಿ ಸಂಘವು ಪ್ರವಾಸಿ ವಾಹನ ಚಾಲಕರ ಸಹಕಾರ ಸಂಘದ ಸಹಯೋಗದಲ್ಲಿ ವಿಜಯನಗರ ಜಿಲ್ಲಾ ಕನ್ನಡ ಸಾಹಿತ್ಯ ಭವನದಲ್ಲಿ ಗುರುವಾರ ಏರ್ಪಡಿಸಿದ್ದ 15ನೇ ವರ್ಷದ ಕನ್ನಡ ರಾಜ್ಯೋತ್ಸವದ ಅಧ್ಯಕ್ಷತೆ ವಹಿಸಿ ಮಾತನಾಡಿದ ಅವರು, ಏಕೆಂದರೆ ಹೊರ ರಾಜ್ಯ ಹಾಗೂ ವಿದೇಶಗಳಿಂದ ಬರುವ ಪ್ರವಾಸಿಗರಿಗೆ ಕನ್ನಡನಾಡಿನ ಪ್ರವಾಸಿತಾಣಗಳ ಬಗ್ಗೆ ಮಾಹಿತಿ ನೀಡುತ್ತಾರೆ. ಕನ್ನಡ ಭಾಷೆಯ ಬಗ್ಗೆಯೂ ತಿಳಿಸಿಕೊಡುತ್ತಾರೆ ಎಂದರು.

ಇವತ್ತು ಕನ್ನಡ ಉಳಿದಿರುವುದು ರೈತರು, ಕಾರ್ಮಿಕರು, ಆಟೋರಿಕ್ಷಾ ಹಾಗೂ ಪ್ರವಾಸಿ ವಾಹನ ಚಾಲಕರಿಂದ. ಅವರಂತೆ ಎಲ್ಲರೂ ಕನ್ನಡ ಬಳಸಿದರೆ ಭಾಷೆ ತಾನಾಗಿಯೇ ಬೆಳೆಯುತ್ತದೆ ಎಂದು ಹೇಳಿದರು.

ಈಗ ಹೋಟೆಲ್‌ಗಳಲ್ಲಿ ಕನ್ನಡ ಸಪ್ಲೈಯರ್‌ಗಳು




ಸಿಗುತ್ತಿಲ್ಲ. ಏಕೆಂದು ವಿಚಾರ ಮಾಡಬೇಕು ಎಂದು ಸಲಹೆ ಮಾಡಿದ ಅವರು, ಕನ್ನಡ ಕಟ್ಟುವ ಕೆಲಸದಲ್ಲಿ ಮಹಿಳೆಯಕ ಪಾತ್ರ ಬಹಳ ಮುಖ್ಯ ಎಂದರು.

ಭಾರೀ ಹೋರಾಟದ ನಂತರ ಭಾಷಾವಾರು ಪ್ರಾಂತ್ಯಗಳ ರಚನೆಯಾಯಿತು. ಆದರೆ ಇವತ್ತು ಕಾಸರಗೋಡು ಸೇರಿದಂತೆ ಕೆಲವೊಂದು ಪ್ರಮುಖ ಸ್ಥಳಗಳು ನಮ್ಮ ರಾಜ್ಯದ ವ್ಯಾಪ್ತಿಗೆ ಬಂದಿಲ್ಲ. ಸ್ವಾತಂತ್ರ್ಯಪೂರ್ವದಲ್ಲಿ ನಮ್ಮನ್ನು ಆಳುತ್ತಿದ್ದ ಆಂಗ್ಲರು ವ್ಯವಹಾರಿಕ ಕಾರಣಕ್ಕಾಗಿ ಇಂಗ್ಲಿಷ್ ಹೇರಿದರು. ನಮ್ಮ ಭಾಷೆಯ ಬಗ್ಗೆ ಐತಿಹಾಸಿಕ ಪ್ರಜ್ಞೆ ಇರಬೇಕು. ಅಲ್ಲದೇ ಬೇರೆ ಬೇರೆ ಭಾಷೆಗಳಿಂದ ಪದಗಳನ್ನು ಸ್ವೀಕರಿಸಿ, ಇಂಗ್ಲಿಷ್ ಬೆಳೆಸಿದರು. ಇದೇ ರೀತಿ ಪ್ರಾದೇಶಿಕ ಭಾಷೆಗಳು ಸಹ ಗಟ್ಟಿತನವನ್ನು, ಇಚ್ಛಾಶಕ್ತಿಯನ್ನು ಪ್ರದರ್ಶಿಸಬೇಕು ಎಂದರು

ಬಿಐಟಿ ನಿರ್ದೇಶಕ ಮಹೇಂದ್ರ ಸಾಲಿಯನ್ ಮಾತನಾಡಿ, ಹೊರಗಿನಿಂದ ಬಂದವರು ಇಲ್ಲಿನ ಭಾಷೆಯನ್ನು ಕಡ್ಡಾಯವಾಗಿ ಕಲಿಯಬೇಕು ಎಂದು ಆಗ್ರಹಿಸಿದರು.

ಟ್ರಾವೆಲ್ ಪಾರ್ಕ್ ಮಾಲೀಕ ಸಿ.ಟಿ. ಜಯ ಕುಮಾರ್ ಮಾತನಾಡಿ, ಮೈಸೂರು ರಾಜಮಹಾರಾಜರ ಕೊಡುಗೆಯಿಂದಾಗಿ ಪ್ರವಾಸೋದ್ಯಮ ಹೆಸರುವಾಸಿಯಾಗಿದ್ದು, ನಮ್ಮ ಜೀವನಕ್ಕೆ ದಾರಿಯಾಗಿದೆ ಎಂದು ಕೃತಜ್ಞತೆಯಿಂದ ಸ್ಮರಿಸಿದರು. ಪ್ರವಾಸಿ ಗೈಡ್‌ಗಳ ಸಂಘದ ಅಧ್ಯಕ್ಷ ಅಶೋಕ್ ಮಾತನಾಡಿ, ನಮ್ಮ ಭಾಷೆ, ಆಚಾರ– ವಿಚಾರದಲ್ಲಿ ವಿಷಯದಲ್ಲಿ ಯಾವುದೇ ರಾಜಿ ಬೇಡ ಎಂದರು.

ಸಂಘದ ಅಧ್ಯಕ್ಷ ಎಸ್. ನಾಗರಾಜು ಮಾತನಾಡಿ, ಆಟೋರಿಕ್ಷಾಗಳ ದರ ಪರಿಷ್ಕರಣೆಯಾಗಿದೆ. ಅದೇ ರೀತಿ ಟ್ಯಾಕ್ಸಿಗಳ ದರ ಕೂಡ ಪರಿಷ್ಕರಣಯಾಗಬೇಕು. ಚಾಲಕರಿಗೆ ಸಿಗಬೇಕಾದ ಸೌಲಭ್ಯಗಳನ್ನು ಒದಗಿಸಿಕೊಡಬೇಕು ಎಂದು ಆಗ್ರಹಿಸಿದರು. ಈ ಬಾರಿಯ ಕರ್ನಾಟಕ ಸರ್ಕಾರದ ರಾಜ್ಯೋತ್ಸವ ಪ್ರಶಸ್ತಿ ಪುರಸ್ಕೃತ ಹಿರಿಯ ಪತ್ರಕರ್ತ ಅಂಶಿ ಪ್ರಸನ್ನಕುಮಾರ್, ಪ್ರವಾಸೋದ್ಯಮ ಇಲಾಖೆ ಸಹಾಯಕ ನಿರ್ದೇಶಕ ವಿ.ಎಂ. ಪ್ರಭುಸ್ವಾಮಿ, ಅತ್ಯುತ್ತಮವಾಗಿ ಸೇವೆ ಸಲ್ಲಿಸುತ್ತಿರುವ ಚಾಲಕರಾದ ರಂಗಸ್ವಾಮಿ,ಲಕ್ಷ್ಮೀಕಾಂತರಾವ್ ಹಾಗೂ ಮೊಹಮದ್ ಸಾದಿಕ್ ಅವರನ್ನು ಸನ್ಮಾನಿಸಲಾಯಿತು. ,ರಾಜ್ಯೋತ್ಸವ ಸಮಿತಿ ಅಧ್ಯಕ್ಷ ಎಸ್. ಮಂಜುನಾಥ್, ಡೇವಿಡ್, ಸಂಘದ ಉಪಾಧ್ಯಕ್ಷ ಆರ್. ಪ್ರಭಾಕರ್, ಕಾರ್ಯದರ್ಶಿ ಕೆ.ಟಿ. ದಿವಾಕರ್, ಖಜಾಂಚಿ ಪುಟ್ಟಬುದ್ಧಿ, ಉಪ ಕಾರ್ಯದರ್ಶಿ ಮಹಮದ್ ಸೌಲತ್ ಅಲಿ, ನಿರ್ದೇಶಕರಾದ ಆರ್. ನಾಗರಾಜ್, ಬಾಲಾಜಿ ಸಿಂಗ್, ರಂಗಸ್ವಾಮಿ, ಚಂದ್ರಶೇಖರ ಸ್ವಾಮಿ, ಎಸ್. ಮಂಜುನಾಥ್, ಯು. ಮಂಜುನಾಥ್, ಸಂತೋಷ್. ಜಿ.ಕೆ. ಶ್ರೀನಿವಾಸ್, ಶಿವು ಸೇರಿದಂತೆ ಸಂಘದ ಎಲ್ಲಾ ಸದಸ್ಯರು ಇದ್ದರು. ಮಂಜುಶ್ರೀ ಕಾರ್ಯಕ್ರಮ ನಿರೂಪಿಸಿದರು. ತಾರಾ, ಕೃಷ್ಣಮೂರ್ತಿ ಗೀತಗಾಯನ ನಡೆಸಿಕೊಟ್ಟರು. ಆರಂಭದಲ್ಲಿ ಖ್ಯಾತ ಕಾದಂಬರಿಕಾರ ಎಸ್.ಎಲ್. ಭೈರಪ್ಪ ಅವರಿಗೆ ಶ್ರದ್ಧಾಂಜಲಿ ಅರ್ಪಿಸಲಾಯಿತು





## *"ಕೊರಗಜ್ಜ" ಹಾಡಿಗೆ ದೈವ ರಕ್ಷೆ

ಇತ್ತೀಚೆಗೆ ಜೀ಼ ಮ್ಯೂಜಿಕ್ ಮೊತ್ತಮೊದಲ ಬಾರಿಗೆ ಕನ್ನಡದಲ್ಲಿ ಬಿಡುಗಡೆ ಗೊಳಿಸಿದ "ಕೊರಗಜ್ಜ" ಚಿತ್ರದ, ಜಾವೆದ್ ಅಲಿ ಮತ್ತು ಸುಧೀರ್ ಅತ್ತಾವರ್ ಹಾಡಿರುವ,ಗೋಪಿ ಸುಂದರ್ ಸಂಗೀತ ಮತ್ತು ಸುಧೀರ್ ಅತ್ತಾವರ್ ಸಾಹಿತ್ಯದ ಗುಳಿಗಾ...ಗುಳಿಗಾ... ಹಾಡಿನ ಅಬ್ಬರ ದೇಶದೆಲ್ಲೆಡೆ ಹಬ್ಬಿ ಹವಾ ಎಬ್ಬಿಸುತ್ತಿರುವಂತೆಯೇ, ಭಯಂಕರ ಉಗ್ರ ರೂಪದ ಕಾರಣಿಕದ "ಗುಳಿಗದೈವ" ಈ ಹಾಡಿನಿಂದ ಕ್ರೋಧ ಗೊಂಡಿರಬಹುದೇ ಅಥವ ದೈವಕ್ಕೆ ಅಪಚಾರಾಗಿರಬಹುದೇ ಎಂಬ ಎಂಬ ಸಂಶಯದಿಂದ ಇಂದು ನಿರ್ದೇಶಕ ಸುಧೀರ್ ಅತ್ತಾವರ್ ರವರು ಕೇರಳದ ತ್ರಿಶೂರ್ ನಲ್ಲಿರುವ ಮಂಗಳೂರು ಮೂಲದ ಪ್ರಸಿದ್ಧ ಜ್ಯೋತಿಷ್ಯ ವಿಧ್ವಾನ್ ವರುಣ್ ಭಟ್ ರವರಲ್ಲಿ ಪ್ರಶ್ನೆ ಇಟ್ಟು ಕೇಳಿದಾಗ: ಚಿಂತನ-ಮಂತನ ನಡೆಸಿ ;ವೃಶ್ಚಿಕ ರಾಶಿ,ಒಂಭತ್ತರಲ್ಲಿ ಗುರು, ಐದರಲ್ಲಿ ಗುಳಿಗ, ಶನಿ ಎಲ್ಲಾ ಇರುವುದರಿಂದ...ಗುಳಿಗನಿಗೆ ಸಂಪೂರ್ಣ ತ್ರಪ್ತಿ, ಸಂತೋಷ ಎಲ್ಲಾ ಇದೆ. ಕೊರಗಜ್ಜನಿಗೂ ಸಂತೋಷವಿದೆ, ದೇವರ ಆಶಿರ್ವಾದವೂ ಇದೆ ಎಂಬ ವಿಚಾರ ತಿಳಿದು ಬಂತು.

ಗುಳಿಗಾ ..ಗುಳಿಗಾ ಹಾಡಿನ ಬಗ್ಗೆ ಸೋಷಿಯಲ್ ಮೇಡಿಯಾದಲ್ಲಿ ಪರ-ವಿರೋಧ ಚರ್ಚೆಕೂಡಾ ಜೋರಾಗಿ ಸಾಗುತ್ತಿದೆ. ಇನ್ನು ಕೆಲವು ವಿಕ್ರತ ಮನಸ್ಥಿತಿಯವರಂತೂ ನಿರ್ದೇಶಕರಿಗೆ ಸೇರಿ ಚಿತ್ರತಂಡಕ್ಕೆ ಉರಿ ಶಾಪಹಾಕುವ ಕಮೆಂಟ್ ಗಳನ್ನು ಪೋಸ್ಟ್ ಮಾಡಿದ್ದಾರೆ.ಅಲ್ಲದೆ ಗುಳಿಗ ದೈವವೇ ರಕ್ತ ಕಾರಿ ಸಾಯಿಸುತ್ತದೆ ಎಂಬಿತ್ಯಾದಿ ವಿಕ್ರತ ಮನಸ್ಸಿನಿಂದ, ಮತ್ಸರದಿಂದ ಕಮೆಂಟ್ ಗಳನ್ನು ಹಾಕುತ್ತಿದ್ದಾರೆ.

ಪ್ರಶ್ನೆಯ ಮೂಲಕ ಜ್ಯೋತಿಷ್ಯ ದಲ್ಲಿ ಗುಳಿಗನಿಗೆ ತ್ರಪ್ತಿ ಇರುವ ವಿಚಾರ ಕೇಳಿ ನಿರ್ಮಾಪಕ ತ್ರಿವಿಕ್ರಮ ಸಪಲ್ಯ ಹಾಗೂ ಸಕ್ಸಸ್ ಫಿಲ್ಮ್ಸ ನ ವಿದ್ಯಾಧರ್ ಶೆಟ್ಟಿ ಹರ್ಷಗೊಂಡಿದ್ದಾರೆ.

ಜನರು ಅನಗತ್ಯವಾದ ಕೆಟ್ಟ ಕಮೆಂಟ್ ಹಾಕಿ ಕಿರಿ ಕಿರಿ ಮಾಡದೆ, ಚಿತ್ರದ ಯಶಸ್ಸಿಗೆ ಸಹಕರಿಸಬೇಕೆಂದು ಕೂಡಾ ನಿರ್ಮಾಪಕರು ಮನವಿ ಮಾಡಿರುತ್ತಾರೆ.

ತ್ರಿವಿಕ್ರಮ ಸಿನೆಮಾಸ್ ಮತ್ತು ಸಕ್ಸಸ್ ಫಿಲ್ಮ್ಸ ಬ್ಯಾನರ್ ಅಡಿಯ , ಬಹುನಿರೀಕ್ಷಿತ ಪ್ಯಾನ್ ಇಂಡಿಯಾ "ಕೊರಗಜ್ಜ" ಚಿತ್ರ ಜನವರಿ ಬಿಡುಗಡೆಗೊಳ್ಳುವ ನಿಟ್ಟಿನಲ್ಲಿ ಪ್ರಮೋಷನ್ ಕೆಲಸ ಭರದಿಂದ ಸಾಗುತ್ತಿದೆ.

## ಓ.ಎಲ್.ಸಿ ಈ ವಾರ ತೆರೆಗೆ

ಕವೀಶ್ ಶೆಟ್ಟಿ ಮತ್ತು ಮೇಘ ಶೆಟ್ಟಿ ಕಾಂಬಿನೇಷನ್ನಿನ ಕನ್ನಡ, ಮರಾಠಿ, ಹಿಂದಿ, ತೆಲುಗು, ತಮಿಳು ಹಾಗೂ ಮಲಯಾಳಂ ಭಾಷೆಗಳಲ್ಲಿ ನಿರ್ಮಾಣವಾಗಿರುವ 'ಓ.ಎಲ್.ಸಿ'(ಆಪರೇಷನ್ ಲಂಡನ್ ಕೆಫೆ) ಚಿತ್ರ ನವೆಂಬರ್ 28ರಂದು ರಾಜ್ಯಾದ್ಯಂತ ಅದ್ದೂರಿಯಾಗಿ ಬಿಡುಗಡೆಯಾಗಲಿದೆ. ಬಿಡುಗಡೆಗೂ ಪೂರ್ವದಲ್ಲಿ ಆಯೋಜಿಸಲಾಗಿದ್ದ ಪ್ರೀ ರಿಲೀಸ್ ಇವೆಂಟ್ ನಲ್ಲಿ ಹಿರಿಯ ನಿರ್ದೇಶಕ ಶಶಾಂಕ್ ।ವಿ.ನಾಗೇಂದ್ರಪ್ರಸಾದ್ ಬರೆದಿರುವ "ವೆಲ್ಕಮ್ ಟು ಜಂಗಲ್" ಹಾಡು ಬಿಡುಗಡೆ ಮಾಡಿ ಚಿತ್ರ ಯಶಸ್ವಿಯಾಗಲೆಂದು ಹಾರೈಸಿದರು. ನಂತರ ಚಿತ್ರತಂಡದ ಸದಸ್ಯರು ಮಾತನಾಡಿದರು.

ಮೊದಲು ಮಾತನಾಡಿದ ನಿರ್ದೇಶಕ ಸಡಗರ ರಾಘವೇಂದ್ರ, ನಾನು ಶಶಾಂಕ್ ಅವರ ಜೊತೆಗೆ ಸಹ ನಿರ್ದೇಶಕನಾಗಿ ಕೆಲಸ ಮಾಡಿದ್ದೇನೆ. "ಓ.ಎಲ್.ಸಿ" ನನ್ನ ಮೊದಲ ನಿರ್ದೇಶನದ ಚಿತ್ರ. ಈ ಚಿತ್ರದ ನಾಯಕನಾಗಿ ನಟಿಸಿರುವ ಕವೀಶ್ ಶೆಟ್ಟಿ ನಟಿಸಿದ್ದಾರೆ. ನಾಯಕಿಯಾಗಿ ಮೇಘ ಶೆಟ್ಟಿ ಅಭಿನಯಿಸಿದ್ದಾರೆ. ಮರಾಠಿ ಭಾಷೆಯ ಶಿವಾನಿ ಪ್ರಮುಖಪಾತ್ರದಲ್ಲಿದ್ದಾರೆ. ಇನ್ನೂ, ನಿರ್ಮಾಪಕರು ಯಾವುದೇ ಕೊರತೆ ಬಾರದ ಹಾಗೆ ಸಿನಿಮಾ ಮಾಡಿದ್ದಾರೆ. ಚಿತ್ರ ಚೆನ್ನಾಗಿ ಬರಲು ಚಿತ್ರತಂಡದ ಸದಸ್ಯರು ಸಹಕಾರ ನೀಡಿದ್ದಾರೆ. ಇದೊಂದು ನಕ್ಸಲಿಸಂ ಬೇಸಾಗಿಟ್ಟಕೊಂಡು ಹೆಣೆದಿರುವ ಕಥೆ. ಹಾಗಂತ ನಕ್ಸಲಿಸಂನ ವೈಭವಿಕರಿಸಿಲ್ಲ. ಯಾವುದೇ ಒಬ್ಬ ವ್ಯಕ್ತಿಯ ಕುರಿತಾದ ಚಿತ್ರವೂ ಇದಲ್ಲ. ಇದು ಆಫ್ಟರ್ "ಆಪರೇಷನ್ ಲಂಡನ್ ಕೆಫೆ". ಕನ್ನಡ ಹಾಗೂ ಮರಾಠಿ ಎರಡೂ ಭಾಷೆಯಲ್ಲಿ ನೇರವಾಗಿ ಚಿತ್ರೀಕರಣ ಮಾಡಲಾಗಿದೆ. ಉಳಿದಂತೆ ಹಿಂದಿ, ತೆಲುಗು, ತಮಿಳು ಹಾಗೂ ಮಲೆಯಾಳಂನಲ್ಲೂ ಚಿತ್ರ ಬಿಡುಗಡೆಯಾಗಲಿದೆ. ಕನ್ನಡ ಕಲಾವಿದರು ಮರಾಠಿ ಕಲಿತು, ಮರಾಠಿ ಕಲಾವಿದರು ಕನ್ನಡ ಕಲಿತು ಅಭಿನಯಿಸಿರುವುದು ಈ ಚಿತ್ರದ ವಿಶೇಷ. ಮೊದಲು ಕನ್ನಡದಲ್ಲಿ ನವೆಂಬರ್ 28 ರಂದು ಕನ್ನಡದಲ್ಲಿ ಮಾತ್ರ ಚಿತ್ರ ಬಿಡುಗಡೆಯಾಗಲಿದೆ ಎಂದರು.

"ಮುಂಗಾರು ಮಳೆ 2" ಚಿತ್ರದಲ್ಲಿ ಶಶಾಂಕ್ ಅವರ ಜೊತೆಗೆ ನಾನು ಸಹಾಯಕ ನಿರ್ದೇಶಕನಾಗಿ ಹಾಗೂ ಸಡಗರ ರಾಘವೇಂದ್ರ ಅವರು ಸಹ ನಿರ್ದೇಶಕನಾಗಿ ಕಾರ್ಯ ನಿರ್ವಹಿಸಿದ್ದೆವು. ಈ ಚಿತ್ರಕ್ಕೆ ನಾನೇ ಕಥೆ ಬರೆದು, ನಾಯಕನಾಗೂ ನಟಿಸಿದ್ದೇನೆ ಎಂದು ಕವೀಶ್ ಶೆಟ್ಟಿ ತಿಳಿಸಿದರು

ನಾನು ಈ ಚಿತ್ರದಲ್ಲಿ ಬಜಾರಿ ಹುಡುಗಿಯಾಗಿ ಕಾಣಿಸಿಕೊಂಡಿದ್ದೇನೆ. ಸಡಗರ ರಾಘವೇಂದ್ರ ಅವರು ತಮ್ಮ ಮೊದಲ ನಿರ್ದೇಶನದಲ್ಲೇ ಉತ್ತಮವಾಗಿ ಕೆಲಸ ಮಾಡಿದ್ದಾರೆ. ಕವೀಶ್ ಶೆಟ್ಟಿ ಬರೆದಿರುವ ಕಥೆ ಚೆನ್ನಾಗಿದೆ. ಒಳ್ಳೆಯ ತಂಡದ ಜೊತೆಗೆ ಕೆಲಸ ಮಾಡಿರುವ ಖುಷಿಯಿದೆ ಎಂದರು ಮೇಘ ಶೆಟ್ಟಿ. ಅಂದುಕೊಂಡ ಬಜೆಟ್ ಗಿಂತ ಸ್ವಲ್ಪ ಹೆಚ್ಚಾಗಿದೆ. ಆದರೆ ಸಿನಿಮಾ ನೋಡಿದಾಗ ಬಹಳ ಖುಷಿಯಾಗಿದೆ. ಚಿತ್ರತಂಡದ ಸಹಕಾರದಿಂದ ಚಿತ್ರ ಚೆನ್ನಾಗಿ ಬಂದಿದೆ. ನವೆಂಬರ್ 28 ರಂದು ನಮ್ಮ ಚಿತ್ರ ತೆರೆಗೆ ಬರಲಿದೆ. ನಿಮ್ಮೆಲ್ಲರ ಪ್ರೋತ್ಸಾಹವಿರಲಿ ಎಂದರು ನಿರ್ಮಾಪಕರಾದ ವಿಜಯ್ ಕುಮಾರ್ ಶೆಟ್ಟಿ, ರಮೇಶ್ ಕೊಠಾರಿ, ವಿವೇಕ್ ಶೆಟ್ಟಿ ಬಾರ್ಕೂರ್ ಹಾಗೂ ವಿಜಯ್ ಪ್ರಕಾಶ್.

ಮರಾಠಿ ನಟಿ ಶಿವಾನಿ ತಮ್ಮ ಪಾತ್ರದ ಬಗ್ಗೆ ಮಾಹಿತಿ ನೀಡಿದರು. ಛಾಯಾಗ್ರಾಹಕ ನಾಗಾರ್ಜುನ್, ಕಲಾ ನಿರ್ದೇಶಕ ವರದರಾಜ್ ಸಮಾರಂಭದಲ್ಲಿ ಉಪಸ್ಥಿತರಿದ್ದರು. ಪ್ರಾಂಶು ಝಾ ಈ ಚಿತ್ರಕ್ಕೆ ಸಂಗೀತ ನೀಡಿದ್ದಾರೆ.



## ಸೃಜನ್ ಲೋಕೇಶ್ ನಿರ್ದೇಶನ "GST" ಈ ವಾರ ತೆರೆಗೆ



"GST" ಚಿತ್ರ ಹಲವು ವಿಶೇಷತೆಗಳನ್ನೊಳಗೊಂಡಿದೆ. ಈ ಚಿತ್ರದಲ್ಲಿ ನಿರ್ಮಾಪಕ ಸಂದೇಶ್ ಅವರು ಪ್ರಮುಖಪಾತ್ರದಲ್ಲಿ ನಟಿಸಿದ್ದಾರೆ. ಅವರ ಪಾತ್ರ ಏನೆಂಬುದ್ದನ್ನು ನಿರ್ದೇಶಕ ಸೃಜನ್ ಲೋಕೇಶ್ ಗುಪ್ತವಾಗಿಟ್ಟಿದ್ದಾರೆ. ಇನ್ನು ಈ ಚಿತ್ರದಲ್ಲಿ ಗಿರಿಜಾ ಲೋಕೇಶ್, ಸೃಜನ್ ಲೋಕೇಶ್ ಹಾಗೂ ಸೃಜನ್ ಅವರ ಪುತ್ರ ಸುಕೃತ್ ಮೂರು ಜನ ಅಭಿನಯಿಸಿದ್ದಾರೆ. ಅಜ್ಜಿ, ಮಗ ಹಾಗೂ ಮೊಮ್ಮಗ ಮೂರು ಜನರನ್ನು ಒಟ್ಟಿಗೆ ತೆರೆಯ ಮೇಲೆ ಈ ಚಿತ್ರದಲ್ಲಿ ನೋಡಬಹುದು. ತಮ್ಮ ನಿರ್ದೇಶನದ ಮೊದಲ ಚಿತ್ರದಲ್ಲೇ ಸೃಜನ್ ತಮ್ಮ ತಾಯಿ ಹಾಗೂ ಮಗನಿಗೆ ಆಕ್ಷನ್ ಕಟ್ ಹೇಳಿದ್ದಾರೆ. ಮನೋರಂಜನೆಯೇ ಪ್ರಧಾನವಾಗಿರುವ "ಉಖಿ" ಚಿತ್ರಕ್ಕೆ "ಘೋಸ್ಟ್ ಇನ್ ಟ್ರಬಲ್" ಎಂಬ ಅಡಿಬರಹವಿದೆ.

ಸೃಜನ್ ಲೋಕೇಶ್ ಅವರಿಗೆ ನಾಯಕಿಯಾಗಿ ರಜನಿ ಭಾರದ್ವಾಜ್ ನಟಿಸಿದ್ದಾರೆ. ಪ್ರಮೋದ್ ಶೆಟ್ಟಿ, ಗಿರಿಜಾ ಲೋಕೇಶ್, ಶೋಭ್ ರಾಜ್, ಶರತ್ ಲೋಹಿತಾಶ್ವ, ನಿವೇದಿತಾ, ಅರವಿಂದ್ ರಾವ್, ತಬಲ ನಾಣಿ, ರವಿಶಂಕರ್ ಗೌಡ, ವಿನೋದ್ ಗೊಬ್ಬರಗಾಲ, ಮಾಸ್ಟರ್ ಸುಕೃತ್ ಮುಂತಾದವರು ಈ ಸಿನಿಮಾದ ತಾರಾಬಳಗದಲ್ಲಿದ್ದಾರೆ.

ಚಂದನ್ ಶೆಟ್ಟಿ ಸಂಗೀತ ನಿರ್ದೇಶನ ಹಾಗೂ ಗುಂಡ್ಲುಪೇಟೆ ಸುರೇಶ್ ಅವರ ಛಾಯಾಗ್ರಹಣವಿರುವ ಈ ಚಿತ್ರಕ್ಕೆ ರಾಜಶೇಖರ್ ಸಂಭಾಷಣೆ ಬರೆದಿದ್ದಾರೆ. ತೇಜಸ್ವಿ ಕೆ ನಾಗ್ ಈ ಚಿತ್ರದ ಸಹ ನಿರ್ದೇಶಕರು.

## "ನಡುಬೆಟ್ಟು ಅಪ್ಪಣ್ಣ" ಚಲನಚಿತ್ರೋತ್ಸವದಲ್ಲಿ!



ಭವಿಷ್ಯ ಸಿನಿಮಾಸ್ ಲಾಂಛನದಲ್ಲಿ ನಿರ್ಮಾಣವಾಗಿರುವ ಸಂಪೂರ್ಣ ಅರೆ ಭಾಷೆಯ "ನಡುಬೆಟ್ಟು ಅಪ್ಪಣ್ಣ" ಚಿತ್ರ ತೆರೆಗೆ ಬರಲು ಸಿದ್ದವಾಗಿದೆ. ಬಿಡುಗಡೆಗೂ ಪೂರ್ವದಲ್ಲೇ ಕೊಲ್ಕತ್ತಾ ಅಂತರಾಷ್ಟ್ರೀಯ ಚಲನಚಿತ್ರೋತ್ಸವದಲ್ಲಿ ಎರಡು ದಿನ ಹಾಗೂ ಮೈಸೂರು ದಸರಾ ಚಲನಚಿತ್ರೋತ್ಸವದಲ್ಲಿ ಈ ಚಿತ್ರ ಪ್ರದರ್ಶನಗೊಂಡಿದೆ. ಚಲನಚಿತ್ರೋತ್ಸವಗಳಲ್ಲಿ ಈ ಚಿತ್ರವನ್ನು ವೀಕ್ಷಿಸಿದವರು ಮೆಚ್ಚುಗೆಯ ಮಹಾಪೂರವನ್ನೇ ಹರಿಸಿದ್ದಾರೆ. ಮೂಲತಃ ಗಾಯಕಿಯಾಗಿರುವ ಅನುಪಮ ಶರಧಿ ಅವರು ಈ ಚಿತ್ರವನ್ನು ನಿರ್ದೇಶಿಸಿದ್ದಾರೆ. ಕನ್ನಡ ಚಿತ್ರರಂಗದಲ್ಲಿ ಕೇವಲ ಬೆರಳೆಣಿಕೆಯಷ್ಟಿರುವ ನಿರ್ದೇಶಕಿಯರ ಸಾಲಿಗೆ ಅನುಪಮ ಅವರು ಸೇರ್ಪಡೆಯಾಗಿದ್ದಾರೆ. ಇದಕ್ಕೂ ಮೊದಲು ಕೆಲವು ಸರ್ಕಾರಿ ಡಾಕ್ಯುಮೆಂಟರಿಗಳನ್ನು ನಿರ್ದೇಶಿಸಿರುವ ಅನುಭವ ಅನುಪಮ ಅವರಿಗಿದೆ. ಈ ಚಿತ್ರಕ್ಕೆ ಕಥೆ, ಚಿತ್ರಕಥೆ ಹಾಗೂ ಸಂಭಾಷಣೆ ಬರೆದು ನಿರ್ದೇಶಿಸಿರುವ ಅನುಪಮ ಶರಧಿ, ನಿರ್ಮಾಪಕರೂ ಹೌದು. "ನಡುಬೆಟ್ಟು ಅಪ್ಪಣ್ಣ" ಕಥೆಯು "ದಬ್ಬಡ್ಕ" ಎಂಬ ದೂರದ ಹಳ್ಳಿಯಲ್ಲಿ ವಾಸಿಸುವ ಅಪ್ಪಣ್ಣ ಎಂಬ ಜಿಪುಣ ಮತ್ತು ಸ್ವಾರ್ಥಿ ವ್ಯಕ್ತಿ ಮತ್ತು ಅವನ ಕುಟುಂಬದ ಸುತ್ತ ಸುತ್ತುತ್ತದೆ. ಅವನು ಹಳ್ಳಿಯ ಕಷ್ಟಗಳ ಬಗ್ಗೆಯಾಗಲಿ ಅಥವಾ ಅವನ ಕುಟುಂಬದ ಅಗತ್ಯಗಳ ಬಗ್ಗೆಯಾಗಲಿ ಕಾಳಜಿ ವಹಿಸುವುದಿಲ್ಲ. ಅವನು ಸೇರಿದಂತೆ ಗ್ರಾಮಸ್ಥರು ಆಗಾಗ್ಗೆ ತಮ್ಮ ಮೇಲೆ ಮತ್ತು ತಮ್ಮ ತೋಟಗಳ ಮೇಲೆ ಆನೆ ದಾಳಿಯಿಂದ ಬಳಲುತ್ತಾರೆ. ಹತ್ತಿರದ ಪಟ್ಟಣಗಳು, ರಸ್ತೆಗಳು, ಆಸ್ಪತ್ರೆ, ಶಾಲೆಗಳು ಮುಂತಾದ ಮೂಲಭೂತ ಅವಶ್ಯಕತೆಗಳಿಲ್ಲದೆ ಗ್ರಾಮವದು. ಹತ್ತಿರದ ಪಟ್ಟಣಗಳಿಗೆ ಹೋಗಲು ಅವರು ತೆಪ್ಪವನ್ನು ಬಳಸಬೇಕಾಗುತ್ತದೆ, ಇದರಿಂದಾಗಿ ಅವರು ಹಲವಾರು ಸಾವುಗಳನ್ನು ಅನುಭವಿಸಬೇಕಾಗುತ್ತದೆ. ಆನೆಯೊಂದು ತನ್ನ ತೋಟಗಳ ಮೇಲೆ ದಾಳಿ ಮಾಡಿದಾಗ ಅಪ್ಪಣ್ಣ ಥಟ್ಟನೆ ಚೇತರಿಸಿಕೊಳ್ಳುತ್ತಾನೆ. ಅದರಲ್ಲಿ ಅವನು ತನ್ನ ಹೆಂಡತಿ ಮತ್ತು ಮಗನನ್ನು ಕಳೆದುಕೊಳ್ಳುತ್ತಾನೆ. ಈ ಘಟನೆಯ ನಂತರ, ಅಪ್ಪಣ್ಣ ಸಂಪೂರ್ಣವಾಗಿ ರೂಪಾಂತರಗೊಳ್ಳುತ್ತಾನೆ. ಮನೆ ಮತ್ತು ತನ್ನ ತೋಟಗಳಿಗೆ ಸರಿಯಾದ ಸುರಕ್ಷತೆಯನ್ನು ಒದಗಿಸದೆ ಹಣವನ್ನು ಉಳಿಸುವುದರಿಂದ ಯಾವುದೇ ಪ್ರಯೋಜನವಿಲ್ಲ ಎಂದು ಅರಿತುಕೊಂಡ ಅಪ್ಪಣ್ಣ, ಸ್ವಾರ್ಥಿಯಾಗಿರುವುದಕ್ಕೆ ವಿಷಾದಿಸುತ್ತಾನೆ. ನಂತರ ಒಂದು ಟ್ರಸ್ಟ್ ಅನ್ನು ರಚಿಸುತ್ತಾನೆ ಮತ್ತು ತನ್ನ ಇಡೀ ಆಸ್ತಿಯನ್ನು ತನ್ನ ಹಳ್ಳಿಯ ಕಲ್ಯಾಣಕ್ಕಾಗಿ ಸರ್ಕಾರಕ್ಕೆ ದಾನ ಮಾಡುತ್ತಾನೆ ಇದೇ ಈ ಚಿತ್ರದ ಕಥಾಸಾರಾಂಶ. ನಟರಾಜ್ ಹೊನ್ನವಳ್ಳಿ "ನಡುಬೆಟ್ಟು ಅಪ್ಪಣ್ಣ"ನಾಗಿ ಅಭಿನಯಿಸಿದ್ದಾರೆ.

## ದಿ ರಾಜಾಸಾಬ್‌ನ ಕಲರ್‌ಫುಲ್ ಹಾಡು ಪ್ರಭಾಸ್ ಡಾನ್ಸ್

ಪ್ರಭಾಸ್ ನಾಯಕನಾಗಿ ನಟಿಸಿರುವ ?ದಿ ರಾಜಾಸಾಬ್? ಸಿನಿಮಾ ಟ್ರೇಲರ್ ಮೂಲಕ ಕೌತುಕ ಸೃಷ್ಟಿಸಿದೆ. ಪ್ಯಾನ್ ಇಂಡಿಯಾ ಮಟ್ಟದಲ್ಲಿ ಈ ಸಿನಿಮಾ ತೆರೆಗೆ ಬರುವುದರಿಂದ ಹಿಂದಿ ಬೆಲ್ಟ್‌ನಲ್ಲಿಯೂ ಈ ಚಿತ್ರಕ್ಕೆ ದೊಡ್ಡ ಡಿಮಾಂಡ್ ಸೃಷ್ಟಿಯಾಗಿದೆ. ಇದೀಗ ಸಿನಿಮಾದ ಪ್ರಚಾರ ಕೆಲಸದಲ್ಲಿಯೂ ಚಿತ್ರತಂಡ ಬಿಜಿಯಾಗಿದೆ. ಅದರಂತೆ ಇದೀಗ ಇದೇ ಚಿತ್ರದ ?ರೆಬೆಲ್ ಸಾಬ್? ಹಾಡನ್ನು ಬಿಡುಗಡೆ ಮಾಡಿದೆ ಚಿತ್ರತಂಡ.

ಪಕ್ಕಾ ಟಪ್ಪಾಂಗುಚ್ಚಿ ಶೈಲಿಯಲ್ಲಿ ಮೂಡಿಬಂದಿರುವ ?ರೆಬಲ್ ಸಾಬ್? ಹಾಡಿನಲ್ಲಿ ನಟ ಪ್ರಭಾಸ್ ಸಖತ್ ಸ್ಟೈಲಿಶ್ ಆಗಿ ಕಂಡಿದ್ದಾರೆ. ಕಲರ್ ಕಲರ್ ಶರ್ಟ್ ಧರಿಸಿ, ಹಾಡಿಗೆ ಮಸ್ತ್ ಮಸ್ತ್ ಡಾನ್ಸ್ ಮಾಡಿದ್ದಾರೆ. ಈ ಮೂಲಕ ಸಿನಿಮಾ ಮೇಲಿನ ನಿರೀಕ್ಷೆ ಮತ್ತಷ್ಟು ಹೆಚ್ಚಿದ್ದು, ಅಭಿಮಾನಿ ವಲಯದಲ್ಲಿ ಸಂಭ್ರಮ ಇಮ್ಮಡಿಯಾಗಿದೆ.

ಅಂದಹಾಗೆ, ?ದಿ ರಾಜಾಸಾಬ್? ಸಿನಿಮಾಕ್ಕೆ ಸಂಗೀತ ನೀಡಿರುವುದು ಖ್ಯಾತ ಸಂಗೀತ ಸಂಯೋಜಕ ಥಮನ್ ಎಸ್. ಆದರೆ, ಈ ವರೆಗೂ ಇದೇ ಚಿತ್ರದ ಒಂದೇ ಒಂದು ಹಾಡಿನ ಝಲಕ್ ಹೊರಬಿದ್ದಿರಲಿಲ್ಲ. ಇದೀಗ ಅವರ ಥಮನ್ ಮ್ಯೂಸಿಕ್ ಒದಗಿಸಿರೋ ?ರೆಬೆಲ್ ಸಾಬ್? ಹಾಡು ಬಿಡುಗಡೆ ಆಗಿದೆ. ಟಿ ಸಿರೀಸ್ ಯೂಟ್ಯೂಬ್ ಚಾನೆಲ್‌ನಲ್ಲಿ ?ರೆಬೆಲ್ ಸಾಬ್? ಹಾಡು ಹಬ್ಬ ಮಾಡುತ್ತಿದೆ.

ಮಾರುತಿ ನಿರ್ದೇಶನದಲ್ಲಿ ಮೂಡಿಬಂದಿರುವ ಹಾರರ್ ಕಾಮಿಡಿ ಶೈಲಿಯ ?ದಿ ರಾಜಾ ಸಾಬ್? ಸಿನಿಮಾವನ್ನು ಪೀಪಲ್ ಮೀಡಿಯಾ ಫ್ಯಾಕ್ಟರಿ ಸಂಸ್ಥೆ ನಿರ್ಮಾಣ ಮಾಡಿದ್ದು, ಟಿಜಿ ವಿಶ್ವಪ್ರಸಾದ್ ಮತ್ತು ಕೃತಿ ಪ್ರಸಾದ್ ಈ ಸಿನಿಮಾದ ನಿರ್ಮಾಪಕರು. ಪ್ರಭಾಸ್ ನಾಯಕನಾದರೆ, ಸಂಜತ್ ದತ್ ಖಳನಾಯಕನಾಗಿದ್ದಾರೆ. ಮಾಳವಿಕಾ ಮೋಹನನ್, ನಿಧಿ ಅಗರ್‌ವಾಲ್, ರಿದ್ಧಿ ಕುಮಾರ್ ಮತ್ತು ಝರೀನಾ ವಹಾಬ್ ನಟಿಯರು ಚಿತ್ರದಲ್ಲಿದ್ದಾರೆ.

ಕಥೆ ಬರೆದು ನಿರ್ದೇಶನದ ಜವಾಬ್ದಾರಿಯನ್ನು ಮಾರುತಿ ಹೊತ್ತರೆ, ಥಮನ್ ಸವರ ಸಂಗೀತ, ಕಾರ್ತಿಕ್ ಪಳನಿ ಅವರ ಛಾಯಾಗ್ರಹಣ, ಕೊಟಗಿರಿ ವೆಂಕಟೇಶ್ವರ್ ರಾವ್ ಅವರ ಸಂಕಲನ ಚಿತ್ರಕ್ಕಿದೆ. 2026ರ ಜನವರಿ 9ರಂದು ಸಂಕ್ರಾಂತಿ ಹಬ್ಬದ ಪ್ರಯುಕ್ತ ಸಿನಿಮಾ ತೆರೆಗೆ ಬರಲಿದೆ. ತೆಲುಗು ಜತೆಗೆ ಕನ್ನಡ, ತಮಿಳು, ಮಲಯಾಳಂ ಮತ್ತು ಹಿಂದಿಯಲ್ಲಿ ವಿಶ್ವದಾದ್ಯಂತ ರಿಲೀಸ್ ಆಗಲಿದೆ.

ಭಾರತದ ಅತಿದೊಡ್ಡ ಹಾರರ್ ಫ್ಯಾಂಟಸಿ ಡ್ರಾಮಾ ಎಂದು ಬಿಂಬಿಸಲಾಗಿರುವ 'ದಿ ರಾಜಾಸಾಬ್',



ಮೇಕಿಂಗ್, ದೊಡ್ಡ ಕ್ಯಾನ್ವಾಸ್ ಮೂಲಕವೇ ಎಲ್ಲರನ್ನು ನಿಬ್ಬೆರಗಾಗಿಸಿದೆ. ಈ ಚಿತ್ರವು ಭಾರತದಲ್ಲಿ ಇದುವರೆಗೆ ಕಾಣದ ಅತಿದೊಡ್ಡ ಹಾರರ್ ಸೆಟ್ ಹೊಂದಿದೆ. ನೋಡುಗರನ್ನು ಭಯಕ್ಕೆ ಕೆಡವುದರ ಜತೆಗೆ ಆ ದೃಶ್ಯ ವೈಭವವನ್ನು ಮೀರಿ, ಪ್ರೀತಿ, ಕುಟುಂಬ ಮತ್ತು ಪೂರ್ವಜರ ಪರಂಪರೆಯ ವಿಷಯಗಳನ್ನು ಈ ಸಿನಿಮಾದಲ್ಲಿ ಹೇಳಿದ್ದಾರೆ ನಿರ್ದೇಶಕರು. ಬ್ಲಾಕ್‌ಬಸ್ಟರ್ ಸಿನಿಮಾ 'ಕಲ್ಕಿ 2898 ಎಡಿ' ನಂತರ ಮತ್ತೆ ದೊಡ್ಡ ಪರದೆಗೆ ಮರಳುತ್ತಿದ್ದಾರೆ ಪ್ರಭಾಸ್ . ಅವರ ನಟನಾ ಮೋಡಿ, ಮೈನವಿರೇಳಿಸುವ ಆಕ್ಷನ್ ಮಿಶ್ರಣ, ಹೊಸ ಪ್ರಭಾಸ್ ಎದುರಾಗುವ ಸೂಚನೆ ನೀಡಿದಂತಿದೆ.

## "ಪಾಠಶಾಲಾ" ಈ ವಾರ ತೆರೆಗೆ

"MS SQUARE MOVIES" ಲಾಂಛನದಲ್ಲಿ ನಾನು ಹಾಗೂ ನನ್ನ ಪತ್ನಿ ಪ್ರೀತಿ ಈ ಚಿತ್ರವನ್ನು ನಿರ್ಮಾಣ ಮಾಡಿದ್ದೇವೆ. ಹತ್ತಕ್ಕೂ ಅಧಿಕ ಸ್ನೇಹಿತರ ಸಹ ನಿರ್ಮಾಣ ಈ ಚಿತ್ರಕ್ಕಿದೆ. ತೀರ್ಥಹಳ್ಳಿ ತಾಲ್ಲೂಕಿನಲ್ಲೇ ಹೆಚ್ಚಿನ ಚಿತ್ರೀಕರಣ ಮಾಡಿದ್ದೇವೆ. ನಲವತ್ತಕ್ಕೂ ಅಧಿಕ ಮಕ್ಕಳು ಈ ಚಿತ್ರದಲ್ಲಿ ನಟಿಸಿದ್ದಾರೆ. ಮಕ್ಕಳಿಗೆ ತರಭೇತಿ ನೀಡಿ ಆನಂತರ ಚಿತ್ರೀಕರಣ ಮಾಡಲಾಯಿತು. ತೀರ್ಥಹಳ್ಳಿ ಆಸುಪಾಸಿನ ಮಕ್ಕಳೇ ಇದರಲ್ಲಿ ನಟಿಸಿದ್ದಾರೆ. ಹಿರಿಯರಾದ ಬಾಲಾಜಿ ಮನೋಹರ್, ಸುಧಾಕರ್ ಬನ್ನಂಜೆ, ಕಿರಣ್ ನಾಯಕ್, ನಟನ ಪ್ರಶಾಂತ್ ಮುಂತಾದವರು ಚಿತ್ರದ ತಾರಾಬಳಗದಲ್ಲಿದ್ದಾರೆ. 80, 90 ರ ಕಾಲಘಟ್ಟದಲ್ಲಿ ಶಿಕ್ಷಕರ ಹಾಗೂ ಮಕ್ಕಳ ನಡುವೆ ಇದ್ದ ಸಂಬಂಧದ ಸುತ್ತಲ್ಲಿನ ಕಥಾಹಂದರವನ್ನು ಈ ಚಿತ್ರ ಹೊಂದಿದೆ. "ಪಾಠಶಾಲಾ" ಚಿತ್ರಕ್ಕೆ "ಓದು ಅಥವಾ ಓಡೋಗು" ಎಂಬ ಅಡಿಬರಹವಿದೆ. ಇದು ಬರೀ ಮಕ್ಕಳ ಚಿತ್ರವಲ್ಲ. ಎಲ್ಲಾ ವಯಸ್ಸಿನವರು ನೋಡಲೇಬೇಕಾದ ಚಿತ್ರ. ನವೆಂಬರ್ 28 ರಂದು ನಮ್ಮ ಚಿತ್ರ ಬಿಡುಗಡೆಯಾಗುತ್ತಿದೆ. ಎಲ್ಲರೂ ನಮ್ಮ ಚಿತ್ರ ನೋಡಿ. ಪ್ರೋತ್ಸಾಹ ನೀಡಿ ಎಂದುಈ ಚಿತ್ರದ ನಿರ್ದೇಶಕ ಹೆದ್ದೂರ್ ಮಂಜುನಾಥ್ ಶೆಟ್ಟಿ ತಿಳಿಸಿದ್ದಾರೆ.

ವಿಕಾಸ್ ವಸಿಷ್ಠ ಸಂಗೀತ ನಿರ್ದೇಶನ, ಜೀವನ್ ಗೌಡ ಛಾಯಾಗ್ರಹಣ ಹಾಗೂ ಉಮೇಶ್ ಆರ್ ಬಿ ಸಂಕಲನ ಈ ಚಿತ್ರಕ್ಕಿದೆ.





ಕಲಾವಿದ ಅಮೃತ ಘಳಿಗೆ ಶ್ರೀಧರ್ ತಮ್ಮ ಹುಟ್ಟುಹಬ್ಬವನ್ನು ಆಶ್ರಮದಲ್ಲಿ ಆಚರಿಸಿಕೊಂಡರು.

## 'ನಾಯಿ ಇದೆ ಎಚ್ಚರಿಕೆ' ಈ ವಾರ ತೆರೆಗೆ

ನಾಯಿ ಸಾಕಿರುವವರ ಮನೆಯ ಮುಂದೆ ಸಾಮಾನ್ಯವಾಗಿ ಕಾಣುವ ಪದ " ನಾಯಿ ಇದೆ ಎಚ್ಚರಿಕೆ". ಈಗ ಇದೇ ಚಿತ್ರದ ಶೀರ್ಷಿಕೆಯಾಗಿದೆ. ಚಿತ್ರಕ್ಕೆ ಈ ಶೀರ್ಷಿಕೆ ಏಕೆ? ಎಂಬದನ್ನು ಸಿನಿಮಾದಲ್ಲೇ ನೋಡಬೇಕು.

ಲಾವಣ್ಯ ಗದೆ ಅವರು ನಿರ್ಮಾಣ ಮಾಡಿರುವ ಈ ಚಿತ್ರದ ನಾಯಕನಾಗಿ ವೃತ್ತಿಯಲ್ಲಿ ವೈದ್ಯರಾಗಿರುವ ಡಾ॥ಲಿಲಾಮೋಹನ್ ಪಿವಿಆರ್ ಅಭಿನಯಿಸಿದ್ದಾರೆ. ಕಲಿ ಗೌಡ ಅವರು ನಿರ್ದೇಶಿಸಿದ್ದಾರೆ.

ನನಗೂ ಚಿತ್ರರಂಗಕ್ಕೂ ಹದಿನೈದು ವರ್ಷಗಳ ನಂಟು. ಈ ಹಿಂದೆ "ತನಿಖೆ" ಎಂಬ ಚಿತ್ರ ನಿರ್ದೇಶನ ಮಾಡಿದ್ದ ನನಗೆ ಇದು ಎರಡನೇ ನಿರ್ದೇಶನದ ಚಿತ್ರ. ಹಾರಾರ್ ಥ್ರಿಲ್ಲರ್ ಕಥಾಹಂದರ ಹೊಂದಿರುವ "ನಾಯಿ ಇದೆ ಎಚ್ಚರಿಕೆ" ಚಿತ್ರ ಶೀರ್ಷಿಕೆಯಲ್ಲಿ ಎಷ್ಟು ಕುತೂಹಲ ಮೂಡಿಸಿದೆಯೊ, ಅಷ್ಟೇ ಕುತೂಹಲ ಸಿನಿಮಾದಲ್ಲೂ ಇರುತ್ತದೆ. ಯಾರು ಊಹಿಸದ ರೋಚಕ ಸನ್ನಿವೇಶಗಳು



ಈ ಚಿತ್ರದ ಹೈಲೆಟ್. ನಾಯಿ ನೀಯತ್ತಿನ ಪ್ರಾಣಿ ಎಂದು ಎಲ್ಲರಿಗೂ ಗೊತ್ತು. ಅದು ಬದುಕಿದಾಗಷ್ಟೇ ಅಲ್ಲ. ಸತ್ತ ಮೇಲೂ ಅದರ ನೀಯತ್ತು ಕಡಿಮೆ ಆಗಲ್ಲ ಎಂಬದನ್ನು ನಮ್ಮ ಚಿತ್ರದ ಮೂಲಕ ತೋರಿಸಿದ್ದೇವೆ. ಟೀಸರ್, ಟ್ರೇಲರ್ ಹಾಗೂ ಹಾಡುಗಳು ಈಗಾಗಲೇ ಜನರ ಮನ ಗೆದ್ದಿದೆ. ಚಿತ್ರ ಕೂಡ ಎಲ್ಲರ ಮೆಚ್ಚುಗೆ ಪಡೆದುಕೊಳ್ಳುವ ಭರವಸೆ ಇದೆ. ಚಿತ್ರತಂಡದ ಸಹಕಾರದಿಂದ ಒಂದೊಳ್ಳೆ ಸಿನಿಮಾ ನವೆಂಬರ್ 28 ರಂದು ನಿಮ್ಮ ಮುಂದೆ ಬರಲಿದೆ. ಚಿತ್ರ ನೋಡಿ. ಪ್ರೋತ್ಸಾಹ ನೀಡಿ ಎಂದು ನಿರ್ದೇಶಕ ಕಲಿ ಗೌಡ ತಿಳಿಸಿದ್ದಾರೆ.

ನಾನು ವೃತ್ತಿಯಲ್ಲೂ ವೈದ್ಯ. ಈ ಚಿತ್ರದಲ್ಲೂ ವೈದ್ಯ. ಇದರಲ್ಲೂ ನನ್ನ ಹೆಸರು ಲೀಲಾ ಅಂತಲೇ.. ಇನ್ನೂ ಇದು ನಾಯಿ ಹಾಗೂ ಮನುಷ್ಯನ ಬಾಂಧವ್ಯದ ಕುರಿತಾದ ಸಿನಿಮಾ.

ನಾಯಿ ಕಚ್ಚುವುದರಿಂದ ಆಗುವ ದುಷ್ಪರಿಣಾಮಗಳನ್ನು ತೋರಿಸಿರುವ ಸಿನಿಮಾ ಕೂಡ ಹೌದು. ಇದರ ಜೊತೆಗೆ ಕನ್ನಡದಲ್ಲಿ ತೀರ ಅಪರೂಪ ಎನ್ನಬಹುದಾದ ಜೊಂಬಿ(ದಠಟಭುಜ) ಚಿತ್ರ. ಎಲ್ಲರೂ ಈ ಚಿತ್ರವನ್ನು ಚಿತ್ರಮಂದಿರಗಳಲ್ಲೇ ನೋಡಿ ಎಂದು ನಾಯಕ ಲೀಲಾಮೋಹನ್ ತಿಳಿಸಿದರು.

ಡಾ॥ಲೀಲಾಮೋಹನ್ ಪಿವಿಆರ್, ಪ್ರಮೋದ್ ಶೆಟ್ಟಿ, ಬಲ ರಾಜ್ ವಾಡಿ, ದಿವ್ಯಶ್ರೀ, ಮಾನಸ ಗೌಡ, ದಿನೇಶ್ ಮಂಗಳೂರು, ನಾಗೇಂದ್ರ ಅರಸ್, ಜಗಪ್ಪ, ಅನಿರುದ್ಧ್ ಮಹೇಶ್, ಪ್ರಬಿಕ್ ಮೊಗವೀರ್, ಚಂದನ, ರಿಷಿ, ಸೀನು ಮುಂತಾದವರು ತಾರಾಬಳಗದಲ್ಲಿದ್ದಾರೆ.

ಉತ್ತರ ಕರ್ನಾಟಕದ ಪ್ರತಿಭೆ ಯುವ ಗಂಗಾಧರ್ ಸಹ ಈ ಚಿತ್ರದ ಪ್ರಮುಖಪಾತ್ರದಲ್ಲಿ ಕಾಣಿಸಿಕೊಂಡಿದ್ದಾರೆ. ಕೆಲವು ಕಿರುಚಿತ್ರಗಳು ಹಾಗೂ ಶ್ರೀರಸ್ತು ಶುಭಮಸ್ತು, ನನ್ನರಸಿ ರಾಧೆ ಸೇರಿದಂತೆ ಅನೇಕ ಧಾರಾವಾಹಿಗಳ ಮೂಲಕ ಯುವ ಗಂಗಾಧರ್ ಜನಪ್ರಿಯರಾಗಿದ್ದಾರೆ.

ಎ.ಜೆ.ಕುಮಾರ್ ಛಾಯಾಗ್ರಹಣ ಹಾಗೂ ರವೀಶ್ ಆತ್ಮರಾಮ್ ಅವರ ಸಂಕಲನ ಈ ಚಿತ್ರಕ್ಕಿದೆ.

## ಜಾನಪದ ಜಂಗಮ ನಾಡೋಜ ಡಾ. ಎಸ್. ಕೆ. ಕರೀಂಖಾನ್

ಕನ್ನಡದ ಜಾನಪದ ಸಂಸ್ಕೃತಿಗೆ ಅಪ್ರತಿಮವಾದ ಕೊಡುಗೆ ನೀಡಿದ ಸಂಶೋಧಕ, ಗೀತ ರಚನಕಾರ ಡಾ. ಎಸ್.ಕೆ. ಕರೀಂಖಾನ್ ಕನ್ನಡಿಗರ ಮನದಲ್ಲಿ ಅದರಲ್ಲೂ ಜಾನಪದ ವಲಯದಲ್ಲಿ ಜಾನಪದ ಜಂಗಮ ಎಂದು ಗೌರವಿಸಲ್ಪಟ್ಟವರು.

ಕರ್ನಾಟಕದ ಹಳ್ಳಿಗಾಡುಗಳಲ್ಲಿ ಜಾನಪದ ಸಂಶೋಧನೆಗಾಗಿ ಸಂಚಾರ ಮಾಡಿ, ನಾಡಿನ ಸಂಸ್ಕೃತಿ ಮತ್ತು ಶ್ರಮಜೀವಿಗಳ ಜೀವನವನ್ನು ಗೀತೆಯ ಮೂಲಕ ದಾಖಲಿಸಿದ ಅಪರೂಪದ ಶ್ರೇಷ್ಠತೆಯ ವ್ಯಕ್ತಿ ಅವರು. ಜನಪದ ಗೀತೆಗಳು, ಹಬ್ಬಆಚಾರಗಳು ಹಾಗೂ ಸಂಪ್ರದಾಯಗಳನ್ನು ಸಂಗ್ರಹಿಸುವ ಕಾರ್ಯದಲ್ಲಿ ಅವರು ತೋರಿದ ತವಕ, ಜ್ಞಾನ ಮತ್ತು ಪರಿಶ್ರಮ ಇಂದಿಗೂ ಸಂಶೋಧಕರು ಮತ್ತು ಜಾನಪದ ಕಲಾವಿದರಿಗೆ ಮಾದರಿ.

ಹಾಸನ ಜಿಲ್ಲೆಯ ಸಕಲೇಶಪುರದಲ್ಲಿ 1912ರಲ್ಲಿ ಜನಿಸಿದ ಕರೀಂ ಖಾನ್ ಅವರ ತಂದೆ ಅಬ್ದುಲ್ ರಹಮಾನ್ ಖಾನ್ ಆಫ್ಘಾನ ಮೂಲದವರಾಗಿದ್ದು, ತಾಯಿ ಜೈನಬ್ಬಿ ಅರಬ್ ಮೂಲದವರಾಗಿದ್ದರು. ಬಾಲ್ಯದಲ್ಲೇ ತಂದೆಯನ್ನು ಕಳೆದುಕೊಂಡ ಅವರು, ಅಣ್ಣನ ಆಶ್ರಯದಲ್ಲಿ ಬೆಳೆದರು. ಸರಳ ಕುಟುಂಬ, ಕಷ್ಟದ ಬದುಕು, ಸುತ್ತಲಿನ ಗ್ರಾಮೀಣ ಸಂಸ್ಕೃತಿ ಮತ್ತು ಸಂಪ್ರದಾಯಗಳು ಅವರ ಮನಸ್ಸಿನಲ್ಲಿ ಜನಪದದ ಬಗ್ಗೆ ಗಾಢ ಪ್ರಭಾವ ಬೀರಿತು . ಹಳ್ಳಿಗಳ ಬದುಕಿನ ರೀತಿ ರಿವಾಜುಗಳು , ಸಂಸ್ಕೃತಿ, ಪ್ರಾರ್ಥನೆಗಳು, ಗೀತೆಗಳು ಇವುಗಳೇ ಅವರ ಮೊದಲ ಕಲಿಕೆಯಾಯಿತು .

ಶಿಕ್ಷಣವನ್ನು ಹಾಸನದಲ್ಲಿ ಪೂರ್ಣಗೊಳಿಸಿದ ಕರೀಂಖಾನ್ ರವರು ತಮ್ಮ ಜೀವನದಲ್ಲಿ ಜಾನಪದ ಅಧ್ಯಯನವನ್ನೇ ಮುಖ್ಯ ಗುರಿಯಾಗಿಸಿಕೊಂಡವರು . ಜಾನಪದ ಸಂಸ್ಕೃತಿಯ ಅಧ್ಯಯನಕ್ಕೆ ಆಚಾರ್ಯ ಆಚಂಗಿ ನಾರಾಯಣಶಾಸ್ತ್ರಿಗಳ ಮಾರ್ಗದರ್ಶನ ಮತ್ತು ಪ್ರೇರಣೆಯೇ ಅವರಿಗೆ ಹೊಸ ದಿಕ್ಕನ್ನು ತೋರಿಸಿತು. ಈ ಪ್ರೇರಣೆಯಿಂದ ಅವರು ಹಳ್ಳಿಹಳ್ಳಿಗಳಲ್ಲಿ ಸಂಚರಿಸಿ , ಜನರೊಡನೆ ಬೆರೆತು ಜನಪದ ಸಂಸ್ಕೃತಿಯನ್ನು ಸಂಗ್ರಹಿಸುವ ಕೆಲಸಕ್ಕೆ ಮುಂದಾದರು. ಅವರು ಸಂಗ್ರಹಿಸಿದ ಗೀತೆಗಳು, ಜನರ ನಂಬಿಕೆಗಳು, ಆಚರಣೆಗಳು, ಹಬ್ಬಗಳು, ಸಂಪ್ರದಾಯಗಳು ಇವುಗಳನ್ನು ದಾಖಲಿಸಿದರು . ನಾಡಿನ ನುಡಿ ಮತ್ತು ಸಂಸ್ಕೃತಿಯ ಪರಂಪರೆಯನ್ನು ಉಳಿಸುವ ಮತ್ತು ದಾಖಲಿಸುವ ಮಹೋನ್ನತ ಕಾರ್ಯವನ್ನು ಮಾಡಿದರು . ಅಜ್ಞಾತ ಕವಿಗಳ ನೂರಾರು ಹಾಡುಗಳು ಕಳೆದು ಹೋಗಬಾರದೆಂದು ಅವುಗಳನ್ನು ಸಂಗ್ರಹಿಸಿ ಪ್ರಕಟಿಸಿದರು.

ಸಾಕಷ್ಟು ಸಾಹಿತ್ಯ ಕೃಷಿಯನ್ನು ಮಾಡಿದ್ದ ಖಾನ್ ಸಾಹೇಬರು ನಿವಾರ (ಉರ್ದುವಿನಿಂದ ಅನುವಾದಿತ ಕಥೆಗಳು), ನೀಹಾರ (ಚಾರಿತ್ರಿಕ ಕಥಾಸಂಕಲನ) ಬಲಿದಾನಿ ಹುಸೇನ್ ಎಂಬ ಚಾರಿತ್ರಿಕ ಕಾದಂಬರಿ, ಮಾತೃಶಾಪ ಎಂಬ ಪೌರಾಣಿಕ ಕಾದಂಬರಿ, ನಿರ್ದೋಷಿ, ಶ್ರೀ ಕೃಷ್ಣಲೀಲೆ, ಹುಮಾಯುನ್, ಅಂಬರನಾಥ, ಮಹಾಪ್ರಭು ಮಾಗಡಿ ಕೆಂಪೇಗೌಡ ಮೊದಲಾದ ಐತಿಹಾಸಿಕ ಹಾಗೂ ಪೌರಾಣಿಕ ನಾಟಕಗಳನ್ನು ರಚಿಸಿದ್ದಾರೆ.



ಪತ್ರಿಕೋದ್ಯಮದಲ್ಲೂ ತಮ್ಮ ಹೆಜ್ಜೆ ಗುರುತು ಮೂಡಿಸಿದ ಖಾನ್ ಸಾಹೇಬರು ಧಾರವಾಡದ ಲೋಕಮಿತ್ರ, ಉಡುಪಿಯ ಅಂತರಂಗ ಪತ್ರಿಕೆಗಳ ಸಂಪಾದಕರಾಗಿ ದುಡಿದರು.



ಅವರು ಸ್ವಾತಂತ್ರ್ಯ ಸಂಗ್ರಾಮದಲ್ಲೂ ಭಾಗವಹಿಸಿ ಹಳ್ಳಿ ಹಳ್ಳಿಗಳಲ್ಲೂ ಸಂಚರಿಸಿ ತಮ್ಮ ಕಂಚಿನ ಕಂಠದಿಂದ ಲಾವಣಿಗಳನ್ನು ಹಾಡಿ ಯುವಕರನ್ನು ಹುರಿದುಂಬಿಸಿ ಸ್ವಾತಂತ್ರ್ಯ ಚಳುವಳಿಯಲ್ಲಿ ಭಾಗವಹಿಸುವಂತೆ ಪ್ರೇರೇಪಿಸಿದರು . ಸುಮಾರು 7 ಸಾರಿ ಜೈಲು ವಾಸ ಅನುಭವಿಸಿದ್ದರು . ಕರ್ನಾಟಕ ಏಕೀಕರಣದಲ್ಲೂ ಪ್ರಮುಖ ಪಾತ್ರ ವಹಿಸಿದ್ದರು .

1985ರಲ್ಲಿ ಕರ್ನಾಟಕ ಜಾನಪದ ಅಕಾಡೆಮಿಯ ಅಧ್ಯಕ್ಷರ ಹುದ್ದೆ ಅವರಿಗೆ ದೊರೆತದ್ದು ಅವರ ಕಾರ್ಯದ ಶ್ರೀಮಂತ ಹೆಜ್ಜೆಗುರುತು. ಈ ಅವಧಿಯಲ್ಲಿ ಅವರು ಜಾನಪದ ಕಲಾವಿದರಿಗೆ ವೇದಿಕೆಗಳನ್ನು ನಿರ್ಮಿಸುವ, ಸಂಶೋಧನಾ ಕೇಂದ್ರಗಳನ್ನು ಬಲಪಡಿಸುವ ಮತ್ತು ಗ್ರಾಮೀಣ ಕಲೆಗೆ ರಾಜ್ಯಮಟ್ಟದ ಗೌರವ ನೀಡುವ ಅನೇಕ ಕಾರ್ಯಕ್ರಮಗಳನ್ನು ಮುಂದುವರೆಸಿದರು. ಜಾನಪದವನ್ನು ಕೇವಲ ಮನರಂಜನೆ, ಹಳ್ಳಿಯ ಹಾಡು ಎಂದು ನೋಡುವ ಕಾಲದಲ್ಲಿ, ಅವರು ಜಾನಪದವೇ ನಾಡಿನ ಇತಿಹಾಸ, ಭಾವನೆ ಮತ್ತು ಅಸ್ತಿತ್ವ ಎಂಬ ಪರಿಕಲ್ಪನೆಯನ್ನು ಸಮಾಜಕ್ಕೆ ಪರಿಚಯಿಸಿದರು. ಈ ದೃಷ್ಟಿಯಲ್ಲಿ ಅವರು ಜಾನಪದ ಅಕಾಡೆಮಿ ಮೂಲಕ ಪ್ರೋತ್ಸಾಹಿಸಿದ ಕಾರ್ಯಕ್ರಮಗಳು, ಪುಸ್ತಕಗಳು ಮತ್ತು ಸಂಶೋಧನಾ ಚಟುವಟಿಕೆಗಳು ಇಂದಿಗೂ ಮೌಲ್ಯವನ್ನು ಹೊಂದಿವೆ.

ಜಾನಪದ ಕ್ಷೇತ್ರದ ಬೆಳವಣಿಗೆಗೆ ಇವರು ಅಪಾರವಾಗಿ ದುಡಿದರು. ಗಿರಿಜನ ಮತ್ತು ಬುಡಕಟ್ಟು ಜನಾಂಗದ ಸಮಗ್ರ ವೀಡಿಯೋ ಚಿತ್ರೀಕರಣ ಕಾರ್ಯವನ್ನು ಕೈಗೆತ್ತಿಕೊಂಡರು. ಇದರಿಂದ ಕಣ್ಮರೆಯಾಗುವಂತಿದ್ದ ಸಂಸ್ಕೃತಿಯೊಂದು ಉಳಿಯುವಂತಾಯಿತು.

ಕಾಲ್ನಡಿಗೆಯಲ್ಲಿಯೇ ಹಳ್ಳಿಹಳ್ಳಿ ತಿರುಗಿ ನೂರಾರು ಜಾನಪದ ಗೀತೆಗಳನ್ನು ಸಂಗ್ರಹಿಸಿದ ಕರೀಂಖಾನ್ ಕರ್ನಾಟಕ ಜಾನಪದ ಅಕಾಡೆಮಿ ಅಧ್ಯಕ್ಷರಾಗಿದ್ದ ಅವಧಿಯಲ್ಲಿ ಸುಮಾರು 8 ಸಾವಿರ ಕಿ.ಮೀ. ದೂರವನ್ನು ಸುತ್ತಿ ಜಾನಪದ ಪ್ರದರ್ಶನ ಕಲೆಗಳ ಕುರಿತು 240 ಗಂಟೆಗಳ ಅವಧಿಯ ವಿಡಿಯೋ ಚಿತ್ರೀಕರಣ ಮಾಡಿದ್ದಾರೆ.

ಇವರು ಸಾಹಿತ್ಯ, ಸಂಸ್ಕೃತಿ, ಜಾನಪದ ಮತ್ತು ಚಲನಚಿತ್ರ ರಂಗಕ್ಕೆ ಕೊಟ್ಟಕೊಡುಗೆ ಅಪಾರ. ಜನಪದ ಗೀತೆಗಳನ್ನು ಸಂಗ್ರಹಿಸಿ ಒಂಬತ್ತು ಸಂಪುಟಗಳಲ್ಲಿ ಪ್ರಕಟಿಸಿದ್ದಾರೆ. ಜನಪದಗೀತೆ ಅನುಭವ ದರ್ಶನ ಇವರ ಇನ್ನೊಂದು ಕೃತಿ.

ಕರೀಂಖಾನ್ ಅವರ ಸಂಶೋಧನಾ ಕಾರ್ಯದಲ್ಲಿ ಜಾನಪದ ಗೀತೆಗಳ ಸಂಗ್ರಹ ಮತ್ತು ದಾಖಲೀಕರಣವೇ ಮಹತ್ವದ್ದಾಗಿತ್ತು. ಅವರು ಸಂಗ್ರಹಿಸಿದ ಲೋಕಗೀತೆಗಳು, ನೀತಿಯ ಹಾಡುಗಳು, ಗ್ರಾಮೀಣ ಹಬ್ಬಗಳು, ಆಚರಣೆಗಳು, ಗ್ರಾಮೀಣ ನಾಟಕಗಳು ಮತ್ತು ಸಮಾಜದ ಆಚರಣಾ ಪದ್ಧತಿಗಳು ಇಂದಿಗೂ ಜನಪದ ಅಧ್ಯಯನದ ಪಾಠಪುಸ್ತಕಗಳಂತಿವೆ. ಅವರ ಕೆಲಸ ಕಾಗದಕ್ಕಷ್ಟೇ ಸೀಮಿತವಾಗಿರಲಿಲ್ಲ; ಅವರು ಜನರ ನಡುವೆ ನಿಂತು ಹಾಡುಗಳನ್ನು ಆಲಿಸಲು, ಬರೆಯಲು, ಗುರುತಿಸಲು ಮತ್ತು ದಾಖಲಿಸಲು ಹರಸಾಹಸ ಪಟ್ಟರು. ಜನಪದ ಸಂಸ್ಕೃತಿಯನ್ನು ಶೈಕ್ಷಣಿಕ ವಲಯಕ್ಕೆ ತಂದು ಸಂಶೋಧಕರು ಮತ್ತು ವಿದ್ಯಾರ್ಥಿಗಳಿಗೆ ಬಾಗಿಲು ತೆರೆದವರು.

ಅವರು ಚಲನಚಿತ್ರರಂಗಕ್ಕೂ ಅಪಾರ ಕೊಡುಗೆ ನೀಡಿದ್ದಾರೆ. ಕೆಲವು ಕನ್ನಡ ಚಿತ್ರಗಳಿಗೆ ಗೀತರಚನೆ ಮಾಡಿದ ಅವರ ಹಾಡುಗಳು ಬಹಳ ಜನಪ್ರಿಯತೆ ಪಡೆದಿವೆ. ವಿಶೇಷವಾಗಿ 1962ರಲ್ಲಿ ಸ್ವರ್ಣಗೌರಿ ಚಿತ್ರದ ಹಾಡುಗಳಿಗೆ ರಾಷ್ಟ್ರಮಟ್ಟದ ಪ್ರಶಸ್ತಿ ದೊರಕಿದೆ. ಸ್ವರ್ಣ ಗೌರಿ' ಚಿತ್ರದ 'ನುಡಿಮನ ಶಿವಗುಣ'. 'ನಟವರ ಗಂಗಾಧರ , ಉಮಾ ಶಂಕರ, ಜಯ ಗೌರಿ ಜಗದೀಶ್ವರಿ ಮುಂತಾದ ಚಿತ್ರ ಗೀತೆಗಳು ಬಹಳ ಪ್ರಸಿದ್ಧಿಯಾದವು . 300 ಕ್ಕೂ ಹೆಚ್ಚು ಗೀತೆಗಳು , 15 ಕ್ಕೂ ಹೆಚ್ಚು ಚಿತ್ರಗಳಿಗೆ ಸಾಹಿತ್ಯ ರಚಿಸಿದ್ದಾರೆ .

ತಮ್ಮ ಅದ್ವಿತೀಯ ಸಾಧನೆಗೆ ಅವರು ಅನೇಕ ಪ್ರಶಸ್ತಿಗಳಿಗೆ ಭಾಜನರಾದರು . 1989ರಲ್ಲಿ ಗುಲ್ಬರ್ಗಾ ವಿಶ್ವವಿದ್ಯಾಲಯದಿಂದ ಗೌರವ ಡಾಕ್ಟರೇಟ್, 1995ರಲ್ಲಿ ಕರ್ನಾಟಕ ಸರ್ಕಾರದ ಜನಪದ ಶ್ರೀ ಪ್ರಶಸ್ತಿ, 1997ರಲ್ಲಿ ನಾಡೋಜ ಪದವಿ, 2002ರಲ್ಲಿ ಚಿ. ಉದಯಶಂಕರ್ ಚಿತ್ರಸಾಹಿತ್ಯ ಪ್ರಶಸ್ತಿ ಮತ್ತು 2004ರಲ್ಲಿ ಕರ್ನಾಟಕ ರಾಜ್ಯೋತ್ಸವ ಪ್ರಶಸ್ತಿ, ಹುಬ್ಬಳ್ಳಿಯ ಮೂರುಸಾವಿರ ಜಂಗಮ ಮಠದ ಜಾನಪದ ಜಂಗಮ ಪ್ರಶಸ್ತಿ, ಮಂಡ್ಯದ ಜೀಶಂಪ ಪ್ರಶಸ್ತಿ (1995), ಹಂಸಜ್ಯೋತಿ ಸಂಸ್ಥೆಯ ಹಂಸರತ್ನ (1998) ಪ್ರಶಸ್ತಿ -ಇವು ಇವರಿಗೆ ದೊರೆತ ಪ್ರಮುಖ ಪ್ರಶಸ್ತಿಗಳು ಬೆಂಗಳೂರಿನ ಬಸವನಗುಡಿಯ ಚಿಕ್ಕ ಹೋಟೆಲೊಂದರ ಸಣ್ಣ ಕೋಣೆಯಲ್ಲಿದ್ದ ಇವರು ತಮ್ಮ ಕಡೆಯ ದಿನಗಳನ್ನು ಬಂಧುಗಳ ಮನೆಯಲ್ಲಿದ್ದು ಸಂತರಂತೆ ಜೀವನ ಸಾಗಿಸಿದರು .

ಉರ್ದು ಮೂಲದ ಕುಟುಂಬದಲ್ಲಿ ಬೆಳೆದಿದ್ದರೂ, ಕನ್ನಡ ಮತ್ತು ಸಂಸ್ಕೃತ ಭಾಷೆಯ ಮೇಲಿನ ಅವರ ಹಿಡಿತ ಮತ್ತು ಶೈಲಿಯ ವಿಶೇಷತೆ ಗಮನಾರ್ಹ. ಜನಪರ ಪದಬಳಕೆ, ಸಂಸ್ಕೃತಿಯ ಬಣ್ಣ ಮತ್ತು ಕಾವ್ಯದ ಜೀವಾಳ ಅವರ ಬರವಣಿಗೆಗಳಲ್ಲಿ ಸ್ಪಷ್ಟ.

ಡಾ. ಎಸ್.ಕೆ. ಕರೀಂಖಾನ್ 29 ಜುಲೈ 2006ರಂದು ಬೆಂಗಳೂರಿನಲ್ಲಿ ನಿಧನರಾದರು. ಅವರ ಸಂಗ್ರಹಗಳು, ಸಂಶೋಧನೆಗಳು ಮತ್ತು ಗೀತೆಗಳು ಇಂದಿಗೂ ಕನ್ನಡ ಜಾನಪದದ ಮೂಲಾಧಾರಗಳಾಗಿ ಉಳಿದಿವೆ. ಅವರು ಬಿಟ್ಟುಹೋದ ಪರಂಪರೆ, ಸಂಶೋಧನಾ ದಾರಿ ಮತ್ತು ಸಾಹಿತ್ಯ ಕನ್ನಡ ಜನಪದರಂಗಕ್ಕೆ ಶಾಶ್ವತ ಬೆಳಕಾಗಿವೆ.

ಕರೀಂಖಾನರ ಜೀವನ ಮತ್ತು ಕೃತಿಗಳು ಇಂದು ಸಹ ಅನೇಕ ಕಲಾವಿದರು, ಸಂಶೋಧಕರು ಮತ್ತು ವಿದ್ಯಾರ್ಥಿಗಳಿಗೆ ಪ್ರೇರಣೆ ನೀಡುತ್ತಿವೆ.



ಸ್ವಾಮಿನಾಥನ್
ಬೆಂಗಳೂರು

## ಕನ್ನಡದ ಕಟ್ಟಾಳು- ನಿರ್ಮಲಾ ಎಲಿಗಾರ್

ಕನ್ನಡಿಗರಾದರೆ ಸಾಲದು, ಅಥವಾ ನವೆಂಬರ್‌ತಿಂಗಳಲ್ಲಿ ಕನ್ನಡ, ಕನ್ನಡ ಎಂದು ಜಪ ಮಾಡಿದರೆ ಸಾಲದು, ಕನ್ನಡವನ್ನು ಪ್ರೀತಿಸಿ, ಉಳಿಸಿ, ಬೆಳೆಸಲು ಬದ್ಧತೆ ಇರಬೇಕಾಗುತ್ತದೆ. ಅಂದುಕೊಂಡ ಕೆಲಸಗಳನ್ನು ಸಮಯಕ್ಕೆ ಸರಿಯಾಗಿ ಮಾಡಿ ಮುಗಿಸಲು ತಮ್ಮ ಶಕ್ತಿ ಮೀರಿ ಪ್ರಯತ್ನಿಸಿ, ಯಶಸ್ವಿಗೊಳಿಸಲು ಅದಕ್ಕೊಂದು ಧೀಶಕ್ತಿ ಬೇಕಾಗುತ್ತದೆ. ಶ್ರದ್ಧೆ, ಆಸ್ತೆ, ಕನ್ನಡ ಕೈಂಕರ್ಯಕ್ಕೆ ಜನರನ್ನು ಒಗ್ಗೂಡಿಸುವ ಮನೋಭಾವವೂ ಅಷ್ಟೇ ಮುಖ್ಯ.

ಅಂತಹ ಕನ್ನಡ ಪ್ರೇಮಿಯಾಗಿ ನಿರಂತರ ಕಾರ್ಯಕ್ರಮಗಳನ್ನು ಹಮ್ಮಿಕೊಂಡು ತಮ್ಮದೇ ಆದ ಶೈಲಿಯಲ್ಲಿ ಕೆಲಸ ಮಾಡುತ್ತಿರುವವರು ಡಾ. ನಿರ್ಮಲಾ ಸಿ. ಯಲಿಗಾರ್ ಅವರು.

ಸದಾ ನಗುಮೊಗದಿಂದ ಎಲ್ಲರೊಡನೆ ಪ್ರೀತಿ ವಿಶ್ವಾಸದಿಂದ ಬೆರೆಯುವ ಸ್ವಭಾವದವರಾದ ಡಾ. ನಿರ್ಮಲಾ ಸಿ. ಯಲಿಗಾರ್ ಅವರು ಕನ್ನಡದ ಏಳಿಗೆಗಾಗಿ ದುಡಿದ ಪರಂಪರೆಯ ಹಿನ್ನೆಲೆಯನ್ನು ಹೊಂದಿರುವ ಕುಟುಂಬದಿಂದ ಬಂದವರು. ಇವರ ಹುಟ್ಟೂರು ಕನ್ನಡಕ್ಕೆ ಐದು ಜ್ಞಾನಪೀಠ ಪ್ರಶಸ್ತಿಗಳನ್ನು ತಂದುಕೊಟ್ಟ ಗಂಡುಮೆಟ್ಟಿದ ನಾಡು ಉತ್ತರ ಕರ್ನಾಟಕದ ಧಾರವಾಡ. ಇವರ ತಾತ, ತಂದೆಯವರ ಕಾಲದಿಂದಲೂ ಕನ್ನಡಕ್ಕಾಗಿ ಟೊಂಕಕಟ್ಟಿ ದುಡಿದವರು. ಕನ್ನಡದ ಪುಸ್ತಕಗಳನ್ನು ಹೆಗಲ ಮೇಲೆ ಹೊತ್ತು ಮಾರಿ ಬದುಕಿದವರು. ಕರ್ನಾಟಕ ವಿದ್ಯಾವರ್ಧಕ ಸಂಘದ ಸಂಸ್ಥಾಪಕರಲ್ಲಿ ಇವರ ತಾತನವರು ಒಬ್ಬರಾಗಿದ್ದು, ಮೊಮ್ಮಗಳಿಗೂ ಕನ್ನಡದ ಕೆಲಸ ಮಾಡಲು ಪ್ರೇರಣಾ ಶಕ್ತಿಯಾದದ್ದು ಸಹಜವೇ. ವಾರ್ತಾ ಇಲಾಖೆಯಲ್ಲಿ ನನ್ನ ಸೇವಾವಧಿಯಲ್ಲಿ ಹಲವು ಬಾರಿ ಭೇಟಿಯಾಗಿ, ತೀರಾ ಹತ್ತಿರದಿಂದ ಅವರ ಕಾರ್ಯವೈಖರಿಯನ್ನು ನೋಡಿದವಳು ನಾನು.

ಹಲವು ಆಯಾಮಗಳಲ್ಲಿ, ಯೋಜನೆ, ಯೋಚನೆಗಳನ್ನು ಇಟ್ಟುಕೊಂಡು ಕೆಲಸ ಮಾಡುತ್ತಿರುವ ಯಲಿಗಾರ್ ಅವರು ಕನ್ನಡದ ಮೇಲಿನ ಪ್ರೀತಿ, ಗೌರವ, ಆಸಕ್ತಿಯಿಂದ ತಮ್ಮ ವೃತ್ತಿಯೊಂದಿಗೆ ಕನ್ನಡ ಭಾಷೆ, ಸಾಹಿತ್ಯ, ಸಂಸ್ಕೃತಿಯನ್ನು ಉಳಿಸಿ ಬೆಳೆಸುವ ಇಚ್ಛಾಶಕ್ತಿಯನ್ನು ಮೈಗೂಡಿಸಿಕೊಂಡು ಕೆಲಸ ಮಾಡಿದವರು. ನಿವೃತ್ತಿ ನಂತರವೂ ಸಾಮಾಜಿಕ ಕಳಕಳಿಯೊಂದಿಗೆ ತಮ್ಮ ಪ್ರವೃತ್ತಿಯನ್ನು ಮುಂದುವರೆಸಿಕೊಂಡು ಸಮಾಜಮುಖಿ ಕಾರ್ಯಗಳಲ್ಲಿ ತಮ್ಮನ್ನು ತೊಡಗಿಸಿಕೊಡಿದ್ದಾರೆ.

ಕೆಎಲ್‌ಇ ಕಾಲೇಜಿನಲ್ಲಿ ಪ್ರಾಧ್ಯಾಪಕಿಯಾಗಿ ವೃತ್ತಿಬದುಕು ಆರಂಬಿಸಿದ ಇವರು ವಚನ ಸಾಹಿತ್ಯವನ್ನು ಆಸಕ್ತಿಯಿಂದ ಅಧ್ಯಯನ ಮಾಡಿದವರು. ಹಂಪಿ ವಿಶ್ವವಿದ್ಯಾಲಯದಲ್ಲಿ ಎಂಫಿಲ್‌ಮಾಡಿ, ಕೇಂದ್ರ ಲೋಕಸೇವಾ ಆಯೋಗದಿಂದ ಪ್ರಸಾರ ಭಾರತಿಗೆ ಆಯ್ಕೆಯಾದ ಉತ್ತರ ಕರ್ನಾಟಕದ ಪ್ರಥಮ ಮಹಿಳೆ ಎನಿಸಿಕೊಂಡವರು. ತಮ್ಮ 35 ವರ್ಷದ ಸುದೀರ್ಘ ವೃತ್ತಿ ಜೀವನದಲ್ಲಿ ದೂರದರ್ಶನದಲ್ಲಿ ಮತ್ತು ಆಕಾಶವಾಣಿಯಲ್ಲಿ ಪ್ರೋಗ್ರಾಮ್ ಡೈರೆಕ್ಟರಾಗಿ ಕೆಲಸ ನಿರ್ವಹಿಸಿದ್ದಾರೆ. ಇದಲ್ಲದೆ ಮುದ್ರಣ ಮಾಧ್ಯಮದಲ್ಲೂ ಕೆಲಸ ಮಾಡಿ, ಹಲವು ಸಂಘ ಸಂಸ್ಥೆಗಳಲ್ಲಿ, ಅಧ್ಯಕ್ಷೆಯಾಗಿ, ನಿರ್ದೇಶಕಿಯಾಗಿ, ಕಾರ್ಯದರ್ಶಿಯಾಗಿ, ಖಜಾಂಚಿಯಾಗಿ, ಸದಸ್ಯೆಯಾಗಿ ಹಲವು ಹುದ್ದೆಗಳನ್ನು ಯಶಸ್ವಿಯಾಗಿ ನಿರ್ವಹಿಸಿ, ತಮ್ಮ ಸಾಮಾಜಿಕ ಕಳಕಳಿಯನ್ನು ಮೆರೆದಿದ್ದಾರೆ.

ಲೇಖಕಿಯಾಗಿಯೂ



ಕವಿಯಿತ್ರಿಯಾಗಿಯೂ ಗುರುತಿಸಿಕೊಂಡಿರುವ ಇವರ ನಾಕಾಣೆ, ಕೌದಿ, ಯಶೋಧರೆ ಮಲಗಿರಲಿಲ್ಲ, ಕವನ ಸಂಕಲನಗಳು, ಉದ್ಯೋಗ ವಾಹಿನಿ ಎಂಬ ಮಾಹಿತಿ ಪುಸ್ತಕ, ಗರಿ, ಜೀವನ್ಮುಖಿ ಸಾಂಪ್ರದಾಯಿಕ ಮಾಧ್ಯಮಗಳಲ್ಲಿ ಮಹಿಳೆ ಮುಂತಾದ ಕೃತಿಗಳನ್ನು ಹೊರತರುವ ಮೂಲಕ ಕನ್ನಡ ಸಾಹಿತ್ಯ ಸೇವೆಯಲ್ಲಿ ತೊಡಗಿಸಿಕೊಂಡಿದ್ದಾರೆ. ಹಲವು ಸಂಘ ಸಂಸ್ಥೆಗಳ ಸಂಸ್ಥಾಪಕಿಯಾಗಿ, ಅಧ್ಯಕ್ಷೆಯಾಗಿ ಕೆಲಸಮಾಡಿದ್ದಾರೆ. ಪದೂರದರ್ಶನದ ಮನೆ ಮಾತಾಗಿರುವ "ಶುಭೋದಯ ಕರ್ನಾಟಕ" ಕಾರ್ಯಕ್ರಮವು ಸೇರಿದಂತೆ, ಸಂಗಾತಿ ಸಂಪ್ರೀತಿ, ಚೆಲುವಿಗೆ ಚಿತ್ತಾರ, ಓ ಸಖಿ, ಚಿಣ್ಣರ ಲೋಕ, ಶಕ್ತಿ, ಕ್ಷಿತಿಜ, ತಿಂಗಳ ಬೆಳಕು, ಲಿಟರರಿ ಗುರು, ಜನನಾಯಕ ಮುಂತಾದ ಕಾರ್ಯಕ್ರಮಗಳನ್ನು ಯಶಸ್ವಿಯಾಗಿ ನಡಸಿಕೊಡುವ ಮೂಲಕ ಸೃಜನಶೀಲ ವ್ಯಕ್ತಿತ್ವದಿಂದ ಎಲ್ಲರ ಗಮನ ಸೆಳೆದಿದ್ದಾರೆ. ಇದುವರೆಗೂ ಐದು ಸಾವಿರಕ್ಕೂ ಕಾರ್ಯಕ್ರಮಗಳನ್ನು ನಡೆಸಿಕೊಟ್ಟಿರುವ ಹೆಗ್ಗಳಿಕೆ ಇವರದ್ದು. ಆಕಾಶವಾಣಿಯಲ್ಲಿ ವಿನೂತನ ಪರಿಕಲ್ಪನೆಯೊಂದಿಗೆ ಸ್ತ್ರೀ ಜಾಗೃತಿ, ಹೆಜ್ಜೆ ಗುರುತು, ಮಹಿಳಾ ಲೋಕ, ಬಾಲಜಗತ್ತು ಇನ್ನಿತರ ಕಾರ್ಯಕ್ರಮಗಳನ್ನು ನಡೆಸಿಕೊಟ್ಟು ತಮ್ಮ ಕ್ರಿಯಾಶೀಲತೆಯನ್ನು ನಿರೂಪಿಸಿದ್ದಾರೆ.

ವಿಶ್ವ ಕನ್ನಡ ಸಮ್ಮೇಳನ, ಹಂಪಿ ಉತ್ಸವ, ಕಿತ್ತೂರು ಉತ್ಸವ, ದಸರಾ ಗೋಷ್ಠಿಗಳಿಗೂ ಅಧ್ಯಕ್ಷೆಯಾಗಿ, ಸಂಪನ್ಮೂಲ ವ್ಯಕ್ತಿಯಾಗಿ, ನಿರೂಪಕಿಯಾಗಿಯೂ ಕೆಲಸ ಮಾಡಿರುವ ಅನನ್ಯ ಅನುಭವ ಇವರದ್ದು. ನೀನೆಂಬೆ ಅದು ನಾನಲ್ಲ ಎಂಬ ಅಭಿನಂದನಾ ಗ್ರಂಥವೂ ಸಮರ್ಪಿತವಾಗಿರುವುದು ಇನ್ನಷ್ಟು ಪ್ರೇರಣೆ ನೀಡಿದೆ. ಸಾಹಿತ್ಯದಲ್ಲಿ ಮಹಿಳಾ ಪರ ಚಿಂತನೆಗಳು ಇವರ ಆಸಕ್ತಿಯ ವಿಷಯವಾಗಿರುವುದು ಇನ್ನೊಂದು ವಿಶೇಷ. ನಿರ್ಮಲಾ ಯಲಿಗಾರ್ ಅವರು ಪ್ರಶಸ್ತಿಗಳ ಹಿಂದೆ ಎಂದೂ ಹೋದವರಲ್ಲ, ಆದಾಗ್ಯೂ ಇವರನ್ನರಸಿ ಬಂದ ಪ್ರಶಸ್ತಿಗಳಿಗೆ ಕೊರತೆಯಿಲ್ಲ. ಕರ್ನಾಟಕ ಮಾಧ್ಯಮ ಅಕಾಡಮಿ ಪ್ರಶಸ್ತಿ, ಚಾಲುಕ್ಯ ಪ್ರಶಸ್ತಿ, ಕದಳಿ ಪ್ರಶಸ್ತಿ, ಆರ್ಯಭಟ ಪ್ರಶಸ್ತಿಗಳೂ ಸೇರಿದಂತೆ ಮೂವತ್ತೈದಕ್ಕೂ ಹೆಚ್ಚು ಪ್ರಶಸ್ತಿಗಳು ಇವರ ನ್ಯಾಯ, ನಿಷ್ಠೆ, ಪಾರದರ್ಶಕತೆಯ ಕೆಲಸಗಳಿಗೆ ಹೆಗ್ಗುರುತಾಗಿ ಸಂದ ಪ್ರಶಸ್ತಿಗಳಾಗಿವೆ. ಕನ್ನಡದ ಕೆಲಸವನ್ನು ತಮ್ಮ ನಿತ್ಯದ ಕಾಯಕವನ್ನಾಗಿಸಿಕೊಂಡು, ಎಲ್ಲರನ್ನೂ ತಮ್ಮೊಟ್ಟಿಗೆ ಕೊಂಡೊಯ್ಯುವ ನಾಯಕತ್ವದ ಗುಣವನ್ನೂ ಮೈಗೂಡಿಸಿಕೊಂಡಿರುವ ಡಾ. ಸಿ. ಯಲಿಗಾರ ಅವರ ಕನ್ನಡಪರ, ಜನಪರ, ಮಹಿಳಾಪರ ಕಾರ್ಯಕ್ರಮಗಳು ಯಶಸ್ಸನ್ನು ಕಾಣಲಿ, ಇನ್ನಷ್ಟು ಉತ್ಸಾಹದಿಂದ ಕೆಲಸ ಮಾಡುವ ಅವಕಾಶ ದೊರೆಯಲಿ ಎಂದು ಹಾರೈಸೋಣ.



ಇಂದಿರಾ ನಾಡಿಗ್,
ಬೆಂಗಳೂರು

## ವೇದಮಾರ್ಗ ಪ್ರವರ್ತಕ ಬುಕ್ಕರಾಯ!

ಕನ್ನಡದ ರಾಜ-ಮಾಹಾರಾಜರು

**ಕನ್ನಡ ಡಿಂಡಿಮ ಭಾರಿಸುವೆಎಂದೂ ಬರೆಯುತ**
**ಬಾಳುವೆ**
**ಕನ್ನಡ ಹೊನ್ನುಡಿ ದೇವಿಯನುನಾ ಪೂಜಿಸುವೆ**
**ಆರಾಧಿಸುವೆ**
**ಬೆಳ್ಳಿ ತೆರೆಯ ಮೊದಲ ಸಾಹಿತಿಬೆಳ್ಳಾವೆಯವರಿಗೆ**
**ವಂದಿಸುವೆಬೆಳ್ಳಿ ಮೋಡದಿ ಖ್ಯಾತಿಯ ಪಡೆದತ್ರಿವೇಣಿಗೆ ತಲೆ**
**ಬಾಗಿಸುವೆ**
**ಬಂಗಾರದ ಮನುಷ್ಯ ರಾಮರಾಯರಎಂದೂ ನಾನು**
**ಧ್ಯಾನಿಸುವೆಭೂತಯ್ಯನ ಪಾತ್ರವ ಸೃಷ್ಟಿಸಿದಗೊರೂರರನ್ನು**
**ಗೌರವಿಸುವೆನಾನೂ ಅವರಂತೆ ಶಾಶ್ವತ ಹೆಸರನುಪಡೆವ**
**ಶಕ್ತಿಯ ನೀಡೆಂದು**

ವಿಜಯನಗರ ಸಾಮ್ರಾಜ್ಯದ ಬುನಾದಿಯನ್ನು ಭದ್ರಪಡಿಸಿದ ಮಹಾನ್ ಸಾಮ್ರಾಟ, ಮೊದಲನೆಯ ಬುಕ್ಕರಾಯ (ಕ್ರಿ.ಶ. 13561377), ಇವರ ಯುಗವು ಸಾಮ್ರಾಜ್ಯದ ವಿಸ್ತರಣೆ ಮತ್ತು ಸಾಂಸ್ಕೃತಿಕ ಏಳಿಗೆಯ ಸುವರ್ಣ ಅಧ್ಯಾಯವಾಗಿದೆ.

ಹಿರಿಯ ಸಹೋದರ ಮೊದಲನೆಯ ಹರಿಹರ ಅವರ ನಂತರ ಸಿಂಹಾಸನ ಏರಿದ ಬುಕ್ಕರಾಯರು, ಸಾಮ್ರಾಜ್ಯಕ್ಕೆ ನಿಜವಾದ ಭೌಗೋಳಿಕ ಮತ್ತು ಆಡಳಿತಾತ್ಮಕ ಏಕತೆಯನ್ನು ತಂದರು.

ಬುಕ್ಕರಾಯನ ಸಾಮ್ರಾಜ್ಯ ವಿಸ್ತರಣೆಯ ಸಾಹಸಗಳು:

ಬುಕ್ಕರಾಯನು ತನ್ನ 21 ವರ್ಷಗಳ ಆಳ್ವಿಕೆಯಲ್ಲಿ ವಿಜಯನಗರ ಸಾಮ್ರಾಜ್ಯದ ಗಡಿಯನ್ನು ದಕ್ಷಿಣ ಭಾರತದಾದ್ಯಂತ ವ್ಯಾಪಿಸಿ, ಅದನ್ನು ನಿಜವಾದ "ಸಾಮ್ರಾಜ್ಯ"ಎನ್ನುವಂತೆ ಪರಿವರ್ತಿಸಿದರು.

### ■ ಮಧುರೈ ಸುಲ್ತಾನರ ಪರಾಭವ (ದಕ್ಷಿಣ ದಿಗ್ವಿಜಯ):

ಇದು ಬುಕ್ಕರಾಯರ ಆಳ್ವಿಕೆಯ ಮಹಾಸಾಧನೆ. ತಮ್ಮ ಸಮರ್ಥ ಪುತ್ರ ಕುಮಾರ ಕಂಪಣ ನೇತೃತ್ವದಲ್ಲಿ ದಕ್ಷಿಣಕ್ಕೆ ದಂಡಯಾತ್ರೆ ಕೈಗೊಂಡರು. 1371 ರಲ್ಲಿ ಮಧುರೈ ಸುಲ್ತಾನರನ್ನು ಸಂಪೂರ್ಣವಾಗಿ ಸೋಲಿಸಿ, ಈ ಪ್ರದೇಶವನ್ನು ವಿಜಯನಗರದ ಅಧೀನಕ್ಕೆ ತಂದರು. ಈ ವಿಜಯದಿಂದಾಗಿ ಸಾಮ್ರಾಜ್ಯದ ಗಡಿ ರಾಮೇಶ್ವರಂ



ವರೆಗೆ ವಿಸ್ತರಿಸಿತು. ಕಂಪಣನ ಪತ್ನಿ ಗಂಗಾಂಬಿಕೆ ಬರೆದ ಸಂಸ್ಕೃತ ಕೃತಿ 'ಮಧುರಾ ವಿಜಯಂ' (ವೀರಕಂಪರಾಯ ಚರಿತ್ರಂ) ಈ ಸಾಹಸವನ್ನು ವಿವರಿಸುತ್ತದೆ.

### ■ ಶಂಬುವರಾಯರ ಮತ್ತು ಕೊಂಡವೀಡು ರೆಡ್ಡಿಗಳ ಸೋಲು:

1360ರ ಹೊತ್ತಿಗೆ, ಅವರು ದಕ್ಷಿಣದ ಆರ್ಕಾಟ್‌ನಲ್ಲಿದ್ದ ಶಂಬುವರಾಯರ ರಾಜ್ಯವನ್ನು ಮತ್ತು ಆಂಧ್ರದ ಕೊಂಡವೀಡಿನ ರೆಡ್ಡಿಗಳ ರಾಜ್ಯಗಳನ್ನು ಸೋಲಿಸಿ ತಮ್ಮ ಸಾಮ್ರಾಜ್ಯಕ್ಕೆ ಸೇರಿಸಿಕೊಂಡರು. ಪೆನುಕೊಂಡ ಸುತ್ತಮುತ್ತಲಿನ ಪ್ರದೇಶಗಳು ವಿಜಯನಗರದ ಭಾಗವಾದವು.

### ■ ಬಹಮನಿಗಳೊಂದಿಗಿನ ಸಂಘರ್ಷ:

ಬುಕ್ಕರಾಯನಿಗೆ ಉತ್ತರದಲ್ಲಿ ಪ್ರಬಲ ಶತ್ರುಗಳೆಂದರೆ ಡೆಕ್ಕನ್‌ನ ಬಹಮನಿ ಸುಲ್ತಾನರು. ರಾಯಚೂರು ದೋಬ್ (ಕೃಷ್ಣಾ-ತುಂಗಭದ್ರಾ ನದಿಗಳ ನಡುವಿನ ಫಲವತ್ತಾದ ಪ್ರದೇಶ) ಮೇಲಿನ ನಿಯಂತ್ರಣಕ್ಕಾಗಿ ಬಹಮನಿ ಸುಲ್ತಾನ ಮುಹಮ್ಮದ್ ಷಾ ಮತ್ತು ಮುಜಾಹಿದ್ ಷಾ ಅವರೊಂದಿಗೆ ಅನೇಕ ಯುದ್ಧಗಳನ್ನು ನಡೆಸಿದರು. 1374 ರ ಹೊತ್ತಿಗೆ, ರಾಯಚೂರು ದೋಬ್‌ನ ಮೇಲಿನ ಪ್ರಾಬಲ್ಯವನ್ನು ಗಳಿಸುವಲ್ಲಿ ಯಶಸ್ವಿಯಾದರು.

### ■ ಕರಾವಳಿ ಪ್ರದೇಶಗಳ ನಿಯಂತ್ರಣ:

ಪಶ್ಚಿಮ ಕರಾವಳಿಯ ಪ್ರಮುಖ ವ್ಯಾಪಾರ ಕೇಂದ್ರವಾದ ಗೋವಾ ಸೇರಿದಂತೆ, ಕೊಂಕಣ ಮತ್ತು ಮಲಬಾರ್ ಕರಾವಳಿ ಪ್ರದೇಶಗಳ ಮೇಲೂ ಹಿಡಿತ ಸಾಧಿಸಿದರು. ಇದರಿಂದ ಅಂತರರಾಷ್ಟ್ರೀಯ ವ್ಯಾಪಾರಕ್ಕೆ ಉತ್ತೇಜನ ದೊರೆಯಿತು.

### ■ ಸಾರ್ವಭೌಮತ್ವದ ದೃಢೀಕರಣ:

ಅವರ ಪ್ರಬಲ ಸೇನಾಬಲದಿಂದಾಗಿ ಶ್ರೀಲಂಕಾದ ಜಾಫ್ನಾ ಸಾಮ್ರಾಜ್ಯ ಮತ್ತು ಮಲಬಾರ್‌ನ ಝಮೊರಿನ್ ಕೂಡ ಬುಕ್ಕರಾಯರಿಗೆ ಕಪ್ಪ ಕಾಣಿಕೆಗಳನ್ನು ಸಲ್ಲಿಸುವಂತಾಯಿತು. ಇದು ವಿಜಯನಗರ ಸಾಮ್ರಾಜ್ಯವು ದಕ್ಷಿಣ ಭಾರತದ ಸರ್ವೋಚ್ಚ ಶಕ್ತಿಯಾಗಿ ಹೊರಹೊಮ್ಮಿದ್ದನ್ನು ಸೂಚಿಸುತ್ತದೆ.

ದೇವಾಲಯಗಳು, ವೇದ-ಶಾಸ್ತ್ರ ಅಧ್ಯಯನ ಕೇಂದ್ರಗಳು , ಪುರಾತನ ಶಾಸನಗಳು ನಾಶ ಗೊಂಡಿದವುಗಳ ಮರುಸ್ಥಾಪನೆ, ಸಾಮರಸ್ಯದ ಪ್ರಚೋದನೆ ಮುಂತಾದ ದೃಷ್ಟಿಕೋನದಿಂದ; ಸಮಾಜದ ಧಾರ್ಮಿಕ, ಶೈಕ್ಷಣಿಕ ಪುನರ್ ಪ್ರಗತಿಗೆ ಬುಕ್ಕರಾಯ ಪ್ರಮುಖ ಪಾತ್ರವಹಿಸಿದ್ದರು. ಹೀಗಾಗಿ ಅವರನ್ನು ವೇದಮಾರ್ಗ ಪ್ರವರ್ತಕ /ಸ್ಥಾಪಕ ಎಂದು ಪ್ರಜೆಗಳು ಕೊಂಡಾಡುತ್ತಿದ್ದರು

ಬುಕ್ಕರಾಯನ ಸಾಂಸ್ಕೃತಿಕ ಮತ್ತು ಆಡಳಿತಾತ್ಮಕ ಕೊಡುಗೆಗಳು:

ಯುದ್ಧಗಳ ಹೊರತಾಗಿಯೂ, ಬುಕ್ಕರಾಯನು ಆಂತರಿಕ ಏಳಿಗೆ ಮತ್ತು ಸಾಂಸ್ಕೃತಿಕ ಸೌಹಾರ್ದತೆಗೆ ಮಹತ್ವ ನೀಡಿದರು.

1. ಧರ್ಮ ಸಹಿಷ್ಣುತೆ ಮತ್ತು ಸಮನ್ವಯ (Tolerance):

ಇವರ ಆಳ್ವಿಕೆಯು ಧಾರ್ಮಿಕ ಸಮನ್ವಯಕ್ಕೆ ಒಂದು ಉತ್ತಮ ಉದಾಹರಣೆಯಾಗಿದೆ. ಒಮ್ಮೆ ವೈಷ್ಣವರು ಮತ್ತು ಜೈನರ ನಡುವೆ ಉಂಟಾದ ವಿವಾದವನ್ನು ಬುಕ್ಕರಾಯರು ಸೌಹಾರ್ದಯುತವಾಗಿ ಬಗೆಹರಿಸಿದರು. ಅವರು ಜೈನ ಧರ್ಮೀಯರಿಗೆ ರಕ್ಷಣೆ ನೀಡುವುದಾಗಿ ಭರವಸೆ ನೀಡಿದರು, ಇದು ಅವರ ಧರ್ಮ ಸಹಿಷ್ಣುತೆಯ ನೀತಿಗೆ ಸಾಕ್ಷಿಯಾಗಿದೆ.

2. ವೈದಿಕ ಧರ್ಮದ ಪುನರುಜ್ಜೀವನ:

ಆಚಾರ್ಯ ವಿದ್ಯಾರಣ್ಯ ಮತ್ತು ಪ್ರಸಿದ್ಧ ವೇದ ವ್ಯಾಖ್ಯಾನಕಾರರಾದ ಸಾಯಣಾಚಾರ್ಯರ ಆಶ್ರಯದಲ್ಲಿ ವೇದಗಳು ಮತ್ತು ಇತರ ಧರ್ಮಗ್ರಂಥಗಳಿಗೆ ಭಾಷ್ಯಗಳನ್ನು (ವ್ಯಾಖ್ಯಾನ) ಬರೆಯಿಸಿದರು. ಇದು ಹಿಂದೂ ಧರ್ಮದ ಜ್ಞಾನ ಮತ್ತು ಸಂಸ್ಕೃತಿಯನ್ನು ಪುನರುಜ್ಜೀವನಗೊಳಿಸಲು ನೆರವಾಯಿತು.

3. ಸಾಹಿತ್ಯ ಮತ್ತು ಕಲೆಯ ಪೋಷಣೆ:

ಇವರು ತೆಲುಗು ಕವಿ ನಾಚನಾ ಸೋಮ ಅವರನ್ನು ತಮ್ಮ ಆಸ್ಥಾನ ಕವಿಯಾಗಿ ನೇಮಿಸಿದರು. ಹಲವಾರು ವಿದ್ವಾಂಸರು ಮತ್ತು ಕವಿಗಳಿಗೆ ಆಶ್ರಯ ನೀಡಿ, ಸಾಹಿತ್ಯ ಚಟುವಟಿಕೆಗಳಿಗೆ ಉತ್ತೇಜನ ನೀಡಿದರು.

4. ಆಡಳಿತದ ಬಲವರ್ಧನೆ:

ಮೊದಲನೆಯ ಹರಿಹರನು ಹಾಕಿದ ಅಡಿಪಾಯದ ಮೇಲೆ ಆಡಳಿತ ವ್ಯವಸ್ಥೆಯನ್ನು ಬಲಪಡಿಸಿದರು. ರಾಜಧಾನಿ ವಿಜಯನಗರಕ್ಕೆ ಮತ್ತಷ್ಟು ಭದ್ರತೆಯನ್ನು ಒದಗಿಸಿದರು ಮತ್ತು ಆಂತರಿಕ ಸೌಲಭ್ಯಗಳನ್ನು ಸುಧಾರಿಸಿದರು

.ಹೀಗೆ, ಮೊದಲನೆಯ ಬುಕ್ಕರಾಯ ವಿಜಯನಗರ ಸಾಮ್ರಾಜ್ಯವನ್ನು ದಕ್ಷಿಣ ಭಾರತದ ಪ್ರಬಲ ಶಕ್ತಿಯನ್ನಾಗಿ ಪರಿವರ್ತಿಸಿ, ಅದಕ್ಕೆ ಭದ್ರವಾದ ಭೌಗೋಳಿಕ ಮತ್ತು ಸಾಂಸ್ಕೃತಿಕ ಸ್ಥಾನಮಾನವನ್ನು ಒದಗಿಸಿದ ಮಹಾನ್ ದೂರದೃಷ್ಟಿಯ ಆಡಳಿತಗಾರನಾಗಿ ಪ್ರಸಿದ್ಧಿ ಹೊಂದಿದನು.

ಕನ್ನಡ ನಾಡು ಸಾಂಸ್ಕೃತಿಕವಾಗಿ ಇಷ್ಟು ಶ್ರೀಮಂತವಾಗಿದೆ ಎಂದರೆ, ಇದಕ್ಕೆ ಬುಕ್ಕರಾಯನಂಥ ಹಲವಾರು ಅರಸುಗಳ ವೀರತ್ವದೊಂದಿಗೆ, ಕಲೆ, ಸಾಹಿತ್ಯ, ಸಂಗೀತಗಳಲ್ಲಿ ಅವರಿಗಿದ್ದ ಸದಭಿರುಚಿಯೇ ಕಾರಣ.

ಜೈ ಭುವನೇಶ್ವರಿ!



ರೂಪ ಮಂಜುನಾಥ
ಹೊಳೆನರಸೀಪುರ

Published by Mihir Akash K.R Printed by M.S.Shivaprakash on behalf of Mihir Akash K.R. Printed at M.S. Shivaprakash, IDEAL OFFSET PRINTERS, #337, SLJ Temple Street, Old Town Mandya Dist-571401, Karnataka. Published from Mihir Akash K.R, #78, Daya Marga Near Geetha School, Siddartha Nagar Mysore-570011, Editor K.N Ravi,

## ಅಬಕಾರಿ ಉಪನಿರೀಕ್ಷಕರಿಗೆ ಸನ್ಮಾನ

ಗುಂಡ್ಲುಪೇಟೆ: ತಾಲೂಕಿನ ಅಗತಗೌಡನಹಳ್ಳಿ ಗ್ರಾಮದ ರಾಘವೇಂದ್ರ (ಅಪುರ) ಅವರು ನೂತನವಾಗಿ ಮೈಸೂರು ಗ್ರಾಮಾಂತರ ಅಬಕಾರಿ ಉಪ ನಿರೀಕ್ಷಕರಾಗಿ ಪದನ್ನೊತಿ ಪಡೆದ ಹಿನ್ನೆಲೆ ಅಗತಗೌಡನಹಳ್ಳಿ ಗ್ರಾಮದ ಯುವಕ ಮಿತ್ರರು ರಾಘವೇಂದ್ರ ಅವರ ಮೈಸೂರಿನ ಸ್ವಗೃಹದಲ್ಲಿ ಸನ್ಮಾನಿಸಿದರು.

ಈ ಸಂದರ್ಭದಲ್ಲಿ ಗ್ರಾಮದ ಯುವಕ ಮಿತ್ರರಾದ ಸಾಗರ್, ಶಿವಸ್ವಾಮಿ, ಕಿರಣ್ ಬಾಬು, ಗೌತಮ್, ಆಕಾಶ್ , ಮಂಜು ಶುಭಾಶಯ ಕೋರಿದರು.



ವರ್ತಮಾನ
ಜಾಹಿರಾತಿಗೆ ಉತ್ತಮ ಮಾಧ್ಯಮ

## ಕೊಡಗು ಜಿಲ್ಲಾ ಪೊಲೀಸ್ ವಾರ್ಷಿಕ ಕ್ರೀಡಾಕೂಟಕ್ಕೆ ಚಾಲನೆ



ಮಡಿಕೇರಿ:-ಕೊಡಗು ಜಿಲ್ಲಾ ಪೊಲೀಸ್ ವಾರ್ಷಿಕ ಕ್ರೀಡಾಕೂಟಕ್ಕೆ ಜಿ.ಪಂ.ಸಿಇಒ ಆನಂದ ಪ್ರಕಾಶ್ ಮೀನಾ ಅವರು ನಗರದ ಡಿ.ಎ.ಆರ್. ಕವಾಯತು ಮೈದಾನದಲ್ಲಿ ಗುರುವಾರ ಚಾಲನೆ ನೀಡಿದರು.

ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿ ಕೆ.ರಾಮರಾಜನ್, ಹೆಚ್ಚುವರಿ ಪೊಲೀಸ್ ಅಧೀಕ್ಷಕರಾದ ಬಿ.ಪಿ.ದಿನೇಶ್ ಕುಮಾರ್ ಇತರರು ಇದ್ದರು.

ನ.29 ರಂದು ಸಂಜೆ 4 ಗಂಟೆಗೆ ನಗರದ ಡಿಎಆರ್ ಕವಾಯತು ಮೈದಾನದಲ್ಲಿ ಸಮಾರೋಪ ಸಮಾರಂಭ ನಡೆಯಲಿದೆ. ಮೈಸೂರು



ದಕ್ಷಿಣ ವಲಯದ ಪೊಲೀಸ್ ಉಪ ಮಹಾ ನಿರೀಕ್ಷಕರಾದ ಡಾ.ಎಂ.ಬಿ.ಬೋರಲಿಂಗಯ್ಯ ಇತರರು ಪಾಲ್ಗೊಳ್ಳಲಿದ್ದಾರೆ.

## ಕರವೇ ಕಾರ್ಯಕರ್ತರ ಪ್ರತಿಭಟನೆ

ಕೆ.ಆರ್.ಪೇಟೆ: ತಾಲ್ಲೂಕು ಕರ್ನಾಟಕ ರಕ್ಷಣಾ ವೇದಿಕೆ ಸ್ವಾಭಿಮಾನಿ ಸೇನೆಯ ವತಿಯಿಂದ ಕೆ.ಆರ್.ಪೇಟೆ ಪಟ್ಟಣದ ಪುರಸಭಾ ಕಚೇರಿಯ ಮುಂದೆ ತಾಲ್ಲೂಕು ಘಟಕದ ಅಧ್ಯಕ್ಷ ಸಮೀರ್ ನೇತೃತ್ವದಲ್ಲಿ ಕಾರ್ಯಕರ್ತರು ಪ್ರತಿಭಟನೆ ನಡೆಸಿ ಪುರಸಭಾ ಅಧಿಕಾರಿಗಳಿಗೆ ಮನವಿ ಸಲ್ಲಿಸಿದರು.

ಪಟ್ಟಣದಲ್ಲಿ ಅಲ್ಪಸಂಖ್ಯಾತರಿಗೆಂದು ಕಟ್ಟಿದ್ದ ಸಮುದಾಯ ಭವನವನ್ನು ಪುರಸಭಾ ಕಚೇರಿಯನ್ನಾಗಿ 7ವರ್ಷಗಳ ಹಿಂದೆ ಪರಿವರ್ತನೆ ಮಾಡಿಕೊಳ್ಳಲಾಗಿದೆ. ಆದರೂ ಬಡ ಅಲ್ಪಸಂಖ್ಯಿತರು ಹಾಗೂ ಹಿಂದುಳಿದ ವರ್ಗಗಳ ಬಡವರಿಗೆ ಮಧುವೆ ಸೇರಿದಂತೆ ಶುಭ ಕಾರ್ಯಕ್ರಮವನ್ನು ಮಾಡಲು ಬದಲಿ ವ್ಯವಸ್ಥೆ ಮಾಡಿರುವುದಿಲ್ಲ ಇದರಿಂದ ತಾಲ್ಲೂಕಿನ ಬಡವರಿಗೆ ತೀವ್ರ ತೊಂದರೆಯಾಗಿರುತ್ತದೆ ಕೂಡಲೇ ಪುರಸಭೆ ಕಚೇರಿ ಸಮೀಪವೇ ಇರುವ ಖಾಲಿ ನಿವೇಶನದಲ್ಲಿ ಅಲ್ಪಸಂಖ್ಯಾತರಿಗೆ ಹಾಗೂ ಹಿಂದುಳಿದ ಸಮುದಾಯಗಳಿಗೆ ಪ್ರತ್ಯೇಕ ಸಮುದಾಯದ ಭವನ ನಿರ್ಮಿಸಿಕೊಡುವ ಮೂಲಕ ಅನುಕೂಲ ಮಾಡಿಕೊಡಬೇಕು ಎಂದು ಪ್ರತಿಭಟನಾಕಾರರು ಪುರಸಭಾ ಅಧಿಕಾರಿಗಳನ್ನು ಒತ್ತಾಯ ಮಾಡಿದರು. ಈ ಸಂಬಂಧ ಕ್ಷೇತ್ರದ ಶಾಸಕ ಹೆಚ್.ಟಿ.ಮಂಜು, ಹಾಗೂ ಮಂಡ್ಯ ಜಿಲ್ಲಾ ಉಸ್ತುವಾರಿ ಸಚಿವ ಎನ್.ಚೆಲುವರಾಯಸ್ವಾಮಿ ಅವರು ತುರ್ತು ಗಮನ ಹರಿಸಿ



ಅಲ್ಪಸಂಖ್ಯಾತರಿಗೆ ಪ್ರತ್ಯೇಕ ಸಮುದಾಯ ಭವನ ನಿರ್ಮಿಸಿಕೊಡಲು ಸೂಕ್ತ ಕ್ರಮ ವಹಿಸಬೇಕು ಎಂದು ಮನವಿ ಮಾಡಿದರು. ನಮ್ಮ ಈ ಬೇಡಿಕೆಯನ್ನು ಆದಷ್ಟೂ ಶೀಘ್ರವಾಗಿ ಈಡೇರಿಸದೇ ಇದ್ದಲ್ಲಿ ಪುರಸಭಾ ಕಚೇರಿಯ ಮುಂದೆ ಅಮರಣಾಂತ ಉಪವಾಸ ಸತ್ಯಾಗ್ರಹ ಚಳುವಳಿ ಹಮ್ಮಿಕೊಳ್ಳಬೇಕಾಗುತ್ತದೆ ಎಂದು ತಾಲ್ಲೂಕು ಕರವೇ ಸ್ವಾಭಿಮಾನಿ ಸೇನೆಯ ಅಧ್ಯಕ್ಷ ಸಮೀರ್, ಪ್ರಧಾನ ಕಾರ್ಯದರ್ಶಿ ಸಂತೇಬಾಚಹಳ್ಳಿ ಮಂಜುನಾಥ್, ಕಾನೂನು ಘಟಕದ ತಾಲ್ಲೂಕು ಜಿಲ್ಲಾಧ್ಯಕ್ಷ ಆರ್.ಎನ್. ದೇವಾನಂದ್, ಆಟೋ ಘಟಕದ ಅಧ್ಯಕ್ಷ ಕೆ.ಎನ್. ವಾಸುದೇವ್, ಮುಖಂಡರಾದ ನಯಾಜ್ ಪಾಷಾ, ದಯಾನಂದ್, ಅಂಗಡಿ ಸಲ್ಮಾನ್‌ಖಾನ್, ಇಬ್ರಾಹಿಂ, ಸಯ್ಯದ್ ಅನ್ಸರ್, ಅಹಮದ್ ಶೇಖ್, ಪ್ರಭಾಕರ್.ಕೆ.ಜಿ, ಸೇರಿದಂತೆ ಹಲವು ಪ್ರತಿಭಟನಾಕಾರರು ಪ್ರತಿಭಟನೆಯಲ್ಲಿ ಭಾಗವಹಿಸಿದ್ದರು. ಪ್ರತಿಭಟನೆಯ ನಂತರ ಪುರಸಭಾ ಪ್ರಭಾರಿ ಮುಖ್ಯಾಧಿಕಾರಿಗಳಿಗೆ ಮನವಿ ಸಲ್ಲಿಸಿದರು.

# ಸರ್ಕಾರಿ ಮಹಿಳಾ ಕಾಲೇಜಿನ ನೂತನ ಕಟ್ಟಡಕ್ಕೆ ಶಂಕುಸ್ಥಾಪನೆ

ಚಾಮರಾಜನಗರ: ನಗರದ ಸರ್ಕಾರಿ ಪ್ರಥಮ ದರ್ಜೆ ಮಹಿಳಾ ಕಾಲೇಜಿನಲ್ಲಿ ನಾಲ್ಕು ಕೋಟಿ ವೆಚ್ಚದಲ್ಲಿ ನಿರ್ಮಾಣವಾಗಲಿರುವ ನೂತನ ಕಟ್ಟಡ ಕಾಮಗಾರಿಗೆ ಶಂಕುಸ್ಥಾಪನೆ ನೆರವೇರಿತು.

ಉನ್ನತ ಕಾಲೇಜು ಶಿಕ್ಷಣ ಇಲಾಖೆಯ ಪ್ರಾದೇಶಿಕ ಜಂಟಿ ನಿರ್ದೇಶಕ ನಾಗೇಂದ್ರ ಪ್ರಸಾದ್ ಶಂಕುಸ್ಥಾಪನೆ ನೆರವೇರಿಸಿದರು. ಇದೇ ಸಂದರ್ಭದಲ್ಲಿ ಮಾತನಾಡಿದ ಅವರು ಭಾರತ ಸಂವಿಧಾನ ಅಂಗೀಕಾರವಾದ ದಿನದಂದು ಕಾಲೇಜಿನ ನೂತನ ಕಟ್ಟಡ ಕಾಮಗಾರಿಗೆ ಚಾಲನೆ ಸಿಕ್ಕಿರುವುದು ಸಂತಸ ತಂದಿದೆ. ಇದು ಅರ್ಥಪೂರ್ಣ ಕಾರ್ಯಕ್ರಮವಾಗಿದೆ ಎಂದರು.

ಕಾಲೇಜು ಅಭಿವೃದ್ಧಿ ಸಮಿತಿಯ ಸದಸ್ಯ ರಂಗಸ್ವಾಮಿ ಮಾತನಾಡಿ ಕಾಲೇಜು ನೂತನ ಕಟ್ಟಡವು ಗುಣಮಟ್ಟದಿಂದ ನಿರ್ಮಾಣವಾಗಬೇಕು. ಚಾಮರಾಜನಗರ ಜಿಲ್ಲೆಯು ಗಡಿ ಜಿಲ್ಲೆಯಾಗಿದ್ದು ವಿದ್ಯಾರ್ಥಿಗಳಿಗೆ ಅನುಕೂಲವಾಗುವಂತೆ ಕಾಲೇಜು ಕಟ್ಟಡ ನಿರ್ಮಿಸಬೇಕಿದೆ. ಉನ್ನತ ಶಿಕ್ಷಣಕ್ಕೆ ಪೂರಕವಾದ ಎಲ್ಲಾ ಸೌಲಭ್ಯಗಳು ಲಭ್ಯವಾಗಬೇಕು. ಇಲ್ಲಿ ವಿದ್ಯಾಭ್ಯಾಸ ಮುಗಿಸಿ ಉನ್ನತ ಹುದ್ದೆಯನ್ನು ವಿದ್ಯಾರ್ಥಿನಿಯರು ಅಲಂಕರಿಸುವ ಮೂಲಕ ಕಾಲೇಜು ಹಾಗೂ ಜಿಲ್ಲೆಗೆ ಹೆಸರಾಗಬೇಕು ಎಂದರು.

ಕಾಲೇಜು ಅಭಿವೃದ್ಧಿ ಸಮಿತಿಯ ಮತ್ತೋರ್ವ ಸದಸ್ಯ ಪರ್ವತರಾಜು ಮಾತನಾಡಿ ಕಾಲೇಜು ಸ್ಥಾಪನೆಯಾದಾಗ ಕೃಷಿ ಹಾಗೂ ರೇಷ್ಮೆ ಇಲಾಖೆಯ ಬಾಡಿಗೆ ಕಟ್ಟಡದಲ್ಲಿ ಆರಂಭಗೊಂಡಿತು. ಇಂದು ನೂತನ ಕಟ್ಟಡ ಶಂಕುಸ್ಥಾಪನೆಗೊಳ್ಳುತ್ತಿರುವುದು ಸಂತಸದ ವಿಷಯವಾಗಿದೆ. ಕಾಲೇಜು ಉನ್ನತ ಮಟ್ಟದಲ್ಲಿ ಬೆಳೆಯಲು ಪ್ರಮುಖವಾಗಿ ವಿದ್ಯಾರ್ಥಿನಿಯರು ಅತಿ ಹೆಚ್ಚು ಸಂಖ್ಯೆಯಲ್ಲಿ ದಾಖಲಾಗಬೇಕು. ಇಲ್ಲಿನ ವಿದ್ಯಾರ್ಥಿನಿಯರು



ಭವಿಷ್ಯದಲ್ಲಿ ಉತ್ತಮ ಬದುಕು ರುಪಿಸಿಕೊಳ್ಳಬೇಕು ಎಂದು ಸಲಹೆ ಮಾಡಿದರು. ಕಾರ್ಯಕ್ರಮದ ಅಧ್ಯಕ್ಷತೆ ವಹಿಸಿ ಮಾತನಾಡಿದ ಕಾಲೇಜಿನ ಪ್ರಾಂಶುಪಾಲ ಮಹದೇವಸ್ವಾಮಿ ಅತಿ ಸಣ್ಣದಾಗಿ ಆರಂಭವಾದ ಕಾಲೇಜಿಗೆ ಇಂದು ಸ್ವಂತ ಕಟ್ಟಡ ನಿರ್ಮಾಣವಾಗುತ್ತಿರುವುದು ಎಲ್ಲಾ ಬೋಧಕ, ಬೋಧಕೇತರ ಹಾಗೂ ವಿದ್ಯಾರ್ಥಿಗಳಿಗೆ ಹರ್ಷ ತಂದಿದೆ. ಉ?ಾ ಯೋಜನೆ ಅಡಿಯಲ್ಲಿ 4 ಕೋಟಿ ಹಣ ಕಟ್ಟಡಕ್ಕೆ ಬಿಡುಗಡೆಯಾಗಿದೆ. ಮುಂದಿನ ದಿನಗಳಲ್ಲಿ ಕಾಲೇಜಿನ ಹಿರಿಮೆಯನ್ನು ಹೆಚ್ಚಿಸಲು ಶ್ರಮವಹಿಸಲಿದ್ದೇವೆ ಎಂದರು.

ಕಾಲೇಜು ಅಭಿವೃದ್ಧಿ ಸಮಿತಿಯ ಸದಸ್ಯರಾದ ರಂಗಸ್ವಾಮಿ ಹೆಬ್ಬಸೂರು, ಇನ್ನಿತರರು ಕಾರ್ಯಕ್ರಮದಲ್ಲಿ ಉಪಸ್ಥಿತರಿದ್ದರು

### ಅಂಬೇಡ್ಕರ್ ಅವರು ಸದಾ ಸ್ಮರಣೀಯರು

ವಿಶ್ವದಲ್ಲಿ ಬೃಹತ್ ಲಿಖಿತ ಸಂವಿಧಾನ ಅಂಗೀಕರಿಸಿದ ನ. 26 ಅನ್ನು ಸಂವಿಧಾನ ದಿನವಾಗಿ ಎಲ್ಲೆಡೆ ಆಚರಿಸಲಾಗುತ್ತಿದೆ. ಶ್ರೇಷ್ಠ ಸಂವಿಧಾನ ಕೊಡುಗೆ ನೀಡಿದ ಡಾ. ಬಿ.ಆರ್. ಅಂಬೇಡ್ಕರ್ ಅವರು ಸದಾ ಸ್ಮರಣ ?ಯರು. ಅವರ ವಿಚಾರಧಾರೆ ಆದರ್ಶಗಳನ್ನು ಪಾಲನೆ ಮಾಡಬೇಕಿದೆ ಎಂದು ತಿಳಿಸಿದರು. ನೂತನ ಕಟ್ಟಡ ದಲ್ಲಿ ಆರಂಭಿಕವಾಗಿ ಕೆಳಂತಸ್ತು ಹಾಗೂ ಮೊದಲನೆ ಮಹಡಿ ನಿರ್ಮಾಣವಾಗಲಿದೆ. ಮುಂದಿನ ಹಂತದಲ್ಲಿ ಬೃಹತ್ ಕಟ್ಟಡವಾಗಿ ನಿರ್ಮಿಸಲು ಯೋಜಿಸಲಾಗುವುದು ಎಂದು ಹೇಳಿದರು.

# ಜಗತ್ತಿನಲ್ಲಿಯೇ ಭಾರತ ಸಂವಿಧಾನ ಶ್ರೇಷ್ಠ: ಸಚಿವ ಕೆ.ವೆಂಕಟೇಶ್

ಚಾಮರಾಜನಗರ, ಸಂವಿಧಾನ ಶಿಲ್ಪಿ ಡಾ. ಬಿ.ಆರ್. ಅಂಬೇಡ್ಕರ್ ಅವರು ರಚಿಸಿದ ಭಾರತ ಸಂವಿಧಾನವು ಜಗತ್ತಿನಲ್ಲಿಯೇ ಅತ್ಯಂತ ಶ್ರೇಷ್ಠ ಸಂವಿಧಾನವಾಗಿದೆ ಎಂದು ಜಿಲ್ಲಾ ಉಸ್ತುವಾರಿ ಸಚಿವ ಕೆ. ವೆಂಕಟೇಶ್ ಹೇಳಿದರು.

ನಗರದ ಪೊಲೀಸ್ ಕವಾಯಿತು ಮೈದಾನದಲ್ಲಿಂದು ಜಿಲ್ಲಾಡಳಿತ, ಜಿಲ್ಲಾ ಪಂಚಾಯತ್ ಹಾಗೂ ಸಮಾಜ ಕಲ್ಯಾಣ ಇಲಾಖೆ ಸಂಯುಕ್ತಾಶ್ರಯದಲ್ಲಿಂದು ನಡೆದ ಸಂವಿಧಾನ ದಿನಾಚರಣೆ ಕಾರ್ಯಕ್ರಮ ಉದ್ಘಾಟಿಸಿ ಮಾತನಾಡಿದರು.

ಭಾರತದ ನಾಗರಿಕರಿಗೆ ಸಾಮಾಜಿಕ, ಆರ್ಥಿಕ, ರಾಜಕೀಯ ನ್ಯಾಯ, ಉಪಾಸನ ಸ್ವಾತಂತ್ರ್ಯ ಸ್ಥಾನಮಾನ ಹಾಗೂ ಅವಕಾಶ ಸಮಾನತೆಯನ್ನು ಸಂವಿಧಾನವು ಕಲ್ಪಿಸಿಕೊಟ್ಟಿದೆ. ಡಾ. ಬಿ.ಆರ್. ಅಂಬೇಡ್ಕರ್ ಅವರು ಭಾರತ ಸಂವಿಧಾನದ ರಚನಾ ಸಮಿತಿಯ ಅಧ್ಯಕ್ಷರಾಗಿದ್ದರು. ಶ್ರೇಷ್ಠ ಸಂವಿಧಾನವನ್ನು ಭಾರತಕ್ಕೆ ನೀಡಿದ ಅಂಬೇಡ್ಕರ್ ಅವರು ಸಂವಿಧಾನದ ಶಿಲ್ಪಿಯಾಗಿದ್ದಾರೆ ಎಂದು ತಿಳಿಸಿದರು. ಸಂವಿಧಾನವು ನಾಗರಿಕರಿಗೆ ಮೂಲಭೂತ ಹಕ್ಕುಗಳನ್ನು ನೀಡಿದೆ. ಹಾಗೆಯೇ ಕರ್ತವ್ಯಗಳ ಬಗ್ಗೆಯು ತಿಳಿಸಿದೆ. ಕಟ್ಟ ಕಡೆಯ ವ್ಯಕ್ತಿಗೂ ಸಮಾನತೆ ಅವಕಾಶವನ್ನು ಪ್ರತಿಪಾದಿಸಲಾಗಿದೆ. ವ್ಯಕ್ತಿಗೌರವ, ದೇಶದ ಏಕತೆ, ಸಮಗ್ರತೆ, ಭ್ರಾತುತ್ವದಂತಹ ಮಹತ್ತರ ಅಂಶಗಳು ಸಂವಿಧಾನದಲ್ಲಿ ಅಡಕವಾಗಿವೆ ಎಂದು ತಿಳಿಸಿದರು.

ಅಧ್ಯಕ್ಷತೆ ವಹಿಸಿ ಮಾತನಾಡಿದ ಎಂ.ಎಸ್.ಐ.ಎಲ್. ಅಧ್ಯಕ್ಷರು ಹಾಗೂ ಶಾಸಕ ಸಿ. ಪುಟ್ಟರಂಗಶೆಟ್ಟಿ ಸರ್ವರಿಗೂ ಸಮಪಾಲು ಸರ್ವರಿಗೂ ಸಮ ಬಾಳು ಎಂಬ ಆಶಯ ಡಾ. ಬಿ.ಆರ್. ಅಂಬೇಡ್ಕರ್ ಅವರು ನೀಡಿದ ಸಂವಿಧಾನದಲ್ಲಿ ಕಾಣಬಹುದಾಗಿದೆ. ಪ್ರಜಾಪ್ರಭುತ್ವ ವ್ಯವಸ್ಥೆಯಲ್ಲಿ ಎಲ್ಲರೂ ಸಮಾನರು, ಯಾವುದೇ ಧರ್ಮ, ಜಾತಿ, ಭಾಷೆಯಾದರು ವಿವಿಧತೆಯಲ್ಲಿ ಏಕತೆ ಎಂದು ಸಂವಿಧಾನವು ತಿಳಿಸುತ್ತದೆ. ಸಂವಿಧಾನದ ಮಹತ್ವವನ್ನು ಪ್ರತಿಯೊಬ್ಬರೂ ಅರಿಯಬೇಕು. ಸರ್ಕಾರಿ ಕಾರ್ಯಕ್ರಮದಲ್ಲಿ ಮೊದಲಿಗೆ ಸಂವಿಧಾನದ ಪೀಠಿಕೆಯನ್ನು ವಾಚನ ಮಾಡಲಾಗುತ್ತಿದೆ ಎಂದರು.

ಶಾಸಕ ಎ.ಆರ್. ಕೃಷ್ಣಮೂರ್ತಿ ಮಾತನಾಡಿ ಭಾರತ ದೇಶದ ಸಂವಿಧಾನ ವಿಶ್ವದಲ್ಲಿಯೇ ಶ್ರೇಷ್ಠವಾದ ಸಂವಿಧಾನವಾಗಿದೆ. ದೇಶದ ಏಕತೆ ಮತ್ತು ಸಮಗ್ರತೆ ಸಂವಿಧಾನದ ಕೊಡುಗೆಯಾಗಿದೆ. ಗೌರವ ಘನತೆಯ ಬಾಳ್ವೆಗೆ



ಸಂವಿಧಾನ ಅವಕಾಶ ಕಲ್ಪಿಸಿದೆ. ಪ್ರತಿಯೊಬ್ಬರು ಮೂಲಭೂತ ಹಕ್ಕು ಕರ್ತವ್ಯಗಳ ಬಗ್ಗೆಯೂ ತಿಳಿದುಕೊಳ್ಳಬೇಕಿದೆ. ಸಂವಿಧಾನ ದಿನಾಚರಣೆ ಅರ್ಥಪೂರ್ಣ ಕಾರ್ಯಕ್ರಮವಾಗಿದೆ ಎಂದರು.

ಸಂವಿಧಾನದ ಆಶಯಗಳ ಕುರಿತು ಮುಖ್ಯ ಭಾಷಣ ಮಾಡಿದ ಭೋಗಾಪುರ ಸರ್ಕಾರಿ ಪ್ರಥಮ ದರ್ಜೆ ವಸತಿ ಕಾಲೇಜಿನ ಪ್ರಾಂಶುಪಾಲ ಡಾ. ಪಿ. ದೇವರಾಜು ನಮ್ಮ ಸಂವಿಧಾನದ ಪ್ರಧಾನ ಆಶಯಗಳನ್ನು ಅರ್ಥ ಮಾಡಿಕೊಳ್ಳಬೇಕಿದೆ. ಎಲ್ಲರಿಗೂ ಸಾಮಾಜಿಕ, ರಾಜಕೀಯ, ಆರ್ಥಿಕ ನ್ಯಾಯ ಸಿಗಬೇಕು ಎಂಬುದು ಸಂವಿಧಾನದ ಮುಖ್ಯ ಆಶಯಗಳಾಗಿವೆ ಎಂದು ತಿಳಿಸಿದರುಕಾರ್ಯಕ್ರಮದಲ್ಲಿ ಶಾಲಾ ಮಕ್ಕಳು ಸಾಲಾಗಿ ನಿಂತು ಸಂವಿಧಾನ ಪೀಠಿಕೆ, ಸಂವಿಧಾನ ಗ್ರಂಥ ಮಾದರಿಯನ್ನು ರಚಿಸಿ ಪ್ರದರ್ಶಿಸುವ ಮೂಲಕ ಗಮನ ಸೆಳೆದರು. ದೇಶದ ವಿವಿಧ ರಾಜ್ಯಗಳ ಕಲೆ, ಪರಂಪರೆ ಬಿಂಬಿಸುವ ವೇಷ ಭೂಷಣ ತೊಟ್ಟ ವಿದ್ಯಾರ್ಥಿಗಳು ಕಾರ್ಯಕ್ರಮದಲ್ಲಿ ಪಾಲ್ಗೊಂಡು ಸಭಿಕರ ಮನಗೆದ್ದರು. ಜಾಥಾದಲ್ಲಿ ಡಾ. ಬಿ.ಆರ್. ಅಂಬೇಡ್ಕರ್ ಅವರ ವೇಷ ಭೂಷಣ ಧರಿಸಿ ವಿದ್ಯಾರ್ಥಿಗಳು ತೆರೆದ ವಾಹನದಲ್ಲಿ ಮೆರವಣಿಗೆಯಲ್ಲಿ ಸಾಗಿದ್ದು ವಿಶೇಷವಾಗಿತ್ತು. ಜಿಲ್ಲಾ ಗ್ಯಾರಂಟಿ ಯೋಜನೆಗಳ ಅನುಷ್ಠಾನ ಪ್ರಾಧಿಕಾರದ ಅಧ್ಯಕ್ಷರಾದ ಹೆಚ್.ವಿ. ಚಂದ್ರು, ಚೂಡಾ ಅಧ್ಯಕ್ಷರಾದ ಮಹಮ್ಮದ್ ಅಸ್ಗರ್ (ಮುನ್ನ), ಜಿಲ್ಲಾಧಿಕಾರಿ ಶಿಲ್ಪಾನಾಗ್, ಜಿಲ್ಲಾ ಪಂಚಾಯತ್ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ ಮೋನಾರೋತ್, ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿ ಬಿ.ಟಿ ಕವಿತಾ ಹಾಗೂ ಇತರೆ ಅಧಿಕಾರಿಗಳು ಹಾಜರಿದ್ದರು.

## ಅಡ್ಡ ಮತದಾನ: ಮುಂದಿನ ಆದೇಶದವರೆಗೂ ಅಮಾನತು

ಕೆ ಆರ್ ಪೇಟೆ ಇತ್ತೀಚೆಗೆ ನೆಡೆದ ಡಿಸಿಸಿ ಬ್ಯಾಂಕ್ ಚುನಾವಣೆಯಲ್ಲಿ ಅಡ್ಡ ಮತದಾನ ಮಾಡಿ ಪರೋಕ್ಷವಾಗಿ ಜೆಡಿಎಸ್ ಅಭ್ಯರ್ಥಿಗೆ ಮತದಾನ ಮಾಡಿದ್ದಾರೆ ಎಂದು ಸಾಬೀತಾದ ಹಿನ್ನಲೆಯಲ್ಲಿ ಪಿಎಲ್ ಡಿ ಬ್ಯಾಂಕ್ ನಿರ್ದೇಶಕ ಹಾಗೂ ಮಾಜಿ ಪುರಸಭಾ ನಿರ್ದೇಶಕ ಚಕ್ರಪಾಣಿ ಹಾಗೂ ಪುರಸಭಾ ಸದಸ್ಯ ಕೆಬಿ ಮಹೇಶ್ ರವರನ್ನು ಮುಂದಿನ ಆದೇಶದ ವರೆಗೂ ಅಮಾನತು ಮಾಡಿ ಜಿಲ್ಲಾ ಕಾಂಗ್ರೆಸ್ ಘಟಕದ ಅಧ್ಯಕ್ಷ ಸಿಡಿ ಗಂಗಾಧರ್ ರವರು ಅಮಾನತು ಮಾಡಿ ಆದೇಶ ಹೊರಡಿಸಿದ್ದಾರೆ ಇಂದು ಪಟ್ಟಣದ ಪ್ರವಾಸಿ ಮಂದಿರದಲ್ಲಿ ನೆಡೆದ ಪತ್ರಿಕಾಗೋಷ್ಠಿಯಲ್ಲಿ ಮಾತಾನಾಡಿದ ಅವರು ಕಳೆದ ಡಿಸಿಸಿ ಬ್ಯಾಂಕ್ ಚುನಾವಣೆಯಲ್ಲಿ ಕಾಂಗ್ರೆಸ್ ಬೆಂಬಲಿತ ಅಭ್ಯರ್ಥಿಯಾಗಿ ಶೀಳನೆರೆ ಅಂಬರೀಶ್ ಸ್ಪರ್ಧಿಸಿದ್ದರು ಕಾಂಗ್ರೆಸ್ ಬೆಂಬಲಿತ ನಿರ್ದೇಶಕನಾಗಿ ಮತದಾನದ ಹಕ್ಕನ್ನು ಹೊಂದಿದ್ದ ಕೆಟಿ ಚಕ್ರಪಾಣಿ ಮತದಾನದ ದಿನ ಕಾಂಗ್ರೆಸ್ ನಾಯಕರ ಮಾತಿಗೂ ಕ್ಯಾರೆ ಎನ್ನದೆ ಜೆಡಿಎಸ್ ಅಭ್ಯರ್ಥಿ ದರಣೀಶ್ ರವರಿಗೆ ಮತದಾನ ಮಾಡಿರುವುದಾಗಿ ಆರೋಪಿಸಿದ ಅವರು ಪಕ್ಷದ ಸಿದ್ದಾಂತಕ್ಕೆ ವಿರುದ್ದವಾಗಿ ನೆಡೆದುಕೊಂಡಿದ್ದು ಹಾಗೂ ಜನತಾದಳ ಅಭ್ಯರ್ಥಿಗೆ ಮತ ನೀಡುವಂತೆ ಹಲವರಿಗೆ ಹೇಳಿರುವುದು ವರಿಷ್ಠರ ಗಮನಕ್ಕೆ ಬಂದಿರುವುದರಿಂದ ಕೆ,ಟಿ ಚಕ್ರಪಾಣಿ ಮತ್ತು ಕೆ ಬಿ ಮಹೇಶ್ ರವರನ್ನು ಈ ಕೂಡಲೆ ಮುಂದಿನ ಆದೇಶದವರೆಗೂ ಅಮಾನತು ಮಾಡಿರುವುದಾಗಿ ತಿಳಿಸಿದರು

ಶಾಸಕರಿಗೆ ಟಾಂಗ್ ನೀಡಿದ ಕೈಮಗ್ಗ ಅಧ್ಯಕ್ಷ ನಾಗೇಂದ್ರಕುಮಾರ್



ಟಿಎಪಿಸಿಎಂಎಸ್ ಚುನಾವಣೆಯಲ್ಲಿ ಜೆಡಿಎಸ್ ಜಯಬೇರಿ ಬಾರಿಸಿದೆ ರಾಜಕೀಯದಲ್ಲಿ ಸೋಲು ಗೆಲುವು ಸಾಮಾನ್ಯವಾಗಿದೆ ಕಾಂಗ್ರೆಸ್ ಪಕ್ಷವು ಗೆದ್ದಾಗ ಬೀಗುವುದು ಸೋತಾಗ ಕುಗ್ಗುವುದು ಯಾರನ್ನು ಹೀಯಾಳಿಸುವ ಕೆಲಸವನ್ನು ಕಾಂಗ್ರೆಸ್ ಪಕ್ಷ ಮಾಡುವುದಿಲ್ಲ ಡಿಸಿಸಿ ಬ್ಯಾಂಕ್ ಚುನಾವಣೆಯಲ್ಲಿ ಸೋಲಾಗಿದೆ ಅದನ್ನು ಸ್ವೀಕರಿಸಬೇಕು ಎಂದು ರಾಜ್ಯ ಕೈಮಗ್ಗ ನಿಗಮದ ಅಧ್ಯಕ್ಷ ಐಪನಹಳ್ಳಿ ನಾಗೇಂದ್ರಕುಮಾರ್ ಶಾಸಕ ಹೆಚ್ ಟಿ ಮಂಜುರವರಿಗೆ ಟಾಂಗ್ ನೀಡಿದರು ಗೋಷ್ಟಿಯಲ್ಲಿ ಡಿಸಿಸಿ ಬ್ಯಾಂಕ್ ನಿರ್ದೇಶಕ ಶೀಳನೆರೆ ಅಂಬರೀಶ್, ತಾಲ್ಲೂಕು ಪಿಎಲ್ ಡಿ ಬ್ಯಾಂಕ್ ಅಧ್ಯಕ್ಷ ಕಬ್ಬಲಗೆರೆ ಪುಟ್ಟಸ್ವಾಮಿಗೌಡ, ಮಂಡ್ಯ ಜಿಲ್ಲಾ ಪ್ರಧಾನ ಕಾರ್ಯದರ್ಶಿ ಅಕ್ಕಿಹೆಬ್ಬಾಳು ಟಿ.ಎನ್.ದಿವಾಕರ್ ತಾಲ್ಲೋಕು ಗ್ಯಾರೆಂಟಿ ಯೋಜನೆಗಳ ಅನುಷ್ಟಾನ ಸಮಿತಿಯ ಅಧ್ಯಕ್ಷ ಅಗ್ರಹಾರಬಾಚಹಳ್ಳಿ ಎ.ಬಿ.ಕುಮಾರ್,ತಾಲ್ಲೋಕು ಕಾಂಗ್ರೆಸ್ ಉಸ್ತುವಾರಿ ಚಿನಕುರಳಿ ರಮೇಶ್,ಜಿಲ್ಲಾ ಕುರುಬರ ಸಂಘದ ನಿರ್ದೇಶಕ ಪ್ರಸನ್ನಕುಮಾರ್, ತಾಲ್ಲೂಕು ಕೆಡಿಪಿ ನಿರ್ದೇಶಕರಾದ ಬೂಕನಕೆರೆ ಮಲ್ಲಿಕಾರ್ಜುನ್, ಇಲ್ಯಾಸ್ ಪಾಷ,ಯುವ ಉಪಸ್ಥಿತರಿದ್ದರು

## ವಾಣಿವಿಲಾಸದಲ್ಲಿ ಕನ್ನಡ ರಾಜ್ಯೋತ್ಸವ ಆಚರಣೆ

ಮೈಸೂರು: ಆಡಳಿತದಲ್ಲಿ ಪ್ರತಿಹಂತದಲ್ಲಿ ಕಡ್ಡಾಯವಾಗಿ ಕನ್ನಡ ಬಳಸಬೇಕು ಎಂದು ನಗರಪಾಲಿಕೆ ಆಡಳಿತಾಧಿಕಾರಿಯೂ ಆದ ಪ್ರಾದೇಶಿಕ ಆಯುಕ್ತ ಮಿತೇಶ್ ಪಾಟೀಲ್ ಹೇಳಿದರು.

ವಾಣಿವಿಲಾಸ ನೀರು ಸರಬರಾಜು ಕಾರ್ಯಾಲಯದಲ್ಲಿ ಬುಧವಾರ ಏರ್ಪಡಿಸಿದ್ದ ಕನ್ನಡ ರಾಜ್ಯೋತ್ಸವವನ್ನು ಉದ್ಘಾಟಿಸಿ ಮಾತನಾಡಿದ ಅವರು, ಎರಡೂವರೆ ಸಾವಿರ ವರ್ಷಗಳ ಇತಿಹಾಸವಿರುವ ಕನ್ನಡ ಶ್ರೀಮಂತ ಭಾಷೆ. ಇದನ್ನು ಉಳಿಸಿ, ಬೆಳೆಸುವುದು ಪ್ರತಿಯೊಬ್ಬ ಕನ್ನಡಿಗನ ಕರ್ತವ್ಯ ಎಂದರು. ದೇಶದ ಬೇರೆ ಬೇರೆ ರಾಜ್ಯಗಳ ಹಾಗೂ ದೇಶಗಳ ಜನರು ಕರ್ನಾಟಕಕ್ಕೆ ಬರುತ್ತಾರೆ. ಅದರಲ್ಲೂ ಬೆಂಗಳೂರು, ಮೈಸೂರಿಗೆ ಬರುತ್ತಾರೆ. ಅವರಿಗೆಲ್ಲಾ ಕನ್ನಡ ಕಲಿಸಬೇಕು. ಆ ಮೂಲಕ ಕನ್ನಡವನ್ನು ಪಸರಿಸುವ ಕೆಲಸ ಮಾಡಬೇಕು ಎಂದು ಅವರು ಕಿವಿಮಾತು ಹೇಳಿದರು. ನಾನು ಐಎಎಸ್ ಪರೀಕ್ಷೆಯಲ್ಲಿ ಮೊದಲು ಭೂಗೋಳಶಾಸ್ತ್ರ ತೆಗೆದುಕೊಳ್ಳಲು ಬಯಸಿದೆ. ಆದರೆ ನಂತರ ಕನ್ನಡ ಸಾಹಿತ್ಯ ಆಯ್ಕೆ ಮಾಡಿಕೊಂಡೆ. ಇದರಿಂದಾಗಿ ನನಗೆ ಹೆಚ್ಚು ಅಂಕಗಳು ಬಂದು ಐಎಎಸ್‌ಗೆ ಎರಡನೇ ಪ್ರಯತ್ನದಲ್ಲಿ ಆಯ್ಕೆಯಾಗಲು ಸಾಧ್ಯವಾಯಿತು. ಕನ್ನಡಕ್ಕೆ ಆ ಶಕ್ತಿ ಇದೆ ಎಂಬುದನ್ನು ಅರಿತುಕೊಳ್ಳಿ ಎಂದರು. ನಗರಪಾಲಿಕೆ ಆಯುಕ್ತ ಶೇಖ್ ತನ್ವೀರ್ ಆಸಿಫ್ ಮಾತನಾಡಿ, ಕನ್ನಡ ಭಾಷೆ ನಮ್ಮೆಲ್ಲರ ಉಸಿರು. ಅದನ್ನು ಮಾತನಾಡುವ ಮೂಲಕವೇ ಅನುಭವಿಸಬೇಕು. ಕನ್ನಡದ ವಿಷಯದಲ್ಲಿ ಇನ್ನೊಬ್ಬರನ್ನು ದೂರುವ



ಬದಲು ನಾನೇನು ಮಾಡಿದ್ದೇನೆ ಎಂದು ಆತ್ಮಾವಲೋಕನ ಮಾಡಿಕೊಳ್ಳಬೇಕು. ಆಡಳಿತದಲ್ಲಿ ಕನ್ನಡ ಸಂಪೂರ್ಣವಾಗಿ ಅನುಷ್ಠಾನ ಆಗಬೇಕು ಎಂದರು. ರಾಜ್ಯ ಮಹಿಳಾ ಆಯೋಗದ ಮಾಜಿ ಅಧ್ಯಕ್ಷೆ ಮಂಜುಳಾ ಮಾನಸ ಮಾತನಾಡಿ, ಪ್ರತಿಯೊಬ್ಬರಿಗೂ ಸಾಂಸ್ಕೃತಿಕ ಮನಸ್ಥಿತಿ ಮುಖ್ಯ ಎಂದರು. ಕನ್ನಡಕ್ಕೆ ಅತಿಹೆಚ್ಚು ಜ್ಞಾನಪೀಠ ಪ್ರಶಸ್ತಿಗಳು ಸಂದಿವೆ ಎಂದರೇ ಅದು ಎಷ್ಟು ಮೌಲ್ಯಯುತವಾದುದು ಎಂದು ತಿಳಿಯಬೇಕು ಎಂದು ಹೇಳಿದರು. ಪಾಲಿಕೆ ಉಪ ಆಯುಕ್ತ ದಾಸೇಗೌಡ, ಮತ್ತೊರ್ವ ಉಪ ಆಯುಕ್ತ ಜಿ.ಎಸ್. ಸೋಮಶೇಖರ್ ಮಾತನಾಡಿದರು. ಈ ಬಾರಿಯ ರಾಜ್ಯ ಸರ್ಕಾರದ ರಾಜ್ಯೋತ್ಸವ ಪ್ರಶಸ್ತಿ ಪುರಸ್ಕೃತರಾದ ಹಿರಿಯ ಪತ್ರಕರ್ತ ಅಂಶಿ ಪ್ರಸನ್ನಕುಮಾರ್, ಈ ಮಾಸಾಂತ್ಯ ನಿವೃತ್ತರಾಗುತ್ತಿರುವ ವಲಯ ಆಯುಕ್ತ ವೆಂಕಟರಾಮ್ ಅವರನ್ನು ಸನ್ಮಾನಿಸಲಾಯಿತು. ಶಿಲ್ಪಾ, ಮಂಜು, ಎಇಇ ಟಿ.ಜಿ. ನಾಗರಾಜೇಗೌಡ, ಎಇಇ ಎಸ್.ಎಲ್. ರವಿಕುಮಾರ್, ಎಇ ಬಿ.ಎಲ್.ಗಿರೀಶ್ ಇನ್ನಿತರರು ಇದ್ದರು.

## ಸಂವಿಧಾನ ದಿನ ಅರ್ಥಪೂರ್ಣ ಆಚರಣೆ



ಗುಂಡ್ಲುಪೇಟೆ: ಪಟ್ಟಣದ ಪುರಸಭೆ ಸಭಾ ಭವನದಲ್ಲಿ ಸಂವಿಧಾನ ದಿನ ಆಚರಣೆ ಮಾಡಲಾಯಿತು.

ಪುರಸಭೆ ಮುಖ್ಯಾಧಿಕಾರಿ ಶರವಣ ಸಂವಿಧಾನ ಪೀಠಿಕೆ ಓದುವ ಮೂಲಕ ಸಂವಿಧಾನ ಶಿಲ್ಪಿ ಡಾ.ಬಿ.ಆರ್.ಅಂಬೇಡ್ಕರ್ ಗೆ ನಮನ ಸಲ್ಲಿಸಿ ಮಾತನಾಡಿ, ಅಂಬೇಡ್ಕರ್ ಸಂವಿಧಾನ ಇಡೀ ಪ್ರಪಂಚಕ್ಕೆ ಮಾದರಿಯಾಗಿದೆ. ಸರ್ವ ಧರ್ಮ, ಜಾತಿಗೂ ಸಮಾನವಾದ ಅವಕಾಶ ಕಲ್ಪಿಸುವ ಮೂಲಕ ಧೀನ ದಲಿತರು, ಹಿಂದುಳಿದ ವರ್ಗದವರು ಏಳಿಗೆಗೆ ಅಂಬೇಡ್ಕರ್ ದೊಡ್ಡ ಕೊಡುಗೆ ಕೊಟ್ಟಿದ್ದಾರೆ ಎಂದು ತಿಳಿಸಿದರು. ಡಾ.ಬಿ.ಆರ್.ಅಂಬೇಡ್ಕರ್ ಸಂವಿಧಾನದಲ್ಲಿ ಉತ್ತಮ ಕಾನೂನುಗಳನ್ನು ರಚನೆ ಮಾಡಿ ಮಹಿಳೆಯರಿಗೆ ಪ್ರಾಧಾನ್ಯತೆ ನೀಡಿದ್ದಾರೆ. ಈ ಕಾರಣದಿಂದಲೇ ಮಹಿಳೆಯರು ರಾಷ್ಟ್ರಪತಿ, ಜಿಲ್ಲಾಧಿಕಾರಿಗಳಾಗಲು ಸಾಧ್ಯವಾಯಿತು. ಜೊತೆಗೆ ಮತದಾನದ ಹಕ್ಕು ನೀಡುವ ಮೂಲಕ ಉತ್ತಮ ವ್ಯಕ್ತಿಗಳನ್ನು ಆಯ್ಕೆ ಮಾಡುವ ಸ್ವಾತಂತ್ರ್ಯವನ್ನು ಪ್ರತಿಯೊಬ್ಬ ನಾಗರೀಕನಿಗೂ ನೀಡಿದ್ದಾರೆ ಎಂದು ಶ್ಲಾಘಿಸಿದರು.

ಈ ಸಂದರ್ಭದಲ್ಲಿ ಆರೋಗ್ಯಾಧಿಕಾರಿ ಪರಮೇಶ್ವರಪ್ಪ, ಇಂಜಿನಿಯರ್ ಮಹೇಶ್, ಪರಿಸರ ಅಭಿಯಂತರ ಮಹೇಶ್, ಮೇಸ್ತ್ರಿ ಮೂರ್ತಿ ಸೇರಿದಂತೆ ಪುರಸಭೆ ಸಿಬ್ಬಂದಿ ವರ್ಗದವರು ಹಾಗೂ ಪೌರ ಕಾರ್ಮಿಕರು ಹಾಜರಿದ್ದರು.

**ಸರ್ ಎಂ. ವಿಶ್ವೇಶ್ವರಯ್ಯ ಆಟೋ ಚಾಲಕರ ಮತ್ತು ಮಾಲೀಕರ ಸಂಘದಿಂದ ಆಯೋಜನೆ**

## ಆಟೋ ಚಾಲಕರಿಂದ ಕನ್ನಡ ರಾಜ್ಯೋತ್ಸವ

ಚಾಮರಾಜನಗರ: ನಗರದ ರೈಲ್ವೆ ಬಡಾವಣೆಯಲ್ಲಿರುವ ಸರ್ ಎಂ.ವಿಶ್ವೇಶ್ವರಯ್ಯ ಆಟೋ ಚಾಲಕರ ಮತ್ತು ಮಾಲೀಕರ ಸಂಘದ ವತಿಯಿಂದ ಕನ್ನಡ ರಾಜ್ಯೋತ್ಸವ ಆಚರಿಸಲಾಯಿತು.

ಕೇಂದ್ರ ಪರಿಹಾರ ಸಮಿತಿ ಮಾಜಿ ಅಧ್ಯಕ್ಷ ಎಂ. ರಾಮಚಂದ್ರ ಧ್ವಜಾರೋಹಣ ನೆರವೇರಿಸಿ ಮಾತನಾಡಿ, ನಿಜವಾದ ಕನ್ನಡ ಪ್ರೇಮಿಗಳು ಆಟೋ ಚಾಲಕರಾಗಿದ್ದು, ತಮ್ಮ ಆಟೋಗಳಲ್ಲಿ ಕನ್ನಡ ಬರಹ, ಕನ್ನಡ ಭಾವುಟ, ಕನ್ನಡ ಗೀತೆಗಳನ್ನು ಹಾಕುವ ಮೂಲಕ ಕನ್ನಡ ಪ್ರೇಮ ಮೂಡಿಸುವ ಕೆಲಸವನ್ನು ನಿಸ್ವಾರ್ಥತೆಯಿಂದ ಮಾಡುತ್ತಿದ್ದಾರೆ. ಕನ್ನಡ ರಾಜ್ಯೋತ್ಸವದ ಶುಭಾಶಯ ಹೇಳಿದರು. ಆಟೋ ಚಾಲಕರು ತಮ್ಮ ಮಕ್ಕಳ ವಿದ್ಯಾಭ್ಯಾಸಕ್ಕೆ ಒತ್ತು ನೀಡಬೇಕು. ಆಟೋ ಚಾಲನೆ ಪರವಾನಗಿ ಪಡೆದುಕೊಳ್ಳಬೇಕು.ಸಮವಸ್ತ್ರ ಧರಿಸಬೇಕು. ಗ್ರಾಹಕರಿಗೆ ಉತ್ತಮ ಸೇವೆ ಕೊಡಬೇಕು ಎಂದರು.

ನಾಯಕ ಜನಾಂಗದ ಮುಖಂಡ ಕೆಲ್ಲಂಬಳ್ಳಿ ಸೋಮನಾಯಕ ಭುವನೇಶ್ವರಿ ಭಾವಚಿತ್ರಕ್ಕೆ ಪುಷ್ಪಾರ್ಚನೆ ಮಾಡಿ ಮಾತನಾಡಿ, ಕನ್ನಡ ಬೆಳವಣಿಯಲ್ಲಿ ಆಟೋ



ಚಾಲಕರ ಪಾತ್ರ ಅಪಾರವಾಗಿದೆ. ಆಟೋ ಚಾಲನೆ ವೃತ್ತಿಯು ಉತ್ತಮವಾಗಿದೆ. ಮದ್ಯಸೇವನೆಯಿಂದ ದೂರ ವಿದ್ದರೆ ನಿಮ್ಮ ಜೀವನ ಉತ್ತಮವಾಗುತ್ತದೆ ಎಂದರು.

ಬಿಜೆಪಿ ಎಸ್ ಟಿ ಮೋರ್ಚಾದ ಉಪಾಧ್ಯಕ್ಷ ಬುಲೆಟ್ ಚಂದ್ರು ಮಾತನಾಡಿ, ಆಟೋ ಚಾಲಕರಿಗೆ ಮೂಲಸೌಕರ್ಯ ಒದಗಿಸಬೇಕು ಒಂದು ಕ್ವಾಟ್ರಸ್ ನಿರ್ಮಾಣ ಮಾಡಿಕೊಡಬೇಕು ಎಂದು ರಾಜ್ಯ ಸರ್ಕಾರವನ್ನು ಒತ್ತಾಯಿಸಿದರು. ನಗರಸಭಾ ಸದಸ್ಯ ಶಿವರಾಜ್, ಮಾಜಿ ಅಧ್ಯಕ್ಷ ಸುರೇಶ್ ನಾಯಕ, ಮಾಜಿ ಸದಸ್ಯ ಚೆಂಗುಮಣಿ, ದಲಿತ ಮುಖಂಡ ಸಿ.ಎಂ.ಕೃಷ್ಣಮೂರ್ತಿ, ಬಿಜೆಪಿ ಮಾಜಿ ಅಧ್ಯಕ್ಷ ಆರ್ ಸುಂದರ್, ಎಸ್ ಟಿ ಮೋರ್ಚಾದ ರಾಜ್ಯ ಕಾರ್ಯದರ್ಶಿ ಪಾಳ್ಯ ಜಯಸುಂದರ್, ಜಿಲ್ಲಾಧ್ಯಕ್ಷ ಚಂದ್ರಶೇಖರ್ ಮಾತನಾಡಿದರು. ಕಾರ್ಯಕ್ರಮದಲ್ಲಿ ಯ.ರಾಜುನಾಯಕ, ವರದನಾಯಕ, ಆಟೋ ಮಂಜುನಾಥ್, ದಡದಹಳ್ಳಿ ಶಂಕರ್, ಬುದ್ದ ಮಹೇಶ್, ಕಾವಲುಪಡೆ ಪರಶಿವಮೂರ್ತಿ,ಮಲ್ಲೇಶ್ , ಸಂಘದ ಅಧ್ಯಕ್ಷ ಮಹೇಶ್, ನಾಗೇಶ್, ವಿಶ್ವ ಮಾಸ್ಟರ್, ಪ್ರಶಾಂತ್, ಮಂಜುಭಕ್ತ, ಕಿರಣ್, ಹೇಮಣ್ಣ ಇದ್ದರು.